ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 114

11-10-2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 114

## ಐಟಿ ಹಬ್ ಕನಸು ನನಸಾಗಲಿದೆ: ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ :** ದಾವಣಗೆರೆ ಜನರ ಸಾಫ್ಟ್‌ವೇರ್ ಪಾರ್ಕ್ ಕನಸು ಕೆಲವೇ ದಿನಗಳಲ್ಲಿ ನನಸಾಗಲಿದೆ. ದಾವಣಗರೆಯಲ್ಲಿ ಇಂಜನಿಯರಿಂಗ್ ಮಾಡಿದವರು ಉದ್ಯೋಗಕ್ಕಾಗಿ ಬೆಂಗಳೂರು ಅಥವಾ ನೆರೆ ಜಿಲ್ಲೆ, ರಾಜ್ಯ ಹಾಗೂ ದೇಶಗಳ ಅವಲಂಭನೆ ಇಲ್ಲದೆ ಜಿಲ್ಲೆಯಲ್ಲಿಯೇ ದುಡಿಯುವ ದಿನಗಳು ಸಮೀಪಿಸುತ್ತಿವೆ ಎಂದು ಸಂಸದರಾದ ಡಾ: ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಅವರು ಶುಕ್ರವಾರ ಜಿಲ್ಲಾಡಳಿತ, ಸಾಫ್ಟ್‌ವೇರ್ ಟೆಕ್ನಾಲಜಿ ಆಫ್ ಇಂಡಿಯಾ ಬೆಂಗಳೂರು, ವಿಷನ್ ದಾವಣಗೆರೆ ಹಾಗೂ ದಾವಣಗೆರೆಯ ಐಟಿಬಿಟಿ ಸಂಸ್ಥೆಗಳ ಸಂಯುಕ್ತಾಶಯದಲ್ಲಿ ಬಿಐಟಿ ಇಂಜಿನಿಯರಿಂಗ್ ಕಾಲೇಜಿನ ಎಸ್.ಎಸ್. ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸೆಂಟರ್ ಆಫ್ ಎಕ್ಸಲೆನ್ಸ್ ಮೂಲಕ ನಾವೀನ್ಯತೆಗೆ ಅವರು ಚಾಲನೆ ನೀಡಲು ಕೌಶಲ್ಯ ಅಭಿವೃದ್ಧಿಯನ್ನು ಹೆಚ್ಚಿಸಲು ಮತ್ತು ದಾವಣಗೆರೆಯ ಐಟಿಬಿಟಿ ಕ್ಷೇತ್ರವನ್ನು ಜಾಗತಿಕ ಮಟ್ಟದಲ್ಲಿ ಮೇರು ಪತದಲ್ಲಿಡಲು ವಿನ್ಯಾಸಗೊಳ್ಳಲಾಗಿತ್ತಿದೆ. ಜಿಲ್ಲೆಯಲ್ಲಿ ಐಟಿ ಪಾರ್ಕ್ ಮಾಡಲು ಪೂರಕ ವಾತಾವರಣವಿದೆ. ಅದನ್ನು ನಾವೆಲ್ಲಾ ಸರಿಯಾದ ರೀತಿ ಬಳಕೆ ಮಾಡಿಕೊಳ್ಳಬೇಕು. ಟೈಯರ್ 2 ಅಥವಾ 3 ಜಿಲ್ಲೆಗಳಲ್ಲಿ ಐಟಿ ಹಬ್ ಸ್ಥಾಪಿಸಿದಲ್ಲಿ ಜಿಲ್ಲೆಯು ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಜಿಲ್ಲೆಯಲ್ಲಿ ಸಾಫ್ಟ್‌ವೇರ್ ಪಾರ್ಕ್ ಜೊತೆಗೆ 25 ರಿಂದ 30 ಎಕರೆ ವಿಸ್ತೀರ್ಣದಲ್ಲಿ ಅತೀ ಶೀಘ್ರದಲ್ಲಿಯೇ ಡಾಟಾ ಸೆಂಟರ್ ಸ್ಥಾಪಿಸಲಾಗುವುದು ಎಂದರು.

ಲೋಕಸಭಾ ಚುನಾವಣಾ ಸಮಯದಲ್ಲಿ ಚುನಾವಣಾ ಪ್ರಚಾರಕ್ಕೆ ಹೋದಾಗ ಮತದಾರರು ನಮ್ಮ ಮಕ್ಕಳು ಬೇರೆ ಊರುಗಳಲ್ಲಿ ಉದ್ಯೋಗ ಮಾಡುತ್ತಿದ್ದು ಇಲ್ಲಿ ಐಟಿ ಪಾರ್ಕ್ ಮಾಡುವಂತೆ ಒತ್ತಾಯಿಸಿದ್ದರು. ಅದರ ಫಲವೇ ಇಂದು




ದಾವಣಗೆರೆಯಲ್ಲಿ ಐಟಿ ಪಾರ್ಕ್ ಸ್ಥಾಪನೆಗೊಳ್ಳುತ್ತಿದೆ. ಲೋಕಸಭೆಯ ಪ್ರಶ್ನಾವಳಿ ಸಂದರ್ಭದಲ್ಲಿ ನಾನು ದಾವಣಗೆರೆಗೆ ಐಟಿ ಪಾರ್ಕ್ ಸ್ಥಾಪನೆ ಬಗ್ಗೆ ಪ್ರಸ್ತಾಪಿಸಿದ್ದೆ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕೆ ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ರಾಜ್ಯ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿ ಈಗಾಗಲೆ ಐಟಿ ಹಬ್ ಸ್ಥಾಪಿಸಲು ಪ್ರಸ್ತಾಪಿಸಲಾಗಿದ್ದು ಅದನ್ನು ನೀವು ಅಭಿವೃದ್ಧಿಪಡಿಸಿಕೊಂಡು ಹೋಗುವಂತೆ ನಾಲ್ಕು ಪುಟಗಳ ಮಾಹಿತಿಯನ್ನು ನೀಡಿದರು ಎಂದರು.

ಮುಂದಿನ ಆರು ತಿಂಗಳಲ್ಲಿ ಸ್ಥಳೀಯ ಕಾಲೇಜುಗಳ ವಿದ್ಯಾರ್ಥಿಗಳಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಗಾರ ಆಯೋಜಿಸಲಾಗುವುದು. ಇದೇ ಅಕ್ಟೋಬರ್ 15, 16 ರಂದು ಕೃತಕ ಬುದ್ಧಿಮತ್ತೆ (ಎಐ), ಬಿಗ್ ಡೇಟಾ, ಎಡಿಎ ಟೂಲ್ಸ್, ಇಂಟರ್‌ನೆಟ್ ಆಫ್ ಎಥಿಕಲ್ ಥಿಂಗ್ಸ್ , ಡಿಸೈನ್ ಐಪಿಗಳು ರೊಬೋಟಿಕ್ಸ್ ಇನ್ ಎಜುಕೇಷನ್ ಇಂಡಸ್ಟ್ರೀ ಹಾರ್ಡ್‌ವೇರ್ ಮತ್ತು ಸಾಫ್ಟ್‌ವೇರ್ ತಂತ್ರಾಂಶಗಳ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಹಮ್ಮಿಕೊಂಡಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

ದಾವಣಗೆರೆಯಲ್ಲಿ ಐಟಿ ಹಬ್ ಮಾಡುವ ಉದ್ದೇಶದಿಂದ ಅಧಿಕಾರಿಗಳ ತಂಡದೊಂದಿಗೆ ಬೆಂಗಳೂರಿನ ಐಟಿಬಿಟಿ ಕಂಪನಿಗಳಿಗೆ ಭೇಟಿ ನೀಡಿ ಅಲ್ಲಿನ ಮೂಲಭೂತ ಸೌಕರ್ಯ, ಅವಶ್ಯಕತೆ ಬಗ್ಗೆ ಮಾಹಿತಿಯನ್ನು ಪಡೆಯಲಾಯಿತು. ಅದೇ ಉದ್ದೇಶದಿಂದ ದಾವಣಗೆರೆಯಲ್ಲಿ ಮೊದಲಿಗೆ ಎರಡು ಎಕರೆ ಜಾಗವನ್ನು ಗುರುತಿಸಿ ಇಲ್ಲಿ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಮೀಟಿಂಗ್ ಹಾಲ್, ಕೌಶಲ್ಯಾಭಿವೃದ್ಧಿ ತರಬೇತಿ ಕೇಂದ್ರದೊಂದಿಗೆ ಎಸ್‌ಟಿಪಿಐ ಯನ್ನು ಸ್ಥಾಪಿಸಲಾಯಿತು.

ಕೈಗಾರಿಕೆ, ಸಂಶೋಧನೆ ಮತ್ತು ಅಭಿವೃದ್ಧಿ ಮತ್ತು ನವೋದ್ಯಮ ಪರಿಸರ ವ್ಯವಸ್ಥೆ ನಿರ್ಮಾಣ ಮಾಡಿ ತಂತ್ರಜ್ಞಾನ ದೃಶ್ಯವನ್ನು ಅಭಿವೃದ್ಧಿಪಡಿಸುವ ಸೆಂಟರ್ ಆಫ್ ಎಕ್ಸಲೆನ್ಸ್‌ಗಳ ಮೂಲಕ ಜಿಲ್ಲೆಯಲ್ಲಿ ಸ್ಟಾರ್ಟ್ ಆಪ್ ಸ್ಥಾಪಿಸುವುದು. ಇಂತಹ ಸಂಸ್ಥೆಗಳ ಮೂಲಕ ಉದ್ಯಮದ ತಜ್ಞರು, ಶೈಕ್ಷಣಿಕ ಸಂಶೋಧಕರು, ಸರ್ಕಾರಿ ಸಂಸ್ಥೆಗಳು ಮತ್ತು ನವೋದ್ಯಮಿಗಳನ್ನು ಭೇಟಿ ಮಾಡಿ ದಾವಣಗೆರೆ ಐಟಿ ಹಬ್‌ಗೆ ಅವಶ್ಯವಿರುವ ಸೌಕರ್ಯಗಳನ್ನು ಪಡೆಯಲು ಸಲಹೆ ಸೂಚನೆಗಳನ್ನು ಪಡೆಯಲಾಗಿದೆ ಎಂದರು.

ಜಿಲ್ಲೆಯಲ್ಲಿ ಪ್ರತಿ ವರ್ಷ ಸಾವಿರಾರು ವಿದ್ಯಾರ್ಥಿಗಳು ಇಂಜಿನಿಯರಿಂಗ್ ಪದವಿ ಪಡೆಯುತ್ತಾರೆ. ಇಲ್ಲಿ ವ್ಯಾಸಂಗ ಮಾಡಿದಂತಹ ಅನೇಕ ನಿರುದ್ಯೋಗಿಗಳಿಗೆ ಕೌಶಲ್ಯ ಮತ್ತು ಭಾಷೆಯ ತೊಂದರೆ ಉಂಟಾಗುತ್ತಿದೆ. ಅಂತಹ ಯಾವುದೇ ತೊಂದರೆಗಳು ವಿದ್ಯಾರ್ಥಿಗಳಿಗೆ ಆಗದಂತೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಸಹ ನೀಡಲಾಗುವುದು ಎಂದರು.

ಕೃತಿಕ ಬುದ್ದಿಮತ್ತೆಯಿಂದ ಕೃಷಿ, ಆರೋಗ್ಯ, ಸರ್ಕಾರಿ ಕಚೇರಿಗಳು ಸೇರಿದಂತೆ ಎಲ್ಲಾ ಕ್ಷೇತ್ರದಲ್ಲಿ ಬಳಕೆಯಾಗುತ್ತಿದೆ. ಇಂಟೆಲ್ ಕಂಪನಿಯಿಂದ ಈಗಾಗಲೇ ಜಿಲ್ಲೆಯಲ್ಲಿ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುತ್ತಿದೆ. ಇಂತಹ 35 ಕ್ಕೂ ಹೆಚ್ಚು ಹೆಸರಾಂತ ಕಂಪನಿಗಳು ದಾವಣಗೆರೆಯಲ್ಲಿ ಘಟಕ ತೆರೆಯಲು ಉತ್ಸುಕತೆ ತೋರುತ್ತಿವೆ ಎಂದರು.

ಎಸ್‌ಟಿಪಿಐ ನಿರ್ದೇಶಕರಾದ ಸಂಜಯ್ ತ್ಯಾಗಿಯವರು ಮಾತನಾಡಿ ದಾವಣಗೆರೆಯಲ್ಲಿ ಐಟಿ ಪಾರ್ಕ್ ಮಾಡಲು ನಾವು ಉತ್ಸಕರಾಗಿದ್ದೇವೆ. ಇಲ್ಲಿನ ವಾತಾವರಣವು ಸಹ ಅದಕ್ಕೆ ಪೂರಕವಾಗಿದೆ. ಇಲ್ಲಿ ಅನೇಕ ಕಂಪನಿಗಳು ಘಟಕ ಪ್ರಾರಂಭಿಸಲು ಉತ್ಸಾಕರಾಗಿದ್ದಾರೆ. ಈಗಾಗಲೇ ಅನೇಕ ಸುತ್ತಿನ ಮಾತುಕತೆಯಾಗಿದೆ, ಇದರ ಪ್ರಯೋಜನೆಯನ್ನು ಪಡೆದುಕೊಳ್ಳುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ಮಾತನಾಡಿ, ದಾವಣಗೆರೆ ಸಾಫ್ಟ್‌ವೇರ್ ಪಾರ್ಕ್ ಮಾಡಲು ಲೋಕಸಭಾ ಸದಸ್ಯರು, ಜಿಲ್ಲಾಧಿಕಾರಿಗಳು ಸೇರಿದಂತೆ ಒಂದು ವಿಷನ್ ಟೀಮ್ ಮಾಡಲಾಗಿದೆ. ಅದರ ಫಲವೇ ಸಾಫ್ಟ್‌ವೇರ್ ಪಾರ್ಕ್ ದಾವಣಗೆರೆಯಲ್ಲಿ ಆಗಲು ಸಾಧ್ಯವಾಯಿತು. ವಿಷನ್ ದಾವಣಗೆರೆ ಬಗ್ಗೆ ಫೇಸ್‌ಬುಕ್ ಸೇರಿದಂತೆ ಎಲ್ಲಾ ಸಾಮಾಜಿಕ ಜಾಲತಾಣಗಳಲ್ಲಿ ಸಾಫ್ಟ್‌ವೇರ್ ಪಾರ್ಕ್ ಬಗ್ಗೆ ಮಾಹಿತಿ ಇದ್ದು, ಇದಕ್ಕೆ ಸಲಹೆ ಸೂಚನೆಗಳನ್ನು ನೀಡುವಂತೆ ತಿಳಿಸಿದರು. ವಿಷನ್ ಟೀಂ ನಾಸಿಕ್ ಮತ್ತು ಚೆನ್ನೈನ ಡಾಟಾ ಸೆಂಟರ್‌ಗೆ ಭೇಟಿ ನೀಡಲಿವೆ. ಎಸ್‌ಟಿಪಿಐ ಮತ್ತು ಕಿಯೋನಿಕ್ಸ್ ಸಂಸ್ಥೆಗಳಿಗೆ ತಲಾ ನಾಲ್ಕು ಎಕರೆ ಜಮೀನು ಮಂಜೂರು ಮಾಡಲಾಗಿದೆ ಎಂದರು. 25 ರಿಂದ 30 ಎಕರೆ ಜಮೀನಿನಲ್ಲಿ ಜಿಲ್ಲೆಯಲ್ಲಿ ಗಾಲ್ಫ್ ಕೋರ್ಸ್ ಅನ್ನು ತೆರೆಯಲು ಸಹ ಚಿಂತನೆ ನಡೆಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಎಸ್‌ಟಿಪಿಐ ಬಿತ್ತಿಪತ್ರವನ್ನು ಬಿಡುಗಡೆ ಮಾಡಿದರು. ಜೈನ್ ತಾಂತ್ರಿಕ ಕಾಲೇಜು, ಯುಬಿಡಿಟಿ, ಜಿಎಂಐಟಿ ಕಾಲೇಜು ಮತ್ತು ಬಿಐಇಟಿ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಗಿತ್ತೆ ಮಾಧವ ವಿಠ್ಠಲರಾವ್, ಇಂಟಲ್ ಸಂಸ್ಥೆಯ ಸಾಮ್ಯೂಯಲ್ ದೊರೆರಾಜ್, ಕೆಡಿಇಎಂ ಪ್ರೊಗ್ರಾಮ್ ಡೈರೆಕ್ಟರ್ ಸುವಿನ್ ನಾರಾಯಣ್ ಬಿಐಇಟಿ ಕಾಲೇಜಿನ ಪ್ರಾಂಶುಪಾಲರಾದ ಡಾ.ಹೆಚ್.ಬಿ. ಅರವಿಂದ ಹಾಗೂ ಇತರರು ಉಪಸ್ಥಿತರಿದ್ದರು.

## ಇಂದು ರಾಜ್ಯಮಟ್ಟದ ವಿಶೇಷ ಕಾರ್ಯದಕ್ಷತೆ ತರಬೇತಿ ಶಿಬಿರ

**ದಾವಣಗೆರೆ:** ದಾವಣಗೆರೆ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತ ಬೆಂಗಳೂರು ಮತ್ತು ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟ ನಿಯಮಿತ ಹಾಗೂ ಸಹಕಾರ ಇಲಾಖೆ ಇವರ ವತಿಯಿಂದ ಅಂತರಾಷ್ಟ್ರೀಯ ಸಹಕಾರ ವರ್ಷದ ಪ್ರಯುಕ್ತ ಜಿಲ್ಲೆಯ ಪಟ್ಟಣ ಸಹಕಾರ ಬ್ಯಾಂಕುಗಳು ಹಾಗೂ ದಾವಣಗೆರೆ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ ಒಂದು ದಿನದ ರಾಜ್ಯಮಟ್ಟದ ವಿಶೇಷ ಕಾರ್ಯದಕ್ಷತೆ ಹಾಗೂ ನಾಯಕತ್ವ ಕೌಶಲ್ಯ ತರಬೇತಿ ಶಿಬಿರವನ್ನು ಅ.11ರ ಇಂದು ಬೆಳಗ್ಗೆ 9:30ಕ್ಕೆ ನಗರದ ಬಾಪೂಜಿ ಎಂಬಿಎ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದೆ.

ಕಾರ್ಯಕ್ರಮವನ್ನು ಮಾಜಿ ಸಚಿವ ಹಾಗೂ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಲ ನಿಯಮಿತ ಅಧ್ಯಕ್ಷ ಜಿ.ಟಿ ದೇವೇಗೌಡ ಉದ್ಘಾಟಿಸಲಿದ್ದು, ಜಿಲ್ಲಾ ಸಹಕಾರ ಒಕ್ಕೂಟದ ಅಧ್ಯಕ್ಷ ಸಿರಿಗೆರೆ ರಾಜಣ್ಣ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ರಾಜ್ಯ ಸಹಕಾರ ಮಾರಾಟ ಮಂಡಳದ ನಿರ್ದೇಶಕ ಡಾ. ಜೆ.ಆರ್ ಷಣ್ಮುಖಪ್ಪ, ಕೋಗುಂಡಿ ಬಕ್ಕೇಶಪ್ಪ, ಎನ್ ಗಂಗಣ್ಣ, ಹೆಚ್.ವಿ. ನಾಗರಾಜ್, ಆರ್ ರಾಮರೆಡ್ಡಿ, ಎ ಸಿ ನಾಗರಾಜ್, ಹೆಚ್.ಎನ್ ಅಶೋಕ, ಕೆ ಸಿ ನಾಗರತ, ಆರ್ ಜಿ ಶ್ರೀನಿವಾಸ್ ಮೂರ್ತಿ ಮತ್ತು ವಿಶೇಷ ಆಹ್ವಾನಿತರಾಗಿ ಕೆ. ಎಸ್ ನವೀನ್, ಅಶ್ವಥ್‌ನಾರಾಯಣ, ಸಿ. ಗೋಪಾಲ್, ಶ್ರೀನಿವಾಸ, ಕೆ. ಮಹೇಶ್ವರಪ್ಪ, ಶರಣಬಸಪ್ಪ ಕಾಟ್ರಳ್ಳಿ ಪಾಲ್ಗೊಳ್ಳಲಿದ್ದಾರೆ.

## ಇಂದು ಅಂತರಾಷ್ಟ್ರೀಯ ಅಲರ್ಜಿ ಮತ್ತು ರೋಗನಿರೋಧಕ ಶಾಸ್ತ್ರ ಉದ್ಘಾಟನೆ

**ದಾವಣಗೆರೆ:** ಬಾಪೂಜಿ ವಿದ್ಯಾಸಂಸ್ಥೆಯ ವತಿಯಿಂದ ಅಂತರಾಷ್ಟ್ರೀಯ ಸಿಎಂಇ ಮಕ್ಕಳ ಚಿಕಿತ್ಸೆಯಲ್ಲಿ ಅಲರ್ಜಿ ಮತ್ತು ರೋಗನಿರೋಧಕ ಶಾಸ್ತ್ರ –2025ರ ಉದ್ಘಾಟನಾ ಸಮಾರಂಭವನ್ನು ಅ.11ರ ಇಂದು ಬೆಳಿಗ್ಗೆ 9 ಗಂಟೆಗೆ ಜೆಜೆಎಂಎಂಸಿ ಗ್ರಂಥಾಲಯ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

## ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಮೇಲೆ ಶೂ ಎಸೆದವನನ್ನು ಬಂಧಿಸಿ ಶಿಕ್ಷೆಗೊಳಪಡಿಸುವಂತೆ ಒತ್ತಾಯಿಸಿ ಎಐವೈಎಫ್ ಪ್ರತಿಭಟನೆ

**ದಾವಣಗೆರೆ.ಅ.10:** ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಗವಾಯಿ ಅವರ ಮೇಲೆ ಶೂ ಎಸೆದವನನ್ನು ಕೂಡಲೆ ಬಂಧಿಸಿ ಕಠಿಣ ಶಿಕ್ಷೆಗೊಳಪಡಿಸಬೇಕೆಂದು ಅಖಿಲ ಭಾರತ ಯುವಜನ ಫೆಡರೇಷನ್ ಆಗ್ರಹಿಸಿದೆ.

ಆವರಗೆರೆಯಲ್ಲಿಂದು ನಡೆದ ಪ್ರತಿಭಟನೆ ಉದ್ದೇಶಿಸಿ ಫೆಡರೇಷನ್ ಜಿಲ್ಲಾ ಪ್ರದಾನ ಕಾರ್ಯದರ್ಶಿ ಎ.ತಿಪ್ಪೇಶಿ ಮಾತನಾಡಿ, ಈ ದೇಶದಲ್ಲಿ ಹಿಂದುಳಿದವರು, ಎಸ್ಸಿ ಮತ್ತು ಎಸ್ಟಿ ವರ್ಗದವರು ಉನ್ನತ ಅಧಿಕಾರದಲ್ಲಿದ್ದರೆ ಆರ್‌ಎಸ್‌ಎಸ್ ಮತ್ತು ಸನಾತನಿ ಮನೋಭಾವನೆ ಉಳ್ಳವರು ಸಹಿಸುತ್ತಿಲ್ಲ ಎಂದರು.

ನ್ಯಾಯಮೂರ್ತಿಗಳ ಮೇಲೆ ಶೂ ಎಸೆದಿದ್ದು ಅದು ಸಂವಿಧಾನಕ್ಕೆ ಅಪಚಾರ ಎಸಗಿದಂತೆ, ಆದ್ದರಿಂದ ನ್ಯಾಯಮೂರ್ತಿಗಳ ಮೇಲೆ ಶೂ ಎಸೆದ ಸನಾತನಿ ವಕೀಲ ಕಿಶೋರ್ ಕುಮಾರನನ್ನು ಕೂಡಲೇ ಬಂಧಿಸಿ ಜೈಲಿಗೆ ಕಳುಹಿಸಬೇಕೆಂದು ಕೇಂದ್ರ ಸರ್ಕಾರಕ್ಕೆ ಒತ್ತಾಯಿಸಿದರು.

ಎಐವೈಎಫ್ ಜಿಲ್ಲಾಧ್ಯಕ್ಷ ಕೆರನಹಳ್ಳಿ ರಾಜು ಮಾತನಾಡಿ, ಈ ತರಹದ ಘಟನೆಗಳು ಮೇಲಿಂದ ಮೇಲೆ ನಡೆ–ಯುತ್ತಿದ್ದರೆ ಮುಂದೊಂದು ದಿನ ಸನತಾನಿಗಳು ಸಂವಿಧಾನಕ್ಕೆ ಅಪಾಯ ತರುವವರು ಆದ್ದರಿಂದ ಇಂತಹ ಸನಾತನಿ ಮನಸ್ಸಿನವರನ್ನು ಸರಕಾರ ಈಗಲೇ ಮಟ್ಟ ಹಾಕಬೇಕೆಂದು ಹೇಳಿದರು.ಸಂತೋಷ್ ದೊಡ್ಡಮನೆ, ತುಂಬಿಗೆರೆ ರಘು, ಬಸವರಾಜ್, ಮಹೇಶ್ ಕೆ, ಯಲ್ಲಪ್ಪ ಜಿ, ಬಿ ಸಿದ್ದಮ್ಮ, ಈರಮ್ಮ, ಪ್ರೇಮ ಲೀಲಾ, ಎನ್ ಬಿ ಶಿವಕುಮಾರ್, ವೈ ಶಿವಾಜಿ, ಮೌನಾಚಾರ್ ಎಸ್, ದುಗ್ಗಪ್ಪ ಬಿ, ಎಚ್ ಎಂ ಮಂಜುನಾಥ, ಆನಂದ, ಅಣ್ಣಪ್ಪ ಕೆ, ಸಂತೋಷ್ ಹೆಚ್, ಶಿವಾನಂದ ಜಿ, ಶಿವಕುಮಾರ್ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ವೀರೇಂದ್ರ ಪಪ್ಪಿಯನ್ನು ಸೆಳೆಯಲು ಬಿಜೆಪಿ ಯತ್ನ : ಸಂತೋಷ್ ಲಾಡ್

**ಬೆಂಗಳೂರು,ಅ.10–** ಅಕ್ರಮ ಬೆಟ್ಟಿಂಗ್ ದಂಧೆ ಹಾಗೂ ಆನ್ ಲೈನ್ ಗೇಮಿಂಗ್ ಸಂಬಂಧ ಬಂಧಿತರಾಗಿರುವ ಕಾಂಗ್ರೆಸ್ ಶಾಸಕ ಹಾಗೂ ಚಿತ್ರನಟ ದೊಡ್ಡಣ್ಣ ಅವರ ಅಳಿಯ ವೀರೇಂದ್ರ ಪಪ್ಪಿ ಅವರನ್ನು ಬಿಜೆಪಿ ತನ್ನತ್ತ ಸೆಡೆಯಲು ಪ್ರಯತ್ನ ನಡೆಸಿದೆ ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಹೇಳಿದ್ದಾರೆ

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಜೆಪಿಯವರು ಯಾರನ್ನು ಯಾವಾಗ ಸೆಳೆಯುತ್ತಾರೆ ಎಂಬುದೇ ಗೊತ್ತಾಗುವುದಿಲ್ಲ. ಅವರಿಗೆ ಅವರದೇ ಆದಂತಹ ತಂತ್ರಗಾರಿಕೆ ಇದೆ. ಕಾಂಗ್ರೆಸ್‌ನ ಶಾಸಕ ವೀರೇಂದ್ರ ಪಪ್ಪಿ ವಿರುದ್ಧವೂ ಅಂತಹ ಪ್ರಯತ್ನ ನಡೆದಿರಬಹುದು ಎಂದು ಅನುಮಾನ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್‌ನ ಶಾಸಕ ವೀರೇಂದ್ರ ಪಪ್ಪಿ ಅವರ ವಿರುದ್ಧ ಆರೋಪ ಮಾಡಿರುವುದು ರಾಜಕೀಯ ಕಾರಣಕ್ಕೆ. 40 ಕೆ.ಜಿ. ಚಿನ್ನ ಸಿಕ್ಕಿದೆ ಎಂದು ಹೇಳಲಾಗಿದೆ. ಈ ಹಿಂದೆ ಕಾಂಗ್ರೆಸ್‌ನಲ್ಲಿದ್ದ ಹಿಮಂತ್ ಬಿಸ್ವಾಶರ್ಮ ಅವರ ವಿರುದ್ಧ ಶಾರದಾ ಚಿಟ್‌ಫಂಡ್ ಹಗರಣ ಇತ್ತು. ಅದೇ ರೀತಿ ಮಹಾರಾಷ್ಟ್ರದಲ್ಲಿ ಅಜಿತ್ ಪವಾರ್ ವಿರುದ್ಧ ಸಾವಿರಾರು ಕೋಟಿ ರೂ.ಗಳ ಹಗರಣದ ಆರೋಪವಿತ್ತು. ಅವರನ್ನು ಬಿಜೆಪಿಗೆ ಸೇರಿಸಿಕೊಂಡರು ಈಗ ವಾಷಿಂಗ್‌ಪೌಡರ್ ನಿರ್ಮಾ ಹಾಕಿ ಸ್ವಚ್ಛಗೊಳಿಸಿದ್ದಾರೆಯೇ? ಎಂದು ಪ್ರಶ್ನಿಸಿದರು.

ವೀರೇಂದ್ರ ಪಪ್ಪಿ ಬಿಹಾರ ವಿಧಾನಸಭೆಯ ಚುನಾವಣೆಗಾಗಿ ಕಾಂಗ್ರೆಸ್ ಪಕ್ಷಕ್ಕೆ ದುಡ್ಡು ಕೊಟ್ಟಿಲ್ಲ. ಒಂದು ವೇಳೆ ಯಾರಾದರೂ ಆ ರೀತಿ ದುಡ್ಡು ಕೊಟ್ಟಿದ್ದರೆ ಪತ್ತೆ ಹಚ್ಚುವ ವ್ಯವಸ್ಥೆಗಳು ಮತ್ತು ಸಾಮರ್ಥ್ಯ ಕೇಂದ್ರ ಸರ್ಕಾರದ ಬಳಿ ಇವೆ. ಮಹಾರಾಷ್ಟ್ರದ ವಿಧಾನಸಭೆ ಚುನಾವಣೆಯ ಪೂರ್ಣ ಖರ್ಚನ್ನು ಅಜಿತ್ ಪವಾರ್ ನೋಡಿಕೊಂಡಿದ್ದರು ಎಂದು ಗಂಭೀರ ಆರೋಪ ಮಾಡಿದರು. ಫೆಮಾ, ಇಡಿ ದಾಳಿ ಮಾಡಿಸಿ, ದುಡ್ಡು ಇರುವವರನ್ನು ಪತ್ತೆ ಹಚ್ಚಿ ಬಿಜೆಪಿಗೆ ಸೇರಿಸಿಕೊಳ್ಳುತ್ತಾರೆ. ಕೇಂದ್ರ ಸರ್ಕಾರದ ತನಿಖಾ ಸಂಸ್ಥೆಗಳೇ ಅಜಿತ್ ಪವಾರ್ ವಿರುದ್ಧ ಆರೋಪ ಮಾಡಿದ್ದವು. ಈಗ ಅಜಿತ್ ಪವಾರ್ ಆರೋಪಿ ಅಲ್ಲವೇ ಎಂದು ಪ್ರಶ್ನಿಸಿದರು.

## ದಲಿತ ಸಚಿವರ ಜೊತೆ ಪರಂ ಸಭೆ

**ಬೆಂಗಳೂರು :** ಸಚಿವ ಸಂಪುಟ ಪುನರ್ ರಚನೆ ಕುರಿತ ಊಹಾಪೋಹಗಳ ನಡುವೆ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಮತ್ತು ಸಮಾಜ ಕಲ್ಯಾಣ ಸಚಿವ ಎಚ್‌ಸಿ ಮಹದೇವಪ್ಪ ಅವರನ್ನು ನಿನ್ನೆ ಗೃಹ ಸಚಿವ ಜಿ ಪರಮೇಶ್ವರ ಭೇಟಿಯಾಗಿದ್ದು ತೀವ್ರ ಕುತೂಹಲ ಕೆರಳಿಸಿತ್ತು. ಈ ಬಗ್ಗೆ ಪ್ರತಿಕ್ರಿಯಿಸಿರುವ ಗೃಹ ಸಚಿವರು, ಕಾಂಗ್ರೆಸ್ ನಾಯಕರೊಂದಿಗಿನ ತಮ್ಮ ನಿನ್ನೆಯ ಭೇಟಿ ರಾಜಕೀಯವಲ್ಲ, ಬದಲಿಗೆ 'ಸಾಮಾನ್ಯ' ಸಭೆ ಎಂದು ಹೇಳಿದ್ದಾರೆ. ಮತ್ತೊಂದೆಡೆ ಸಿಎಂ ಸಿದ್ದರಾಮಯ್ಯ ಸಹೋದ್ಯೋಗಿಗಳನ್ನು ಅಕ್ಟೋಬರ್ 13ರಂದು ಔತಣ ಕೂಟಕ್ಕೆ ಆಹ್ವಾನಿಸಿರುವುದು ರಾಜಕೀಯ ವಲಯದಲ್ಲಿ ಭಾರಿ ಸಂಚಲನ ಮೂಡಿಸಿದೆ. ಬಿಹಾರ ವಿಧಾನಸಭಾ ಚುನಾವಣೆಯ ನಂತರ ಸಂಪುಟ ಪುನಾರಚನೆಗೆ ಹೈಕಮಾಂಡ್ ಒಪ್ಪಿಗೆ ನೀಡುವ ನಿರೀಕ್ಷೆಯಲ್ಲಿದ್ದು ಕಾಂಗ್ರೆಸ್ ವಲಯದಲ್ಲಿ ಬಿಸಿಬಿಸಿ ಚರ್ಚೆಯಾಗುತ್ತಿದೆ. ಈಮಧ್ಯೆ, ರಾಜ್ಯದಲ್ಲಿ ಈಗಾಗಲೇ ಪ್ರಾರಂಭವಾಗಿರುವ ಅನೇಕ ರಾಜಕೀಯ ಬೆಳವಣಿಗೆಗಳು ನವೆಂಬರ್ ತಿಂಗಳಲ್ಲಿ ತಾರ್ಕಿಕ ಅಂತ್ಯವನ್ನು ತಲುಪುತ್ತವೆ. ಆಡಳಿತ ಪಕ್ಷದಲ್ಲಿರುವವರೇ ಇದರ ಬಗ್ಗೆ ಮಾತನಾಡುತ್ತಿದ್ದಾರೆ' ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದ್ದಾರೆ.

## ನ್ಯಾಯಮೂರ್ತಿಗಳ ಮೇಲೆ ಶೂ ಎಸೆತ ಸಂವಿಧಾನಕ್ಕೆ ಮಾಡಿದ ಅಪಚಾರ ಎಐಡಿಆರ್‌ಎಂ ಖಂಡನೆ

**ದಾವಣಗೆರೆ.ಅ.10:** ನ್ಯಾಯಮೂರ್ತಿಗಳ ಮೇಲೆ ಶೂ ಎಸೆದದ್ದು ಸಂವಿಧಾನಕ್ಕೆ ಮಾಡಿದ ಅಪಚಾರವಾಗಿದೆ ಕೂಡಲೇ ಆ ವಕೀಲನನ್ನು ಬಂಧಿಸಿ ಕಾನೂನು ಶಿಕ್ಷೆಗೆ ಒಳಪಡಿಸಬೇಕೆಂದು ಆಗ್ರಹಿಸಿ ಅಖಿಲ ಭಾರತ ದಲಿತ ಆಂದೋಲನ ಜಿಲ್ಲಾ ಸಮಿತಿ ಪ್ರತಿಭಟನೆ ನಡೆಸಿತು.

ಶುಕ್ರವಾರ ನಗರದ ಸಮಿತಿ ಪದಾಧಿಕಾರಿಗಳು ಪ್ರತಿಭಟನೆ ನಡೆಸಿ ನಂತರ ಉಪ ವಿಭಾಗಾಧಿಕಾರಿಗಳ ಕಚೇರಿಗೆ ತೆರಳಿ ಶೂ ಎಸೆದ ವಕೀಲರ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಆಂದೋಲನದ ಜಿಲ್ಲಾ ಅಧ್ಯಕ್ಷ ನರೇಗಾ ರಂಗನಾಥ್ ಮಾತನಾಡಿ, ಸರ್ವರಿಗೂ ಒಳ್ಳೆಯದನ್ನೇ ಬಯಸುವ ಭಾರತದ ಸಂವಿಧಾನವನ್ನು ಒಪ್ಪಿಕೊಳ್ಳದ ಮನುವಾದಿ ಮನಸ್ಥಿತಿಯ ವಕೀಲನೊಬ್ಬ ಸುಪ್ರೀಂ ಕೋರ್ಟ್‌ನ ಒಬ್ಬ ದಲಿತ ನ್ಯಾಯಮೂರ್ತಿಗಳ ಮೇಲೆ ಅಸಹನೆಯಿಂದ ಶೂ ಎಸೆದಿರುವುದನ್ನು ಒಪ್ಪಲಾಗುವುದಿಲ್ಲ ಇಂತಹ ಮನುವಾದಿ ಮನಸ್ಥಿತಿಯ ವಕೀಲನನ್ನು ಕೂಡಲೇ ಬಂಧಿಸಿ ಕಾನೂನು ಶಿಕ್ಷೆಗೆ ಒಳಪಡಿಸಬೇಕೆಂದು ಆಗ್ರಹಿಸಿದರು.

ಕೆರನಹಳ್ಳಿ ರಾಜು, ಎನ್.ಟಿ.ಸುರೇಶ್, ತಿಪ್ಪೇಸ್ವಾಮಿ ಬಿ.ಎಚ್., ಜೆ.ರಂಗನಾಥ್, ದಾದಾಪೀರ್, ಮೈಲಾರಿ ಎಸ್., ರಂಗನಾಥ, ಮಂಜುನಾಥ, ಹುಲಿಗೆಮ್ಮ, ನಾಗಮ್ಮ, ಕಾಂತಮ್ಮ, ಪರಶುರಾಮ ಎನ್., ವಿಜಯಕುಮಾರ್, ಪ್ರಕಾಶ್ ಎ ಆರ್., ತಿಮ್ಮಾರೆಡ್ಡಿ, ಸಂಜು, ಪರಮೇಶಿ ಅಕ್ಕಿ, ಕರಿಯಪ್ಪ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

### ಆನ್‌ಲೈನ್ ಬೆಟ್ಟಿಂಗ್ ಹಗರಣದಲ್ಲಿ ಇಡಿಯಿಂದ ಶಾಸಕ ವೀರೇಂದ್ರ ಪಪ್ಪಿ ತನಿಖೆ

## ಲಾಕರ್‌ನಲ್ಲಿತ್ತು ಬರೋಬ್ಬರಿ 40 ಕೆ.ಜಿ ಚಿನ್ನ..!

**ಚಿತ್ರದುರ್ಗ :** ಅಕ್ರಮ ಬೆಟ್ಟಿಂಗ್ ದಂಧೆ ಪ್ರಕರಣದಲ್ಲಿ ಚಿತ್ರದುರ್ಗದ ಕಾಂಗ್ರೆಸ್ ಶಾಸಕ ವೀರೇಂದ್ರ ಪಪ್ಪಿಯವರನ್ನು ಈಗಾಗಲೇ ಬಂಧಿಸಲಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರಿಸಿರುವ ಜಾರಿ ನಿರ್ದೇಶನಾಲಯ(ಇಡಿ) ಅಧಿಕಾರಿಗಳು ಶಾಸಕರಿಗೆ ಸೇರಿದ ಚಳ್ಳಕೆರೆಯಲ್ಲಿನ ಮನೆ ಹಾಗೂ ಬ್ಯಾಂಕ್ ಲಾಕರ್‌ಗಳಿಂದ , 50.33 ಕೋಟಿ ರೂ. ಮೌಲ್ಯದ 40 ಕೆಜಿ ಚಿನ್ನವನ್ನು ವಶಪಡಿಸಿಕೊಂಡಿದ್ದಾರೆ.

ಚಳ್ಳಕೆರೆಯ ಎರಡು ಲಾಕರ್‌ಗಳಿಂದ ಚಿನ್ನವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಇಡಿ ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ. ಇದಕ್ಕೂ ಮೊದಲು, ಇಡಿ ಸುಮಾರು 21 ಕೆಜಿ ಚಿನ್ನದ ಗಟ್ಟಿಗಳು, ನಗದು, ಚಿನ್ನ ಮತ್ತು ಬೆಳ್ಳಿ ಆಭರಣಗಳು, ಬ್ಯಾಂಕ್ ಖಾತೆಗಳು ಮತ್ತು ದುಬಾರಿ ವಾಹನಗಳ ರೂಪದಲ್ಲಿ 103 ಕೋಟಿ ರೂಪಾಯಿ ಮೌಲ್ಯದ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿತ್ತು.

ಸದ್ಯ ಅಕ್ರಮ ಆನ್‌ಲೈನ್ ಗೇಮ್ ಪ್ರಕರಣ–ಕ್ಕೆ ಸಂಬಂಧಿಸಿ ವೀರೇಂದ್ರ ಪಪ್ಪಿಯವರ ವಿಚಾರಣೆ ನಡೆಸುತ್ತಿರುವ ಇಡಿ ಅಧಿಕಾರಿಗಳು, ಅವರ ಮಾಹಿತಿಯನ್ನೇ ಆಧರಿಸಿ ನಿನ್ನೆ ಅವರ ನಿವಾಸ ಹಾಗೂ ಫೆಡರಲ್ ಬ್ಯಾಂಕ್‌ನ ಎರಡು ಲಾಕರ್‌ಗಳಲ್ಲಿ ಪರಿಶೀಲನೆ ಮಾಡಿದರು. ಈ ವೇಳೆ 40 ಕೆ.ಜಿ. ತೂಕದ ಚಿನ್ನದ ಗಟ್ಟಿಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ. ಈವರೆಗೆ ಶಾಸಕ ವೀರೇಂದ್ರ ಅವರಿಂದ ಜಪ್ತಿ ಮಾಡಿರುವ ನಗ ನಾಣ್ಯದ ಮೊತ್ತವು 150 ಕೋಟಿ.ರೂ.ಎಂದು ತಿಳಿಸಿದ್ದಾರೆ.



**ಇದುವರೆಗಿನ ತನಿಖೆ ಏನು ಹೇಳುತ್ತದೆ?**

ತನಿಖೆಯಲ್ಲಿ ವೀರೇಂದ್ರ ಪಪ್ಪಿ ಇತರ ಸ್ನೇಹಿತರು ಮತ್ತು ಕುಟುಂಬ ಸದಸ್ಯರೊಂದಿಗೆ ಸೇರಿ ಅನೇಕ ಅಕ್ರಮ ಆನ್‌ಲೈನ್ ಬೆಟ್ಟಿಂಗ್ ವೆಬ್‌ಸೈಟ್‌ಗಳಾದ ಕಿಂಗ್ 567, ರಾಜ 567 ಇತ್ಯಾದಿಗಳ ಕಾರ್ಯಾಚರಣೆಗಳಲ್ಲಿ ಭಾ–ಗಿಯಾಗಿದ್ದರು ಮತ್ತು ಅದರ ಮೂಲಕ ಮುಗ್ಧ ಆಟಗಾರರನ್ನು ವಂಚಿಸುತ್ತಿದ್ದಾರೆ ಎಂದು ತಿಳಿದುಬಂದಿದೆ. ಆಟಗಾರರಿಂದ ಹಣ ಸಂಗ್ರಹವನ್ನು ಫೋನ್‌ಪೈಸಾ ಮುಂತಾದ ಹಲವಾರು ಗೇಟ್‌ವೇಗಳನ್ನು ಬಳಸಿ ಮಾಡಲಾಗಿದೆ. ಹೀಗೆ ಸಂಗ್ರಹಿಸಿದ ಹಣವನ್ನು ಭಾರತದಾದ್ಯಂತದ ಮಧ್ಯವರ್ತಿಗಳಿಂದ ಬೆಟ್ಟಿಂಗ್ ನಿರ್ವಾಹಕರು ಹಲವಾರು ಮ್ಯೂಲ್ ಖಾತೆಗಳ ಮೂಲಕ ಪಡೆದಿದ್ದಾರೆ. ಆನ್‌ಲೈನ್ ಬೆಟ್ಟಿಂಗ್ ನಡೆಸುತ್ತಿದ್ದ ಶಾಸಕ ವೀರೇಂದ್ರ ಪಪ್ಪಿ ಅವರು, ಸುಮಾರು 2 ಸಾವಿರ ಕೋಟಿ ರೂ. ವಹಿವಾಟು ನಡೆಸಿದ್ದಾರೆ ಎನ್ನಲಾಗಿದೆ. ವೀರೇಂದ್ರ, ಅವರ ಕುಟುಂಬ ಸದಸ್ಯರು ಮತ್ತು ಸಹಚರರು ಕೋಟ್ಯಂತರ ರೂಪಾಯಿ ಮೌಲ್ಯದ ಅಂತಾರಾಷ್ಟ್ರೀಯ ಪ್ರಯಾಣ ಟಿಕೆಟ್‌ಗಳು, ವೀಸಾ ಮತ್ತು ಇತರ ಆತಿಥ್ಯ ಸೇವೆಗಳನ್ನು ಬುಕ್ ಮಾಡಿದ್ದಾರೆ ಎಂದು ತನಿಖೆಯಿಂದ ತಿಳಿದುಬಂದಿದೆ ಎಂದು ಇಡಿ ತಿಳಿಸಿದೆ. ಆನ್‌ಲೈನ್ ಬೆಟ್ಟಿಂಗ್ ವೆಬ್‌ಸೈಟ್‌ಗಳಿಂದ ಬಂದ ಆದಾಯಕ್ಕೆ ಲಿಂಕ್ ಮಾಡಲಾದ ಮ್ಯೂಲ್ ಖಾತೆಗಳ ಜಾಲದ ಮೂಲಕ ಹಣಕಾಸು ಒದಗಿಸಲಾಗಿದೆ.

ಈ ಮ್ಯೂಲ್ ಖಾತೆಗಳ ಕಾರ್ಯಾಚರಣೆಗಳಿಗೆ ಸಂಬಂಧಿಸಿದಂತೆ ಮಾರ್ಕೆಟಿಂಗ್, ಬಲ್ಕ್ ಎಸ್‌ಎಂಎಸ್ ಸೇವೆಗಳು, ಪ್ಲಾಟ್‌ಫಾರ್ಮ್ ಹೋಸ್ಟಿಂಗ್, ಸರ್ಚ್ ಇಂಜಿನ್ ಆಪ್ಟಿಮೈಸೇಶನ್ ಮುಂತಾದ ವೆಚ್ಚಗಳನ್ನು ವೀರೇಂದ್ರ ಮತ್ತು ಅವರ ಸಹಚರರು ನಿಯಂತ್ರಿಸುವ ಈ ಖಾತೆಗಳ ಮೂಲಕ ಪಾವತಿಸಲಾಗುತ್ತದೆ.ಈ ವಹಿವಾಟುಗಳಿಗೆ ಬಳಸಲಾದ ಹಣವನ್ನು ಅಕ್ರಮ ಆನ್‌ಲೈನ್ ಚಟುವಟಿಕೆಗಳಿಂದ ಬೇರೆಡೆ ಬಳಸಲಾಗಿದೆ. ಅವುಗಳ ಮೂಲವನ್ನು ಮರೆಮಾಚಲು ಬಹು ಮಧ್ಯವರ್ತಿ ಖಾತೆಗಳ ಮೂಲಕ ರವಾನಿಸಲಾಗಿದೆ ಎಂದು ಪುರಾವೆಗಳು ಸೂಚಿಸುತ್ತವೆ ಎಂದು ಇಡಿ ಹೇಳಿದೆ.

## ದೈಹಿಕ–ಮಾನಸಿಕ ಸದೃಢವಾಗಿದ್ದಾಗ ಪರಿಪೂರ್ಣ ಆರೋಗ್ಯ ಹೊಂದಲು ಸಾಧ್ಯ : ನ್ಯಾ. ಹನುಮಂತಪ್ಪ

**ಚಿಕ್ಕಮಗಳೂರು:** ಸಮಾಜದಲ್ಲಿ ಮನುಷ್ಯ ದೈಹಿಕ ಮತ್ತು ಮಾನಸಿಕವಾಗಿ ಸದೃಢ ಆರೋಗ್ಯವಾಗಿದ್ದಾಗ ಮಾತ್ರ ಪರಿಪೂರ್ಣ ಆರೋಗ್ಯವಂತರಾಗಿರಲು ಸಾಧ್ಯ ಎಂದು ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ ಕರೆನೀಡಿದರು.

ಅವರು ಇಂದು ಐಡಿಎಸ್‌ಜಿ ಸರ್ಕಾರಿ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿ.ಪಂ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಆರಕ್ಷಕ ಇಲಾಖೆ, ವಾರ್ತಾ ಇಲಾಖೆ, ಯುವ ರೆಡ್‌ಕ್ರಾಸ್ ಘಟಕ, ಐಡಿಎಸ್‌ಜಿ ಕಾಲೇಜು ಇವರುಗಳ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾಗಿದ್ದ "ವಿಶ್ವ ಮಾನಸಿಕ ಆರೋಗ್ಯ" ದಿನಾಚರಣೆ ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ದೇಹಕ್ಕೆ ಕಾಯಿಲೆ ಅಥವಾ ತೊಂದರೆ–ಯಾದಾಗ ಚಿಕಿತ್ಸೆಗೆ ಮುಂದಾಗುತ್ತೇವೆ, ಬಿಪಿ, ಶುಗರ್, ಥೈರಾಯ್ಡ್ ಮುಂತಾದ ಕಾಯಿಲೆಗಳ ಬಗ್ಗೆ ಬೇರೆಯವರೊಂದಿಗೆ ಹಂಚಿಕೊಳ್ಳುತ್ತೇವೆ,



ಈ ನಿಟ್ಟಿನಲ್ಲಿ ಸಮುದಾಯದ ಆರೋಗ್ಯ ಸಹ ಅವಶ್ಯಕವಾಗಿದೆ ಎಂದರು.

ತುರ್ತುಪರಿಸ್ಥಿತಿ, ಯುದ್ಧಗಳಲ್ಲಿ ಭಾಗವಹಿಸುವ ವ್ಯಕ್ತಿಗಳಿಗೆ ಬರುವ ನೋವು, ಮಾನಸಿಕ ಕಾಯಿಲೆಗಳ ಬಗ್ಗೆ ಜಾಗೃತಿ ವಹಿಸಲು ಘೋಷವಾಕ್ಯವನ್ನು ನೀಡಲಾಗಿದ್ದು, ದೈಹಿಕ, ಮಾನಸಿಕವಾಗಿ ಸದೃಢರಾಗಿದ್ದಾಗ ಮಾತ್ರ ಆರೋಗ್ಯವಂತರಾಗಿದ್ದಾರೆಂಬುದು ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆಯ ಉದ್ದೇಶ ಎಂದು ಹೇಳಿದರು.


ಶೇ.8 ಕ್ಕಿಂತ ಹೆಚ್ಚು ಪ್ರಪಂಚದಲ್ಲಿ ವಿವಿಧ ರೀತಿಯ ಮಾನಸಿಕ ಕಾಯಿಲೆಗಳಿಂದ ಬಳಲುತ್ತಿದ್ದಾರೆ, ಮೊಬೈಲ್ ಗೀಳು ಹೆಚ್ಚಿಸಿಕೊಂಡವರು ಕೂಡ ಮಾನಸಿಕ ಕಾಯಿಲೆಗೆ ಒಳಗಾಗಿದ್ದಾರೆ ಎಂದು ಅರ್ಥೈಸಲಾಗುತ್ತಿದೆ ಎಂದು ತಿಳಿಸಿದರು.

ಕಾನೂನಿನಲ್ಲಿ ಕರುಣೆ ಇಲ್ಲ, ಸರ್ಕಾರ ನಿಗದಿಪಡಿಸಿರುವ ಅವದಿಗಿಂತ ಮೊದಲು ಮದುವೆಯಾಗಿದ್ದರೆ ಪೋಕ್ಸೋ ಕಾಯಿದೆಯಡಿ ಪ್ರಕರಣ ದಾಖಲಾಗುತ್ತದೆ. ಎಫ್‌ಎಸ್‌ಎಲ್ ವರದಿಯಲ್ಲಿ ಗರ್ಭಿಣಿಯಾಗಿರುವುದು ದೃಢಪಟ್ಟರೆ ಕನಿಷ್ಠ 20 ವರ್ಷ ಜೈಲು ಶಿಕ್ಷೆ ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಐಡಿಎಸ್‌ಜಿ ಕಾಲೇಜಿನ ಪ್ರಾಂಶುಪಾಲರಾದ ತಸ್ನಿಮ್ ಕೌಸರ್ ಮನಿಯಾರ್ ವಹಿಸಿದ್ದರು. ವೇದಿಕೆಯಲ್ಲಿ ಜಿಲ್ಲಾ ಮಾನಸಿಕ ಕಾರ್ಯಕ್ರಮಾಧಿಕಾರಿ ಡಾ. ಬಾಲಕೃಷ್ಣ, ಮಾನಸಿಕ ತಜ್ಞ ಡಾ. ಧ್ರುವಕುಮಾರ್ ಕೆ.ಎ, ಡಾ. ಮಂಜುನಾಥ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಸೀಮಾ, ಡಾ. ಅನಿತ, ವೈ.ಎಂ ಲಲಿತ, ಗಣೇಶ್, ಜಯಣ್ಣ ಮತ್ತಿತರರು ಉಪಸ್ಥಿತರಿದ್ದರು. ಮೊದಲಿಗೆ ಆರೋಗ್ಯ ಇಲಾಖೆಯ ಬೇಬಿ ಸ್ವಾಗತಿಸಿದರು.

## ನವೆಂಬರ್ ಕ್ರಾಂತಿ ನಿಶ್ಚಿತ : ಬಿ.ವೈ ವಿಜಯೇಂದ್ರ

**ಬೆಂಗಳೂರು:** ನವೆಂಬರ್‌ನಲ್ಲಿ ರಾಜ್ಯದಲ್ಲಿ ಭಾರಿ ಬದಲಾವಣೆಯಾಗಲಿದೆ ಎಂದು ಕಾಂಗ್ರೆಸ್ ಶಾಸಕರೇ ಹೇಳುತ್ತಿದ್ದಾರೆ. ಹಾಗಾಗಿ ನವೆಂಬರ್ ಕ್ರಾಂತಿ ನಿಶ್ಚಿತ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಭವಿಷ್ಯ ನುಡಿದಿದ್ದಾರೆ



ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಬಿಹಾರ ವಿಧಾನಸಭಾ ಚುನಾವಣೆಯ ಫಲಿತಾಂಶದ ಬಳಿಕ ರಾಜ್ಯ ರಾಜಕಾರಣದಲ್ಲಿ ಸಾಕಷ್ಟು ಬದಲಾವಣೆಗಳಾಗಲಿದೆ ಯಾರಿಗೆ ಗಂಡಾಂತರ ಇನ್ನ್ಯಾರಿಗೆ ಅದೃಷ್ಟ ಎಂಬುದನ್ನ ಕಾದು ನೋಡಿ ಎಂದು ಮಾರ್ಮಿಕವಾಗಿ ಹೇಳಿದರು.

ನವೆಂಬರ್ ನಲ್ಲಿ ಬದಲಾವಣೆಗಳಾಗುವ ಮಾಹಿತಿ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಭೆಗಳ ಮೇಲೆ ಸಭೆ ನಡೆಸುತ್ತಿದ್ದಾರೆ ನಾಯಕತ್ವ ಬದಲಾವಣೆ ಇದೆಯೇ ಇಲ್ಲವೇ ಮತ್ಯಾವುದೋ ಬದಲಾವಣೆಯೇ ಎಂಬುದನ್ನ ಕಾದುನೋಡಬೇಕಿದೆ.

ನಾವು ಆರು ತಿಂಗಳ ಹಿಂದೆಯೇ ಈ ಬಗ್ಗೆ ಹೇಳಿದ್ದೆವು, ಅದು ಈಗ ನಿಜವಾಗುತ್ತಿದೆ ಎಂದು ವಿಜಯೇಂದ್ರ ಹೇಳಿದರು ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಬದಲಾಗಲಿದ್ದಾರೆ ಎಂದು ಆಡಳಿತ ಪಕ್ಷದ ದವರೇ ಮಾತನಾಡುತ್ತಿದ್ದಾರೆ

ಏನೋ ಬದಲಾವಣೆಗಳು ಇಲ್ಲದಿದ್ದರೆ ಮುಖ್ಯಮಂತ್ರಿ ಕೆಲ ಸಚಿವರುಗಳು ಪ್ರತ್ಯೇಕ ಸಭೆ ಏಕ ನಡೆಸುತ್ತಿದ್ದರು ಮುಖ್ಯಮಂತ್ರಿ ಸಿದ್ದರಾಮಯ್ಯ ಏಕಾಏಕಿ ಸಚಿವರಿಗೆ ಔತಣಕೂಟ ಏರ್ಪಡಿಸಿರುವ ಉದ್ದೇಶವಾದರೂ ಏನು ಎಂದು ಅವರು ಪ್ರಶ್ನಿಸಿದರು ಬೆಂಗಳೂರಿನಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವ ಕೆಲಸ ಆಗಿಲ್ಲ ರಸ್ತೆಗಳಲ್ಲಿ ಗುಂಡಿಗಳದ್ದೇ ಕಾರು ಬಾರು ಈ ಸರ್ಕಾರಕ್ಕೆ ಗುಂಡಿ ಮುಚ್ಚಲು ಆಗುತ್ತಿಲ್ಲ ಎಂದು ಕಿಡಿಕಾರಿದರು.

## ರಾಶಿ ಭವಿಷ್ಯ

### ಮೇಷ ರಾಶಿ

ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ಇಂದು ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ಲೋನ್ ತೆಗೆದುಕೊಂಡಿರುವ ಜನರಿಗೆ ಲೋನ್ ನ ಮೊತ್ತವನ್ನು ಮರುಪಾವತಿಸುವಲ್ಲಿ ತೊಂದರೆಗಳು ಉಂಟಾಗಬಹುದು. ಕುಟುಂಬದ ಸದಸ್ಯರು ಬೆಂಬಲ ನೀಡಿದರೂ ತುಂಬ ಬೇಡಿಕೆಯಿಡುತ್ತಾರೆ.

### ವೃಷಭ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಕೆಲವರಿಗೆ ಪ್ರಯಾಣದ ಗಡಿಬಿಡಿ ಮತ್ತು ಒತ್ತಡದಿಂದ ಕೂಡಿರುತ್ತವೆ – ಆದರೆ ಆರ್ಥಿಕವಾಗಿ ಲಾಭದಾಯಕವಾಗಿರುತ್ತವೆ. ನಿಮ್ಮನ್ನು ಪ್ರೀತಿಸುವ ಹಾಗೂ ನಿಮ್ಮ ಬಗ್ಗೆ ಕಾಳಜಿಯಿರುವವರ ಸಂಗದಲ್ಲಿ ಒಳ್ಳೆಯ ಸಮಯ ಕಳೆಯಿರಿ. ನಿಮ್ಮ ಪ್ರೇಮಮಯ ವೀಕ್ಷಣೆಗಳನ್ನು ಅಭಿವ್ಯಕ್ತಿಗೊಳಿಸಿ.

### ಮಿಥುನ ರಾಶಿ

ಸರ್ವತೋಮುಖ ಅಭಿವೃದ್ಧಿ ಸಾಧ್ಯವಿದ್ದಾಗ ಮಾತ್ರ ಮಾನಸಿಕ ಮತ್ತು ನೈತಿಕ ಶಿಕ್ಷಣದ ಜೊತೆ ದೈಹಿಕ ಶಿಕ್ಷಣವನ್ನೂ ತೆಗೆದುಕೊಳ್ಳಿ. ಆರೋಗ್ಯಕರ ಮನಸ್ಸು ಯಾವಾಗಲೂ ಆರೋಗ್ಯಕರ ದೇಹದಲ್ಲಿ ಪರ್ಯವಸಾನವಾಗುತ್ತದೆಂದು ನೆನಪಿಡಿ. ಮನೆಯ ಅಗತ್ಯವಾದ ವಸ್ತುಗಾಲ ಮೇಲೆ ಹಣವನ್ನು ಖರ್ಚು ಮಾಡುವುದು ಖಂಡಿತವಾಗಿಯೂ ನಿಮಗೆ ಆರ್ಥಿಕ ತೊಂದರೆಗಳನ್ನು ನೀಡುತ್ತದೆ ಆದರೆ ಇದರಿಂದ ನೀವು ಭವಿಷ್ಯದ ಅನೇಕ ತೊಂದರೆಗಳಿಂದ ತಪ್ಪಿಸಿಕೊಳ್ಳಬಹುದು.

### ಕರ್ಕ ರಾಶಿ

ನೀವು ಹೇರಳ ಶಕ್ತಿಯನ್ನು ಹೊಂದಿರುತ್ತೀರಿ – ಆದರೆ ಕೆಲಸದ ಒತ್ತಡ ನಿಮ್ಮನ್ನು ಉದ್ವಿಗ್ನಗೊಳಿಸುವಂತೆ ತೋರುತ್ತದೆ. ಇಂದು ನಿಮ್ಮ ಯಾವುದೇ ಚಲಿಸಬಲ್ಲ ಅಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ. ಬಿಕ್ಕಟ್ಟಿನ ಸಮಯದಲ್ಲಿ ನಿಮಗೆ ಸಹಾಯ ಮಾಡಿದ ಸಂಬಂಧಿಗಳಿಗೆ ನಿಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸಿ. ನಿಮ್ಮ ಸಣ್ಣ ಕೃತಜ್ಞತೆ ಅವರಿಗೆ ಚೈತನ್ಯ ನೀಡುತ್ತದೆ.

### ಸಿಂಹ ರಾಶಿ

ನಿಮ್ಮ ದೇಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ಮನೆಯಲ್ಲಿನ ಪರಿಸ್ಥಿತಿಗಳಿಂದ ನಿಮಗೆ ಅಸಮಾಧಾನ ಉಂಟಾಗಬಹುದು.

### ಕನ್ಯಾ ರಾಶಿ

ಮಕ್ಕಳ ನಿಮ್ಮ ಇಚ್ಛೆಯಂತೆ ನಡೆದುಕೊಳ್ಳುವುದಿಲ್ಲ ಹಾಗೂ ಇದು ನಿಮಗೆ ಕೋಪ ತರುತ್ತದೆ. ಅನಿಯಂತ್ರಿತ ಕೋಪ ಸಾಮಾನ್ಯವಾಗಿ ಎಲ್ಲರನ್ನೂ, ಹಾಗೂ ವಿಶೇಷವಾಗಿ ಕೋಪಗೊಂಡವರನ್ನು ಹೆಚ್ಚು ಘಾಸಿಗೊಳಿಸುತ್ತದೆ. ಏಕೆಂದರೆ ಇದು ಶಕ್ತಿಯನ್ನು ಕುಂಠಿತಗೊಳಿಸುತ್ತದೆ ಹಾಗೂ ನಿರ್ಧಾರ ತೆಗೆದುಕೊಳ್ಳುವ ಶಕ್ತಿಯನ್ನು ಕಡಿಮೆಯಾಗಿಸುತ್ತದೆ. ಇದು ವಿಷಯಗಳನ್ನು ಇನ್ನೂ ಕಷ್ಟಕರಗೊಳಿಸುತ್ತದೆ.

### ತುಲಾ ರಾಶಿ

ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ಹಣಕಾಸು ಲಾಭಗಳು ವಿವಿಧ ಮೂಲಗಳಿಂದ ಬರುತ್ತದೆ. ನಿಮ್ಮ ಮಕ್ಕಳಿಂದ ನೀವು ಕೆಲವು ಪಾಠಗಳನ್ನು ಕಲಿಯಲಿದ್ದೀರಿ. ಅವರು ಅತ್ಯಂತ ಪರಿಶುದ್ಧ ಪ್ರಭೆಗಳನ್ನು ಹೊಂದಿರುತ್ತಾರೆ ಮತ್ತು ಅವರ ಮುಗ್ಧತೆ ಹಾಗೂ ಆನಂದದಿಂದ ಮತ್ತು ಮತ್ತು ನಕಾರಾತ್ಮಕ ಗುಣಗಳ ಅನುಪಸ್ಥಿತಿಯಿಂದ ಅವರ ಸುತ್ತಲಿರುವವರನ್ನು ಬದಲಾಯಿಸುವ ಶಕ್ತಿ ಹೊಂದಿರುತ್ತಾರೆ.

### ವೃಶ್ಚಿಕ ರಾಶಿ

ಸಂತೋಷದ ದಿನಕ್ಕಾಗಿ ಮಾನಸಿಕ ಒತ್ತಡವನ್ನು ತಪ್ಪಿಸಿ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ ಮತ್ತು ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ . ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ನಿಮ್ಮ ಸಂಗಾತಿಯ ಕುಟುಂಬದ ಸದಸ್ಯರ ಅಡ್ಡಿಯ ಕಾರಣದಿಂದ ನಿಮ್ಮ ದಿನ ಸ್ವಲ್ಪ ಏರುಪೇರಾಗಬಹುದು. ನೀವು ಕೆಟ್ಟ ಸಮಯವನ್ನು ಹೊಂದಿರುವವರೊಂದಿಗೆ ಸಂಪರ್ಕವನ್ನು ಹೆಚ್ಚಿಸುವುದನ್ನು ತಪ್ಪಿಸಿ. ಇಂದು ನಿಮ್ಮ ವೈವಾಹಿಕ ಜೀವನ ಅಂತರಕ್ಕಾಗಿ ಹಂಬಲಿಸುತ್ತದೆ.

### ಧನು ರಾಶಿ

ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಮತ್ತು ಯೋಗ ಪ್ರಾರಂಭಿಸಿ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಮಕ್ಕಳು ಅವರ ವೃತ್ತಿಯನ್ನು ಯೋಜಿಸುವುದಕ್ಕಿಂತ ಹೆಚ್ಚಾಗಿ ಹೊರಾಂಗಣ ಚಟುವಟಿಕೆಗಳಲ್ಲೇ ಸಮಯ ಕಳೆಯುವುದರಿಂದ ಅವರು ನಿರಾಸೆ ಉಂಟುಮಾಡಬಹುದು. ನಿಮ್ಮ ಜಕಣ್ಣೀರನ್ನು ಒಬ್ಬ ವಿಶೇಷ ಸ್ನೇಹಿತ ಒರೆಸಬಹುದು.

### ಮಕರ ರಾಶಿ

ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ದಿನದಆರಂಭವು ಚೆನ್ನಾಗಿ ಅಗಿದರು, ಸಂಜೆಯ ಸಮಯದಲ್ಲಿ ಯಾವುದೇ ಕಾರಣದಿಂದ ನಿಮ್ಮ ಹಣ ಖರ್ಚಾಗಬಹುದು. ಇದರಿಂದ ನೀವು ತೊಂದರೆಗೊಳಗಾಗಬಹುದು. ದಿನದಲ್ಲಿ ಅನಿರೀಕ್ಷಿತವಾದ ಒಳ್ಳೆಯ ಸುದ್ದಿ ಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತೆರೆದಿಡುತ್ತದೆ. ನೀವು ಪ್ರಣಯದ ಮನೋಭಾವ ಹೊಂದಿರುತ್ತೀರಿ– ನೀವು ಮತ್ತು ನಿಮ್ಮ ಪ್ರೀತಿಪಾತ್ರರಿಗಾಗಿ ವಿಶೇಷ ಯೋಜನೆಗಳನ್ನು ಮಾಡಲು ಮರೆಯಬೇಡಿ.

### ಕುಂಭ ರಾಶಿ

ಇಂದು ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ನಿಮ್ಮ ಪ್ರೀತಿಪಾತ್ರರ ಜೊತೆಗಿನ ನಿಮ್ಮ ಸಂಬಂಧದಲ್ಲಿ ಹುಳಿ ಹಿಂಡಬಹುದಾದ ಸಮಸ್ಯೆಗಳನ್ನು ಕೆದಕುವುದನ್ನು ತಪ್ಪಿಸುವುದು ಅತ್ಯುತ್ತಮ. ಪ್ರಣಯಕ್ಕೆ ಒಳ್ಳೆಯ ದಿನ.

### ಮೀನ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ. ಪ್ರಣಯದ ನೆನಪುಗಳು ನಿಮ್ಮ ದಿನವನ್ನು ಆಕ್ರಮಿಸುತ್ತವೆ.

# ಡಿಕೆಶಿ ವಿರುದ್ಧ ಅಪಪ್ರಚಾರ: ದರ್ಶನ್ ಅಭಿಮಾನಿಗಳಿಗೆ ಆರ್. ಮೋಹನ್ ಎಚ್ಚರಿಕೆ



**ಶಿವಮೊಗ್ಗ:** ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವಿರುದ್ಧ ಸೋಷಿಯಲ್ ಮೀಡಿಯಾ ಸೇರಿದಂತೆ ಮಾಧ್ಯಮಗಳಲ್ಲಿ ನಟ ದರ್ಶನ್ ಅಭಿಮಾನಿಗಳು ಅಪಪ್ರಚಾರ ನಡೆಸುತ್ತಿದ್ದು, ಕೂಡಲೇ ಇದನ್ನು ನಿಲ್ಲಿಸದಿದ್ದಲ್ಲಿ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಅಖಿಲ ಕರ್ನಾಟಕ ಡಿ.ಕೆ. ಶಿವಕುಮಾರ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ಆರ್. ಮೋಹನ್ ಎಚ್ಚರಿಕೆ ನೀಡಿದ್ದಾರೆ.

ಚಾಲೆಂಜಿಂಗ್ ಸ್ಟಾರ್ ದರ್ಶನ್ ಅಭಿಮಾನಿಗಳ ಸಂಘ ಮತ್ತು ಅಖಿಲ ಕರ್ನಾಟಕ ಡಿ ಬಾಸ್ ಅಭಿಮಾನಿಗಳ ಸಂಘದ ಹೆಸರಿನಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್ ಮತ್ತು ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ ಹಮ್ಮಿಕೊಳ್ಳುವ ನಿಟ್ಟಿನಲ್ಲಿ ಸಮೂಹ ಮಾಧ್ಯಮಗಳಲ್ಲಿ ಪ್ರಚಾರ ನಡೆಸುತ್ತಿರುವುದು ಖಂಡನೀಯ.

ದರ್ಶನ್ ಅವರ ಜಾಮೀನು ರದ್ದುಗೊಂಡು ಮತ್ತೆ ಜೈಲು ಸೇರಿರುವುದಕ್ಕೂ ಡಿಕೆಶಿ ಅವರಿಗೂ ಯಾವುದೇ ಸಂಬಂಧವಿಲ್ಲ. ದರ್ಶನ್ ಕೊಲೆ ಆರೋಪದ ಹಿನ್ನೆಲೆಯಲ್ಲಿ ಈ ಹಿಂದೆ ಬಂಧನಕ್ಕೊಳಗಾದಾಗ ಅವರ ಪತ್ನಿ ವಿಜಯಲಕ್ಷ್ಮಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿದ್ದರು. ಆಗ ಕಾನೂನಾತ್ಮಕವಾಗಿ ಅಗತ್ಯ ಸಹಕಾರ ನೀಡುವುದಾಗಿ ತಿಳಿಸಿದ್ದರು. ಅಂತೆಯೇ ನಡೆದುಕೊಳ್ಳುತ್ತಿದ್ದಾರೆ. ಆದರೆ ದರ್ಶನ್ ಅಭಿಮಾನಿಗಳು ಡಿಕೆಶಿ ಅವರನ್ನು ಗುರಿಯಾಗಿಸಿಕೊಂಡು ಅಪಪ್ರಚಾರ ನಡೆಸುತ್ತಿದ್ದಾರೆ.

ಚಿತ್ರನಟರಿಗೆ ಅಭಿಮಾನಿಗಳ ಸಂಘ ಇರುವುದು ಸಾಮಾನ್ಯ. ಆದರೆ ಇಂತಹ ಸಂಘದ ಹೆಸರಿನಲ್ಲಿ ದರ್ಶನ್ ಅಭಿಮಾನಿಗಳ ವರ್ತನೆ ಸರಿಯಲ್ಲ. ಕರ್ನಾಟಕದ ಮೇರುನಟ ಡಾ. ರಾಜಕುಮಾರ್ ಅವರ ಹೆಸರಿನಲ್ಲಿಯೂ ಸಾಕಷ್ಟು ಅಭಿಮಾನಿಗಳ ಸಂಘಗಳು ಇದ್ದವು. ಡಾ.ರಾಜ್ ಅವರು ವೀರಪ್ಪನ್‌ನಿಂದ ಅಪಹರಿಸಲ್ಪಟ್ಟು ಕಾಡಿಗೆ ಹೋದಾಗಲೂ ಈ ಸಂಘಗಳು ಮತ್ತು ಅಭಿಮಾನಿಗಳು ತಾಳ್ಮೆಯಿಂದ ವರ್ತಿಸಿ ಮಾದರಿಯಾಗಿದ್ದರು.

ಆದರೆ ನಟ ದರ್ಶನ್ ಹೆಸರಿನಲ್ಲಿ ಸಂಘ ಸ್ಥಾಪಿಸಿಕೊಂಡಿರುವ ಅವರ ಅಭಿಮಾನಿಗಳು ದುರ್ವರ್ತನೆ ತೋರುತ್ತಿದ್ದಾರೆ.

ಮಿತಿ ಮೀರಿ ವರ್ತಿಸುತ್ತಿದ್ದಾರೆ. ಇವರು ಕೂಡಲೇ ತಮ್ಮ ವರ್ತನೆ ಬದಲಾಯಿಸಿಕೊಳ್ಳದಿದ್ದಲ್ಲಿ ಕಾನೂನು ಮೊರೆ ಹೋಗಲಾಗುವುದು ಎಂದು ಆರ್. ಮೋಹನ್ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಗಾಯತ್ರಿ ಪರಿವಾರದಿಂದ ಸಾರ್ವಜನಿಕವಾಗಿ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆಗೆ ಆಹ್ವಾನ

**ದಾವಣಗೆರೆ:** ದಾವಣಗೆರೆಯ ಶ್ರೀ ಗಾಯತ್ರಿ ದೇವಿಯ ಉಪಾಸಕರ ಕ್ರಿಯಾತ್ಮಕ ಆಧ್ಯಾತ್ಮ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದ ಬೆಳ್ಳಿಹಬ್ಬದ ಪ್ರಯುಕ್ತ 07–12–2025 ರಂದು ಭಾನುವಾರ ನಗರದ ಎಂ.ಸಿ.ಸಿ 'ಎ' ಬ್ಲಾಕ್‌ನ ಶ್ರೀ ಕೃಷ್ಣ ಕಲಾಮಂದಿರದಲ್ಲಿ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಹಮ್ಮಿಕೊಳ್ಳಲಾಗಿದೆ ಎಂದು ಪರಿವಾರದ ಅಧ್ಯಕ್ಷರಾದ ಡಾ॥ ರಮೇಶ್ ಪಟೇಲ್ ತಿಳಿಸಿದ್ದಾರೆ.

ಯಾವುದೇ ಜಾತಿ, ಮತ, ಬೇಧವಿಲ್ಲದೇ ಸಾರ್ವಜನಿಕರು ಈ ಮಹತ್ವಪೂರ್ಣ ಪೂಜೆಯಲ್ಲಿ ಭಾಗವಹಿಸುವವರು ಸಂಕಲ್ಪಕ್ಕೆ ಈ ಕೆಳಗಿನ ಸನೀಹವಾಣಿಗಳಿಗೆ ಸಂಪರ್ಕಿಸಬಹುದು ಎಂದು ಪರಿವಾರದ ಕೋಶಾಧ್ಯಕ್ಷರಾದ ಪುರುಷೋತ್ತಮ ಡಿ.ಪಟೇಲ್ ಪ್ರಕಟಿಸಿದ್ದಾರೆ. ಶ್ರೀ ಗಾಯತ್ರಿ ಪರಿವಾರ 2000 ಇಸವಿಯಲ್ಲಿ ಪ್ರಾರಂಭವಾಗಿ 25 ವರ್ಷಗಳ ಕಾಲ ನಿರಂತರವಾಗಿ ಪ್ರತೀ ಹುಣ್ಣಿಮೆಯಂದು ಸಾರ್ವಜನಿಕವಾಗಿ ಯಾವುದೇ ಜಾತಿ, ಮತ, ಲಿಂಗಭೇದವಿಲ್ಲದೇ ಸಾಮೂಹಿಕ ಗಾಯತ್ರಿ ಪೂಜೆ, ಉಪಾಸನೆ ನಡೆಯುತ್ತಿರುವ ಈ ಗಾಯತ್ರಿ ಮಂತ್ರ ಪಠಣ ನಡೆಯುತ್ತಿರುವುದು ದಾವಣಗೆರೆಯ ಶ್ರೀ ಕೃಷ್ಣ ಸೇವಾ ಟ್ರಸ್ಟ್‌ನ ಸಹಯೋಗದಲ್ಲಿ ನಡೆಯುತ್ತಿರುವ ಈ ರಜತ ಮಹೋತ್ಸವಕ್ಕೆ ಭಾಗವಹಿಸುವವರು 9845277088, 9448979957, 9538732777, 9342441194 ಈ ಸನೀಹವಾಣಿಗಳಿಗೆ ಸಂಪರ್ಕಿಸಿ ಹೆಸರು ನೊಂದಾಯಿಸಬೇಕಾಗಿ ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್ ಶೆಣ್ಯೆ ಹಾಗೂ ಸಂಚಾಲಕರಾದ ಭಾವನ್ನಾರಾಯಣರವರು ವಿನಂತಿಸಿದ್ದಾರೆ.

## ವಸತಿ ಭದ್ರತೆ, ನ್ಯಾಯ ಪರಿಹಾರಕ್ಕೆ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿಯಿಂದ ಧರಣಿ ಸತ್ಯಾಗ್ರಹ

**ದಾವಣಗೆರೆ:** ದಾವಣಗೆರೆ ಮಹಾ ನಗರ ಪಾಲಿಕೆ ವ್ಯಾಪ್ತಿಯ ಆವರಗೆರೆ ದನವಿನ ಓಣಿ ಗೋಮಾಳದಲ್ಲಿ ವಸತಿ ನಿವೇಶನ ರಹಿತ ನಿರಾಶ್ರಿತರ ಗುಡಿಸಲುಗಳ ತೆರವು ಕಾರ್ಯಾಚರಣೆಯಿಂದ ಬೀದಿ ಪಾಲಾಗಿರುವ ಸಂತ್ರಸ್ತರಿಗೆ ವಸತಿ ಭದ್ರತೆ, ನ್ಯಾಯ ಪರಿಹಾರಕ್ಕೆ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ವತಿಯಿಂದ ನಗರದ ಎಸಿ ಕಚೇರಿ ಮುಂಭಾಗ ಧರಣಿ ಸತ್ಯಾಗ್ರಹ ನಡೆಸಲಾಯಿತು.

ಗುರುವಾರ ಎಸಿ ಕಚೇರಿ ಮುಂಭಾಗ ಸಮಿತಿ ಸದಸ್ಯರು ಹಾಗೂ ಆವರಗೆರೆ ದನವಿನ ಓಣಿ ಗೋಮಾಳದಲ್ಲಿ ವಸತಿ ನಿವೇಶನ ರಹಿತ ನಿರಾಶ್ರಿತರು ಧರಣಿ ಸತ್ಯಾಗ್ರಹ ನಡೆಸಿ ಉಪವಿಭಾಗಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಈ ವೇಳೆ ಸಮಿತಿ ರಾಜ್ಯ ಸಂಚಾಲಕ ಹೆಚ್ ಮಲ್ಲೇಶ್ ಮಾತನಾಡಿ ಕಳೆದ 2022 ರಂದು ಬೆಳಗಿನ ಜಾವ 2 ಗಂಟೆ ಸಮಯದಲ್ಲಿ ಆವರಗೆರೆ ದನವಿನ ಓಣಿ ಗೋಮಾಳದಲ್ಲಿ ವಸತಿ ನಿವೇಶನ ರಹಿತ ನಿರಾಶ್ರಿತರು ನಿರ್ಮಿಸಿಕೊಂಡಿದ್ದ 250–300 ಬಡ ಕುಟುಂಬಗಳ ಗುಡಿಸಲುಗಳನ್ನು ನೆಲ ಸಮಗೊಳಿಸುವ ಮೂಲಕ ಯಾವುದೇ ಮಾಹಿತಿ ಸೂಚನೆ ನೀಡದೆ ಜಿಲ್ಲಾಧಿಕಾರಿಗಳವರ ಮೌಖಿಕ ನಿರ್ದೇಶನದಂತೆ ದಾವಣಗೆರೆ ಮಹಾನಗರ ಪಾಲಿಕೆ ಆಯುಕ್ತರು, ತಾಲ್ಲೂಕು ತಹಶೀಲ್ದಾರವರು ತಮ್ಮ ಸಿಬ್ಬಂದಿಯೊಂದಿಗೆ ಪೊಲೀಸ್ ಬಲಪ್ರಯೋಗಿಸಿ ಸರ್ಕಾರದ ಜೆಸಿಬಿ ಯಂತ್ರ ಟ್ರಾಕ್ಟರ್ ಮೂಲಕ ಧ್ವಂಸಗೊಳಿಸಿ ಅಮಾಯಕರನ್ನು ಬೀದಿ ಪಾಲು ಮಾಡಿರುತ್ತಾರೆ ಎಂದರು. ಆನಂತರ ನಮ್ಮ ಉಗ್ರ ಹೋರಾಟದ ಫಲವಾಗಿ ಕೆಲವರಿಗೆ ನಿವೇಶನದ ಹಕ್ಕು ಪತ್ರ ನೀಡಲಾಗಿದ್ದು, ಇನ್ನೂ ಕೆಲವರಿಗೆ ನೀಡಿಲ್ಲ ಎಂದರು.ಪ್ರಸ್ತುತ ಅದೇ ದನವಿನ ಓಣಿ ಸೇರಿದಂತೆ ಅಲ್ಲಲ್ಲಿ ಅನುಕೂಲ ಸ್ಥಳದಲ್ಲಿ ವಾಸವಾಗಿರುವ ಸಂತ್ರಸ್ತರಿಗೆ ಪುನಃ ಒಕ್ಕಲೆಬ್ಬಿಸುವ ಹುನ್ನಾರ ಮುಂದುವರೆದಿರುತ್ತದೆ. ವಸತಿ ರಹಿತರ ವಿಚಾರಕ್ಕೆ ಸರ್ಕಾರದ ಸರಿಯಾದ ಯೋಜನೆ ಮತ್ತು ಆಧ್ಯತೆ ಇಲ್ಲದಿರುವುದರಿಂದ ಕುಟುಂಬಗಳು ಬೆಳೆದಂತೆ ವಾಸಕ್ಕೆ ಜಾಗ ಸಾಕಾಗದೆ ಕುಟುಂಬ ದೊಳಗೆ ಆಂತರಿಕ ಕಲಹ ಉಂಟಾಗುತ್ತಿದೆ. ಈ ವೇಳೆ ಸಮಿತಿ ಲೋಕೇಶ್ ಹಾಲೇಕಲ್ಲು, ಸಮಾದೆಪ್ಪ, ಗಿರೀಶ್, ಚಂದ್ರಪ್ಪ, ಶಿವು, ಹೂಸಂಗಪ್ಪ, ಚನ್ನಬಸಪ್ಪ, ಪ್ರವೀಣ್ ಇತರರು ಇದ್ದರು.

## ಸಾಲಿಗ್ರಾಮ ಗಣೇಶ್ ಶೆಣ್ಯೆಯವರು "ಕದಂಬ ಕಲಾರಾಧಕ" ರಾಜ್ಯ ಪ್ರಶಸ್ತಿಗೆ ಆಯ್ಕೆ



**ದಾವಣಗೆರೆ:** ಕಲೆ, ಸಾಹಿತ್ಯ, ಸಂಗೀತ, ಸಂಸ್ಕೃತಿಗಳ ಆರಾಧಕರಾದ ಕನ್ನಡದ ಅಸ್ಮಿತೆಯನ್ನು ಶ್ರೀಮಂತಗೊಳಿಸುವ ಕಾಯಕದಲ್ಲಿ ಕಂಕಣಬದ್ಧರಾಗಿ ಕಳೆದ ನಾಲ್ಕು ದಶಕಗಳಿಂದ "ದಾವಣಗೆರೆಯ ಸಾಂಸ್ಕೃತಿಕ ರಾಯಭಾರಿ"ಯಾಗಿ ನಾಡಿನಾದ್ಯಂತ ಸ್ವಯಂ ಪ್ರೇರಣೆಯಿಂದ ನಿರಂತರವಾಗಿ ಹೊಸ ಹೊಸ ಸಾಂಸ್ಕೃತಿಕ ಪರಿಕಲ್ಪನೆಗಳೊಂದಿಗೆ ಅನನ್ಯ ಸೇವೆಗಳನ್ನು ಪರಿಗಣಿಸಿ ಸಾಲಿಗ್ರಾಮ ಗಣೇಶ್ ಶೆಣ್ಯೆಯವರನ್ನು "ಕದಂಬ ಕಲಾರಾಧಕ" ರಾಜ್ಯ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಉತ್ತರ ಕನ್ನಡ ಜಿಲ್ಲೆಯ ಶಿರಶಿಯ ಕದಂಬ ಕಲಾ ಸಾಂಸ್ಕೃತಿಕ ಪರಿಷತ್ತು ಹಾಗೂ ಕರ್ನಾಟಕ ಸಗಮ ಸಂಗೀತ ಪರಿಷತ್ ಸಹಯೋಗದಲ್ಲಿ 12–10–2025 ರಂದು ಆಯೋಜಿಸಿರುವ ಶಿರಶಿಯ ಹೋಟೆಲ್ ಸುಪ್ರಿಯಾ ಇಂಟರ್ ನ್ಯಾಷನಲ್ ಸಭಾಂಗಣದಲ್ಲಿ ಕಾವೆಂಶ್ರೀ "ಕಾವ್ಯಯಾನ–ಭಾವಯಾನ" ಶತಕಂಠ ಗೀತಗಾಯನ ಮತ್ತು ಪುಸ್ತಕ ಲೋಕಾರ್ಪಣೆ ಸಮಾರಂಭದಲ್ಲಿ ಶೆಣ್ಯೆಯವರಿಗೆ ಈ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಕದಂಬ ಕಲಾ ಸಾಂಸ್ಕೃತಿಕ ಪರಿಷತ್ತು ಹಾಗೂ ಕರ್ನಾಟಕ ಸಗಮ ಸಂಗೀತ ಪರಿಷತ್‌ನ ಅಧ್ಯಕ್ಷರಾದ ಕದಂಬ ರತ್ನಾಕರ ತಿಳಿಸಿದ್ದಾರೆ.

ಕರ್ನಾಟಕ ಸಗಮ ಸಂಗೀತ ಪರಿಷತ್ ಸೇರಿದಂತೆ, ಕಲಾಕುಂಚ, ಯಕ್ಷರಂಗ, ಸಿನಿಮಾಸಿರಿ, ಶ್ರೀಮತಿ ಸರಸ್ವತಿ ದಾಸಪ್ಪ ಶೆಣ್ಯೆ ಪ್ರತಿಷ್ಠಾನ, ದಾವಣಗೆರೆ ಜಿಲ್ಲಾ ಛಾಯಾಗ್ರಾಹಕ ಸಂಘ, ಕರಾವಳಿ ಮಿತ್ರ ಮಂಡಳಿ, ಶ್ರೀ ಗಾಯತ್ರಿ ಪರಿವಾರ, ಕನ್ನಡ ಸಾಹಿತ್ಯ ಪರಿಷತ್ತು ಮುಂತಾದ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸರ್ವ ಸದಸ್ಯರು, ಶೆಣ್ಯೆಯವರಿಗೆ ಅಭಿಮಾನದಿಂದ ಅಭಿನಂದನೆ ಸಲ್ಲಿಸಿದ್ದಾರೆ.

### ಹಿರಿಯ ವಕೀಲರಾದ ಜಯರಾಜ್ ನಾಯ್ಕ್ ಅಭಿಮತ

# ವಿಶ್ವ ವಿದ್ಯಾಲಯ ಕಲಿಸದ ಬದುಕಿನ ಪಾಠ ಜಾನಪದ ತೋರಿಸುತ್ತದೆ



**ದಾವಣಗೆರೆ :** ಯಾವುದೇ ವಿಶ್ವ ವಿದ್ಯಾಲಯಗಳು ಕಲಿಸದ ಬದುಕಿನ ಪಾಠಗಳನ್ನು ಜಾನಪದ ಕಲೆಗಳು ಕಲಿಸುತ್ತವೆ ಎಂದು ಹಿರಿಯ ವಕೀಲರಾದ ಜಯರಾಜ್ ನಾಯ್ಕ್ ಹೇಳಿದರು.

ಗುರುವಾರ ನಗರದ ಗುಂಡಿ ಮಹಾದೇವಪ್ಪ ಕಲ್ಯಾಣ ಮಂದಿರದಲ್ಲಿ ವಾಲ್ಮೀಕಿ ಪ್ರತಿಷ್ಠಾನ ಮತ್ತು ಸಾರ್ವಜನಿಕ ವಾಲ್ಮೀಕಿ ಜಯಂತ್ಯೋತ್ಸವ ಸಮಿತಿ ಆಶ್ರಯದಲ್ಲಿ ಹಮ್ಮಿಕೊಂಡಿರುವ 4 ನೇ ವರ್ಷದ ಸಾರ್ವಜನಿಕ ವಾಲ್ಮೀಕಿ ಜಯಂತಿ ಕಾರ್ಯಕ್ರಮದ 2 ನೇ ದಿನದ ಕಾರ್ಯಕ್ರಮದಲ್ಲಿ ರಾಜ್ಯಮಟ್ಟದ ಭಜನಾ ಸ್ಪರ್ಧೆಯಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

ಗ್ರಾಮೀಣ ಕಲೆ ಮತ್ತು ಕಲಾವಿದರನ್ನು ಪ್ರೋತ್ಸಾಹಿಸುವ ಹಿನ್ನೆಲೆಯಲ್ಲಿ ವಾಲ್ಮೀಕಿ ಜಯಂತಿ ಅಂಗವಾಗಿ ಈ ರೀತಿಯ ಸ್ಪರ್ಧೆಗಳನ್ನು ಆಯೋಜಿಸಿರುವುದು ವಿಶೇಷವಾಗಿದೆ. ವಾಲ್ಮೀಕಿ ಜಯಂತಿ ಕೇವಲ ನಾಯಕ ಜನಾಂಗಕ್ಕೆ ಮಾತ್ರ ಸೀಮಿತವಲ್ಲ. ಎಲ್ಲ ಜಾತಿಯ ಜನರು ಜಯಂತಿಯಲ್ಲಿ ಭಾಗವಹಿಸಿರುವುದು ಸಂತೋಷದ ವಿಚಾರ ಎಂದರು.

ಸಾಮಾನ್ಯವಾಗಿ ಪ್ರತಿ ಗ್ರಾಮದಲ್ಲೂ ಹರ್ಮೋನಿಯಂ ಕಲಿಸುವ ಶಿಕ್ಷಕ ಇರುತ್ತಾರೆ. ಒಂದು ವೇಳೆ ಹರ್ಮೋನಿಯಂ ಶಿಕ್ಷಕ ನಿಧನರಾದಾಗ ಅಥವಾ ಆರೋಗ್ಯ ಸಮಸ್ಯೆ ಕಂಡು ಬಂದರೆ ಅ ಗ್ರಾಮಗಳಲ್ಲಿ ಭಜನಾ ತಂಡಗಳೇ ತೆರೆಮರೆಗೆ ಸರಿದುಬಿಡುತ್ತವೆ. ಆದ್ದರಿಂದ ಇಂಥಹ ಗಟ್ಟಿ ಕಲೆಯಾದ ಭಜನಾ ಪರಂಪರೆಯನ್ನು ಮುಂದುವರಿಸಲು ಯುವಕರನ್ನು ತಯಾರು ಮಾಡಬೇಕು. ಈ ಜವಾಬ್ದಾರಿಯನ್ನು ಹರ್ಮೋನಿಯಂ ಶಿಕ್ಷಕರು ಹೊರಬೇಕು. ಆಗ ಭಜನಾ ಮಂಡಳಿಗಳು ಶಾಶ್ವತವಾಗಿ ಉಳಿಯುತ್ತವೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಅಧ್ಯಕ್ಷ ಹುಚ್ಚವ್ವನಹಳ್ಳಿ ಮಂಜುನಾಥ್ ಮಾತನಾಡಿ, ಸರ್ಕಾರಗಳು ಕೂಡ ಭಜನಾ ಕಲಾವಿದರಿಗೆ ಮಾಸಾಶನ ಸೇರಿದಂತೆ ಹಲವು ಸೌಲಭ್ಯಗಳನು ನೀಡಿ ಪ್ರೋತ್ಸಾಹಿಸಬೇಕಾದ ಅಗತ್ಯವಿದೆ. ಯಾವುದೇ ವಿಶ್ವ ವಿದ್ಯಾಲಯಗಳು ಭಜನಾ ಪದಗಳನ್ನು ಕಲಿಸುವುದಿಲ್ಲ. ಆದರೆ ಒಂದು ಬಾರಿ ಭಜನಾ ಪದಗಳನ್ನು ಕಲಿತರೆ ವ್ಯಕ್ತಿ ಸಾಯುವವರೆಗೂ ಆತನ ನಾಲಿಗೆಯ ಮೇಲೆ ಪದಗಳು ನಲಿದಾಡುತ್ತಿರುತ್ತವೆ. ಅಂತಹ ಜ್ಞಾಪಕ ಶಕ್ತಿಯನ್ನು ಭಜನಾ ಪದಗಳು ಕಲಿಸಿಕೊಡುತ್ತವೆ ಎಂದರು.

ಭಜನೆ ಮೊದಲಾದ ಕಲಾ ಪ್ರಕಾರಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಮೊಬೈಲ್ ಚಟದಿಂದ ಮಕ್ಕಳನ್ನು ಹೊರತರಬಹುದಾಗಿದೆ ಅಷ್ಟೇ ಅಲ್ಲದೇ ಶ್ರೀಮಂತ ಕಲಾ ಪ್ರಕಾರಗಳನ್ನು ಮುಂದುವರಿಸಿಕೊಂಡು ಹೋಗಬಹುದಾಗಿದೆ ಎಂದು ಹೇಳಿದರು.

ವಿಜೇತ ತಂಡಗಳಿಗೆ ಬಹುಮಾನ ವಿತರಿಸಿ ಮಾತನಾಡಿದ ಪ್ರಗತಿ ಪರ ರೈತ ಹೆದ್ನೆ ರಾಜೇಂದ್ರ, ಈ ರೀತಿಯ ಕಾರ್ಯಕ್ರಮಗಳ ಮೂಲಕ ಯುವಜನರು ಹಾಗೂ ಮಹಿಳೆಯರಲ್ಲಿ ಜಾಗೃತಿ ಮೂಡಿಸುವ ಮತ್ತು ಜಾನಪದ ಕಲಾ ಪರಂಪರೆಗಳನ್ನು ಮುಂದುವರಿಸಿಕೊಂಡು ಹೋಗುತ್ತಿರುವ ಸಂಪ್ರದಾಯ ಶ್ಲಾಘನೀಯ. ಕಳೆದ 4 ವರ್ಷಗಳಿಂದ ವಾಲ್ಮೀಕಿ ಪ್ರತಿಷ್ಠಾನ ಮತ್ತು ಸಾರ್ವಜನಿಕ ವಾಲ್ಮೀಕಿ ಜಯಂತ್ಯೋತ್ಸವ ಸಮಿತಿ ನೆಡೆಸುತ್ತಿರುವ ಈ ಕಾರ್ಯಕ್ರಮ ಭವಿಷ್ಯದಲ್ಲಿ ರಾಜ್ಯಮಟ್ಟದ ಜಯಂತಿ ಆಗಿ ಆಚರಣೆಗೊಳ್ಳಲಿ ಎಂದು ಆಶಿಸಿದರು.

ವೇದಿಕೆ ಮೇಲೆ ಅಣಜಿ ಶಿವಮೂರ್ತೆಪ್ಪ, ದ್ಯಾಮೇನಹಳ್ಳಿ ಕುಬೇಂದ್ರಪ್ಪ, ಪಾಮೇನಹಳ್ಳಿ ಗೌಡರ ರಾಜ ಶೇಖರಪ್ಪ, ಮಾಯಕೊಂಡದ ಮುಂಡರಗಿ ರಾಮಣ್ಣ, ರಾಜನಹಟ್ಟಿ ರಾಜು, ಹೂವಿನ ಮಡು ನಾಗರಾಜ್, ಚಿರಂಜೀವಿ, ಕುರ್ಕಿ ಹನುಮಂತ ಮೊದಲಾದವರು ಉಪಸ್ಥಿತರಿದ್ದರು.ರಾಜ್ಯದ ಬಾಗಲಕೋಟೆ, ಗದಗ, ಧಾರವಾಡ, ಚಿತ್ರದುರ್ಗ, ದಾವಣಗೆರೆ, ಹಿರಿಯೂರು, ಕೂಡ್ಲಿಗಿ, ಬಳ್ಳಾರಿ ಸೇರಿದಂತೆ ವಿವಿಧ ಜಿಲ್ಲೆಗಳ 21 ತಂಡಗಳು ಸ್ಪರ್ಧೆಯಲ್ಲಿ ಭಾಗಿಯಾಗಿದ್ದವು. ಮೊದಲ ಬಹುಮಾನಕ್ಕೆ ಪಾತ್ರವಾದ ಶಬರಿ ದೇವಿ ಭಜನಾ ಮಂಡಳಿ ರಾಮದುರ್ಗ ಬೆಳಗಾವಿ ಜಿಲ್ಲೆ ಇವರಿಗೆ 30 ಸಾವಿರ ರೂ, ಎರಡನೇ ಬಹುಮಾನಕ್ಕೆ ಪಾತ್ರವಾದ ಬಸವೇಶ್ವರ ಭಜನಾ ಮಂಡಳಿ ಬಾಗಲಕೋಟೆ ಇವರಿಗೆ 20 ಸಾವಿರ ರೂ ಮತ್ತು ಮೂರನೇ ಬಹುಮಾನ ಪಡೆದ ದುರ್ಗಾದೇವಿ ತಂಡ ರೋಣ ಗದಗ ಜಿಲ್ಲೆ ಇವರಿಗೆ 10 ಸಾವಿರ ರೂ ನಗದು ಮತ್ತು ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು.

## ಗ್ಯಾರಂಟಿ ಸಭೆ 14 ರಂದು

**ದಾವಣಗೆರೆ:** ಪ್ರಸಕ್ತ ಸಾಲಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಶಾಮನೂರು ಟಿ. ಬಸವರಾಜ್ ಅಧ್ಯಕ್ಷತೆಯಲ್ಲಿ ಅ.14 ರಂದು ಮಧ್ಯಾಹ್ನ 3.30ಕ್ಕೆ ನಗರದ ಜಿಪಂ ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಪಂ ಸಿಇಒ ಗಿತ್ತೆ ಮಾಧವ್ ವಿಠಲರಾವ್ ತಿಳಿಸಿದ್ದಾರೆ.

## ಲೋಕ್ ಅದಾಲತ್ ಡಿ.13ಕ್ಕೆ

**ದಾವಣಗೆರೆ:** ಕರ್ನಾಟಕ ಉಚ್ಚನ್ಯಾಯಾಲಯ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ನಿರ್ದೇಶನದಂತೆ ಡಿಸೆಂಬರ್ 13ರಂದು ಜಿಲ್ಲೆಯ ಎಲ್ಲಾ ನ್ಯಾಯಾಲಯಗಳಲ್ಲಿ ಬೃಹತ್ ಲೋಕ್ ಅದಾಲತ್ ಆಯೋಜಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧಿ ಶ ಮಹಾವೀರ ಮ.ಕರೆಣ್ಣವರ ತಿಳಿಸಿದ್ದಾರೆ.

## ದೇವದಾಸಿ ಮರುಸಮೀಕ್ಷೆ

**ದಾವಣಗೆರೆ:** ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಗೆ ಅರ್ಜಿ ಸಲ್ಲಿಸಲು ಅ.18 ಕೊನೆಯ ದಿನವಾಗಿದೆ. ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಕಡಿಮೆಯಾಗಿರುವ ಕಾರಣ ಮಾಜಿ ದೇವದಾಸಿಯವರ ಹಿತದೃಷ್ಟಿಯಿಂದ ದಿನಾಂಕವನ್ನು ಮುಂದೂಡಲಾಗಿದೆ. ಈ ಹಿನ್ನೆಲೆಯಲ್ಲಿ ಸದರಿ ಸಮೀಕ್ಷೆಗೆ ಭಾಗವಹಿಸಲು ಬಯಸುವ ಮಾಜಿ ದೇವದಾಸಿ ಮಹಿಳೆಯರು ಮತ್ತು ಅವರ ಕುಟುಂಬದವರು ನಮೂನೆ 1,2,3ರಲ್ಲಿ ಅರ್ಜಿ ಸಲ್ಲಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

## ಲೋಕಾಯುಕ್ತರಿಂದ ಕಾಮಗಾರಿ ಪರಿಶೀಲನೆ

**ಹರಿಹರ:** 2020–21ನೇ ಸಾಲಿನಲ್ಲಿ ನಗರದ ವಿದ್ಯಾದಾಯಿನಿ ಶಾಲೆ ಹತ್ತಿರ ಸಿ.ಸಿ. ಚರಂಡಿ ಕಾಮಗಾರಿಯಲ್ಲಿ ನಗರಸಭೆಗೆ ನಷ್ಟ ಉಂಟು ಮಾಡಲಾಗಿದೆ ಎಂದು ಗುತ್ತಿಗೆದಾರ ಮೊಹಮ್ಮದ್ ಮಜರ್ ಎಂಬುವರು ಲೋಕಾಯುಕ್ತಕ್ಕೆ ನೀಡಿದ್ದ ದೂರು ಆಧರಿಸಿ, ಬುಧವಾರ ಲೋಕಾಯುಕ್ತ ಅಧಿ ಕಾರಿಗಳು ಸ್ಥಳ ಪರಿಶೀಲನೆ ನಡೆಸಿದರು.ಸಿ.ಸಿ.ಚರಂಡಿ ಕಾಮಗಾರಿಯು ದಾಖಲೆ ಪ್ರಕಾರ 111 ಮೀ. ಇರಬೇಕಿತ್ತು. ಆದರೆ, ಅದು 93 ಮೀ. ಮಾತ್ರ ಇರುವುದು ಪರಿಶೀಲನೆಯಿಂದ ದೃಢಪಟ್ಟಿದೆ ಎಂದು ದೂರುದಾರ ಮೊಹಮ್ಮದ್ ಮಾಹಿತಿ ನೀಡಿದರು.

ಈ ವೇಳೆ ನಗರಸಭೆ ಎಇಇ ನವೀನ್ ಕುಮಾರ್, ಎಇ ಪ್ರಕಾಶ್, ನಿವೃತ್ತ ಎಇಇ ಎಸ್.ಎಸ್. ಬಿರಾದರ್, ಎಇ ಅಬ್ದುಲ್ ಹಮೀದ್, ನಗರಸಭೆ ಸದಸ್ಯ ರಜನಿಕಾಂತ್, ಸೈಯದ್ ಶಾಹೀದ್, ಸಿಬ್ಬಂದಿ ಇದ್ದರು.

# ಎಐಎಂಐಎಂ ಪಕ್ಷದ ಜಿಲ್ಲಾಧ್ಯಕ್ಷರಾಗಿ ಮುಹಮ್ಮದ್ ಅಲಿ ಶೋಯಿಬ್ ಆಯ್ಕೆ



**ದಾವಣಗೆರೆ:** ಅಖಿಲ ಭಾರತ ಮಜ್ಲಿಸ್–ಎ–ಇತ್ತೆಹಾದುಲ್ ಮುಸ್ಲಿಮೀನ್ (ಎಐಎಂಐಎಂ) ಪಕ್ಷದ ಜಿಲ್ಲಾಧ್ಯಕ್ಷರಾಗಿ ಮುಹಮ್ಮದ್ ಅಲಿ ಶೋಯಿಬ್ ಎರಡನೇ ಬಾರಿಗೆ ಎರಡನೇ ಬಾರಿಗೆ ನೇಮಕಗೊಂಡಿದ್ದಾರೆ.

ಜಿಲ್ಲಾ ಕಾರ್ಯದರ್ಶಿಯಾಗಿ ಮುಹಮ್ಮದ್ ಅಜ್ಮತ್ ಉಲ್ಲಾ, ಜಂಟಿ ಕಾರ್ಯದರ್ಶಿ ಮೊಹಮ್ಮದ್ ತಹೀರ್ ಅಲಿ, ಖಜಾಂಚಿ ಮೊಹಮ್ಮದ್ ಸನಾಉಲ್ಲಾ, ಸಂಘಟನಾ ಕಾರ್ಯದರ್ಶಿ ಮೌಲಾನಾ ಏಜಾಜ್ ರಜಾ ಕಾದ್ರಿ, ಜಿಲ್ಲಾ ಕಮಿಟಿಯ ಸದಸ್ಯರಾಗಿ ಮುಹಮ್ಮದ್ ಶುಐಬ್ ಅಖ್ತರ್, ಹಫಿಜ್ ಮೊಹಮ್ಮದ್ ಜವೀದ್, ಶೋಕತ್ ಅಲಿ, ಮನ್ಸೂರ್ ಅಲಿ, ಮುಹಮ್ಮದ್ ಅಫ್ತಾಬ್ ಮತ್ತು ಮುಹಮ್ಮದ್ ಫುರ್ಖಾನ್ ಅವರನ್ನು ನೇಮಕ ಮಾಡಿ ಪಕ್ಷದ ರಾಜ್ಯಾಧ್ಯಕ್ಷ ಲತೀಫ್ ಖಾನ್, ಅಮೀರ್ ಖಾನ್ ಪಠಾನ್ ಅವರು ಆದೇಶಿಸಿದ್ದಾರೆ.

## ನಿಧನ ಸುದ್ದಿಗಳು

### ಮಠದ ಗೌರಮ್ಮ ನಿಧನ

**ಹಿರೇಕೋಗಲೂರು:** ಚನ್ನಗಿರಿ ತಾಲೂಕುಹಿರೇಕೋಗಲೂರು ಗ್ರಾಮದ ಮಠದ ಗೌರಮ್ಮ (87) ವಯೋಸಹಜ ಕಾಯಿಲೆಯಿಂದ ಗುರುವಾರ ಬೆಳಗ್ಗೆ ನಿಧನರಾದರು. ಮೃತರಿಗೆ ಇಬ್ಬರು ಪುತ್ರರು, ಒಬ್ಬ ಪುತ್ರಿ ಇದ್ದಾರೆ. ಗುರುವಾರ ಸಂಜೆ ಮೃತರ ಜಮೀನನಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು ಎಂದು ಕುಟುಂಬದವರು ತಿಳಿಸಿದ್ದಾರೆ .

### ಹನುಮಂತಪ್ಪ ನಿಧನ

**ಮಲೇಬೆನ್ನೂರು:** ಸಮೀಪದ ಹಿರೆಹಾಲಿವಾಣದ ನಿವಾಸಿ ಕೋಲ್ಕುಂಟೆ ಹನುಮಂತಪ್ಪ (72) ಮಂಗಳವಾರ ನಿಧನರಾದರು. ಮೃತರಿಗೆ ಪತ್ನಿ ಇದ್ದಾರೆ. ಸಂಜೆ ಅಂತ್ಯಕ್ರಿಯೆ ನಡೆಯಿತು.

# ಸುಪ್ರೀಂ ಪೀಠಕ್ಕೆ ಶೂ ಎಸೆದಿರುವುದು ಖಂಡಿಸಿ ಮನವಿ ಸಲ್ಲಿಕೆ

**ದಾವಣಗೆರೆ:** ಸರ್ವೋಚ್ಚ ನ್ಯಾಯಾಲಯದ ನ್ಯಾಯಾಧೀಶರ ಮೇಲೆ ಶೂ ಎಸೆದಿರುವ ಘಟನೆ ಖಂಡಿಸಿ ದಾವಣಗೆರೆ ಜಿಲ್ಲಾ ವಕೀಲರ ಸಂಘದಿಂದ ಕೈಗೆ ಕೆಂಪು ಪಟ್ಟಿ ಧರಿಸಿ ಜಿಲ್ಲಾಡಳಿತದ ಮುಂದೆ ಪ್ರತಿಭಟನೆ ನಡೆಸಲಾಯಿತು.

ಸಂಘದ ವಕೀಲ ಸದಸ್ಯರು ನ್ಯಾಯಾಲಯದ ಎಲ್ಲಾ ಕಲಾಪಗಳಲ್ಲಿ ಕೆಂಪು ಪಟ್ಟಿ ಬಲಗೈಗೆ ಧರಿಸಿ ಪಾಲ್ಗೊಳ್ಳುವುದಾಗಿ ಜಿಲ್ಲಾಡಳಿತದಿಂದ ಸಂಬಂಧಪಟ್ಟ ಇಲಾಖೆಗೆ ರವಾನಿಸಲು ಮನವಿ ಪತ್ರ ಸಲ್ಲಿಸಿದರು.

ಇದೆ ವೇಳೆ ಮಾತನಾಡಿದ ಸಂಘದ ಉಪಾಧ್ಯಕ್ಷ ಕೆ ಜಿ ಕೆ ಸ್ವಾಮಿ, ಸುಪ್ರೀಂ ನ್ಯಾಯಮೂರ್ತಿಗಳ ಮೇಲೆ ವಕೀಲ ರಾಕೇಶ್ ಕಿಶೋರ್ ಎನ್ನುವ ವ್ಯಕ್ತಿ ಶೂ ಎಸೆದು ಅನುಚಿತ ವರ್ತನೆ ತೋರಿರುವುದು ಖಂಡನೀಯ. ಈಗಾಗಲೇ ಸಂಘದ ಸದಸ್ಯರ ತುರ್ತು ಸಭೆಯನ್ನು ಕರೆದು ಘಟನೆಯನ್ನು ವಿರೊಧಿಸಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಖಜಾಂಚಿ ಜೆ.ಈ ವನಜಾಕ್ಷಿ, ಎಚ್.ಕೆ ಅಮೃತ್, ಗುಮ್ಮನೂರು ಮಲ್ಲಿಕಾರ್ಜುನ, ಕೆ. ಮಂಜುಳಾ, ಎಂ. ಚೌಡಪ್ಪ, ಕೆ. ಅಣ್ಣಪ್ಪ, ಎಚ್.ಕೆ. ಅಮೃತ ಸೇರಿದಂತೆ ಇತರರು ಹಾಜರಿದ್ದರು.

# ಕತ್ತಿಯಿಂದ ಕಡಿದ ಅಪರಾಧಿಗೆ 6 ವರ್ಷ ಕಠಿಣ ಸಜೆ

**ಚಿಕ್ಕಮಗಳೂರು:** ಕೇವಲ 3 ಸಾವಿರ ರೂ. ಸಾಲ ಮರಳಿಸದ ಸಿಟ್ಟಿನಲ್ಲಿ ವ್ಯಕ್ತಿಯೊಬ್ಬರನ್ನು ಕತ್ತಿಯಿಂದ ಕಡಿದು ತೀವ್ರವಾಗಿ ಗಾಯಗೊಳಿಸಿದ್ದ ಆಪಾದಿತನಿಗೆ ನಗರದ ಒಂದನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವು ಆರು ವರ್ಷಗಳ ಸಜೆ ಮತ್ತು ದಂಡ ವಿಧಿಸಿ ತೀರ್ಪು ನೀಡಿದೆ.

ಚಿಕ್ಕಮಗಳೂರು ತಾಲ್ಲೂಕು ಆಲ್ದೂರು ಹೋಬಳಿ ಅಡ್ಡಮಕ್ಕಿಯ ಕಾಫಿ ತೋಟದ ಕೂಲಿ ಕಾರ್ಮಿಕ ಅಸ್ಸಾಂ ಮೂಲದ ಕೋರ್ನೋ ಬಹದ್ದೂರು ರೈ ಎಂಬಾತನೇ ಶಿಕ್ಷೆಗೆ ಒಳಗಾದವ. ಈತ ರಶೀದುಲ್ಲ ಎಂಬಾತನೊಂದಿಗೆ ವಾಸವಾಗಿದ್ದು, ರಶೀದುಲ್ಲ ಈತನಿಗೆ 3 ಸಾವಿರ ರೂ.ಗಳ ಸಾಲ ಬಾಕಿ ಉಳಿಸಿಕೊಂಡಿದ್ದ ಎನ್ನಲಾಗಿದೆ. 2023ರ ಜೂನ್ 20 ರಂದು ಸಂಜೆ ಈ ವಿಚಾರದ ಪ್ರಶ್ನಿಸಿದ ಬಹದ್ದೂರು ರೈ ಕತ್ತಿಯಿಂದ ರಶೀದುಲ್ಲನ ತಲೆಯ ಭಾಗಕ್ಕೆ ಕಡಿಯಲು ಯತ್ನಿಸಿದ್ದು, ಇದನ್ನು ತಡೆಯಲು ಯತ್ನಿಸಿದಾಗ ರಶೀದುಲ್ಲನ ಕೈ ತುಂಡಾಗಿತ್ತು ಎನ್ನಲಾಗಿದೆ.

ಈ ಬಗ್ಗೆ ಆಲ್ದೂರು ಪೊಲೀಸರು ಪ್ರಕರಣ ದಾಖಲಿಸಿ ಆರೋಪಿಯ ವಿರುದ್ಧ ಐಪಿಸಿ ಕಲಂ 506, 307, 326, 324ರ ಅನ್ವಯ ಪ್ರಕರಣ ದಾಖಲಿಸಿ ಆತನ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಪ್ರಕರಣಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ನ್ಯಾಯಾಧೀಶರಾದ ಬಿ.ಸಿ.ಭಾನುಮತಿ ಅವರು ಸಾಕ್ಷಿದಾರರ ವಿಚಾರಣೆ ನಡೆಸಿದ ಸಂದರ್ಭ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಆಪಾದಿತನಿಗೆ ಐಪಿಸಿ 307ರ ಅನ್ವಯ 6 ವರ್ಷಗಳ ಕಠಿಣ ಸಜೆ, 10 ಸಾವಿರ ರೂ. ದಂಡ ವಿಧಿಸಿದ್ದು, ದಂಡ ಪಾವತಿಸಲು ತಪ್ಪಿದಲ್ಲಿ 6 ತಿಂಗಳ ಸಾದಾ ಸಜೆ ಅನುಭವಿಸಲು ತೀರ್ಪಿನಲ್ಲಿ ತಿಳಿಸಿದ್ದಾರೆ.

ಕಲಂ 326 ಐಪಿಸಿ ಅಡಿಯ ಅಪರಾಧಕ್ಕಾಗಿ ಆತನಿಗೆ 5 ವರ್ಷ ಕಠಿಣ ಸಜೆ, 5 ಸಾವಿರ ರೂ. ದಂಡ ವಿಧಿಸಿದ್ದು, ದಂಡ ತೆರಲು ತಪ್ಪಿದಲ್ಲಿ ಮತ್ತೆ 6 ತಿಂಗಳ ಸಾದಾ ಸಜೆ, ಕಲಂ 324 ರಡಿ ಅಪರಾಧಕ್ಕಾಗಿ 2 ವರ್ಷ ಕಠಿಣ ಸಜೆ ಹಾಗೂ 3 ಸಾವಿರ ರೂ. ದಂಡ ವಿಧಿಸಿದ್ದು, ದಂಡ ಪಾವತಿಸಲು ತಪ್ಪಿದಲ್ಲಿ ಒಂದು ತಿಂಗಳ ಸಾದಾ ಸಜೆ, ಕಲಂ 506ರ ಐಪಿಸಿ ಅಡಿಯ ಅಪರಾಧಕ್ಕಾಗಿ 1 ವರ್ಷ ಕಠಿಣ ಸಜೆ ಮತ್ತು 2 ಸಾವಿರ ರೂ. ದಂಡ ವಿಧಿಸಿದ್ದು, ದಂಡ ತೆರಲು ತಪ್ಪಿದಲ್ಲಿ 15 ದಿನಗಳ ಸಾದಾ ಶಿಕ್ಷೆ ಅನುಭವಿಸುವಂತೆ ತೀರ್ಪಿನಲ್ಲಿ ತಿಳಿಸಿದ್ದಾರೆ. ಆಪಾದಿತ ಈ ಎಲ್ಲ ಶಿಕ್ಷೆಯನ್ನು ಏಕಕಾಲದಲ್ಲಿ ಅನುಭವಿಸಲಿದ್ದಾನೆ.

ಪ್ರಕರಣದಲ್ಲಿ ತನಿಖಾಧಿಕಾರಿಗಳಾದ ಆಲ್ದೂರು ಠಾಣೆಯ ಪಿಎಸ್‌ಐಗಳಾಗಿದ್ದ ಸಜಿತ್‌ಕುಮಾರ್ ಹಾಗೂ ಅಕ್ಷಿತಾ ತನಿಖೆ ಕೈಗೊಂಡು ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ಆಲ್ದೂರು ಠಾಣೆಯ ಎಎಸ್‌ಐ ಬಸವರಾಜು ಅವರು ನ್ಯಾಯಾಲಯಕ್ಕೆ ಸಾಕ್ಷಿದಾರರನ್ನು ವಿಚಾರಣೆಗೆ ಸಮರ್ಪಕವಾಗಿ ಹಾಜರುಪಡಿಸಿದ್ದರು. ಪ್ರಕರಣದಲ್ಲಿ ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕರಾದ ಹೆಚ್.ಎಸ್.ಲೋಹಿತಾಶ್ವ ಆಚಾರ್ ವಾದ ಮಂಡಿಸಿದ್ದರು.

# ಹೊಯ್ಸಳ ಹಾಗೂ ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಮಕ್ಕಳ ದಿನಾಚರಣೆ–2025 ರ ಅಂಗವಾಗಿ ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯ ಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ 6 ರಿಂದ 18 ವರ್ಷಗೊಳಗಿನ ಬಾಲಕರಿಗೆ 'ಹೊಯ್ಸಳ' ಮತ್ತು ಬಾಲಕಿಯರಿಗೆ 'ಕೆಳದಿ ಚೆನ್ನಮ್ಮ' ಶೌರ್ಯ ಪ್ರಶಸ್ತಿಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ವತಿಯಿಂದ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000 ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ನೀಡಲಾಗುವುದು. ಇದೇ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಟ 05 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ ರೂ.25,000/– ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ. 1,00,000/– ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರವನ್ನು ನೀಡಿ ಗೌರವಿಸಲಾಗುವುದು.

ಸಾಹಸ ಪ್ರಕರಣವು ದಿ: 01/08/2024 ರಿಂದ 31/07/2025 ರೊಳಗೆ ನಡೆದಿರಬೇಕು. ಧೈರ್ಯ ಸಾಹಸ ಪ್ರದರ್ಶಿಸಿದ ಕುರಿತು ಜಿಲ್ಲಾ ಮಟ್ಟದಲ್ಲಿ ಗುರುತಿಸಿರಬೇಕು ಮತ್ತು ಈ ಬಗ್ಗೆ ದಿನಪತ್ರಿಕೆಗಳಲ್ಲಿ ಪ್ರಕಟಗೊಂಡಿರಬೇಕು. ಅರ್ಜಿ ಸಲ್ಲಿಸುವವರು ವ್ಯಕ್ತಿ/ಸಂಸ್ಥೆಗಳ ವಿರುದ್ದ ಕ್ರಿಮಿನಲ್ ಮೊಕದ್ದಮೆ ಇಲ್ಲದಿರುವ ಬಗ್ಗೆ ಪೊಲೀಸ್ ಇಲಾಖೆಯಿಂದ ಪರಿಶೀಲನಾ ವರದಿ ಪಡೆದು ಅರ್ಜಿಯೊಂದಿಗೆ ಸಲ್ಲಿಸಬೇಕು.

ನಿಗದಿತ ಅರ್ಜಿ ನಮೂನೆಗಳನ್ನು ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆ, ಶಿವಮೊಗ್ಗ ಇವರಿಂದ ಪಡೆದುಕೊಂಡು, ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ದಿ: 27/10/2025 ರೊಳಗಾಗಿ ಸಲ್ಲಿಸಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ.: 08182–294414 ನ್ನು ಸಂಪರ್ಕಿಸುವುದು.

## ಉದ್ಯಮಶೀಲತಾ ತರಬೇತಿಗೆ ಆಹ್ವಾನ

**ದಾವಣಗೆರೆ** : ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಸಿಡಾಕ್ ಹಾಗೂ ಬಂಧುತ್ವ ಫೌಂಡೇಶನ್(ರಿ) ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 28 ರಿಂದ ನವಂಬರ್ 7 ರವರೆಗೆ ಚನ್ನಗಿರಿಯ ಬಂಧುತ್ವ ಫೌಂಡೇಶನ್(ರಿ) ಸಭಾಂಗಣದಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಇಚ್ಛಿಸುವ ಜಿಲ್ಲೆಯ ಪರಿಶಿಷ್ಟ ಜಾತಿಯ ಮಹಿಳಾ ಉದ್ಯಮ ಆಕಾಂಕ್ಷಿಗಳಿಗೆ 10 ದಿನಗಳ ಉದ್ಯಮಶೀಲತಾಭಿವೃದ್ಧಿ ತರಬೇತಿ ಆಯೋಜಿಸಲಾಗಿದೆ.ಆಸಕ್ತರು ಅರ್ಜಿಯ ಜೊತೆಗೆ 2 ಪಾಸ್ ಪೋರ್ಟ್ ಅಳತೆಯ ಫೋಟೋ, ಆಧಾರ್ ಕಾರ್ಡ್ ಹಾಗೂ ಜಾತಿ ಪ್ರಮಾಣ ಪತ್ರದ ಪ್ರತಿಯನ್ನು ಸಲ್ಲಿಸಬೇಕು.

# ನಾಡಧ್ವಜಾರೋಹಣ ಮಾಡದಿದ್ದರೆ ಕಪ್ಪುಪಟ್ಟಿ ಪ್ರದರ್ಶನ

**ಚನ್ನಪಟ್ಟಣ:** ನವೆಂಬರ್ 1 ರಂದು ಜಿಲ್ಲಾದ್ಯಂತ ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತದ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ನಾಡ ಧ್ವಜವನ್ನು ಆಚರಿಸಲು ಕ್ರಮ ಕೈಗೊಳ್ಳಬೇಕು, ಇಲ್ಲವೇ ಜಿಲ್ಲಾಡಳಿತದ ಮುಂದೆ ಕಕಜ ವೇದಿಕೆಯಿಂದ ಕಪ್ಪುಪಟ್ಟಿ ಪ್ರದರ್ಶನ ಮಾಡಿ ಪ್ರತಿಭಟಿಸಬೇಕಾಗುತ್ತದೆ ಎಂದು ವೇದಿಕೆ ಜಿಲ್ಲಾಧ್ಯಕ್ಷ ಬೇವೂರು ಯೋಗೇಶ್‌ಗೌಡ ಎಚ್ಚರಿಕೆ ನೀಡಿದರು.



ಕಾವೇರಿ ನದಿ ನೀರಿನ ಹಂಚಿಕೆಯಲ್ಲಿ ಸಂಕಷ್ಟ ಸೂತ್ರ ರಚಿಸುವ ಜೊತೆಗೆ ಮೇಕೆದಾಟು ಯೋಜನೆಗೆ ಅಡಿಗಲ್ಲು ಹಾಕುವಂತೆ ಹಾಗೂ ಸತ್ತೇಗಾಲ ಯೋಜನೆಯನ್ನು ಶೀಘ್ರವಾಗಿ ಮುಕ್ತಾಯ ಮಾಡುವಂತೆ ಆಗ್ರಹಿಸಿ ಕಸ್ತೂರಿ ಕರ್ನಾಟಕ ಜನಪರ ವೇದಿಕೆಯ ರಾಜ್ಯಾಧ್ಯಕ್ಷರಾದ ರಮೇಶ್‌ಗೌಡರ ನೇತೃತ್ವದಲ್ಲಿ 2023ರ ಅಕ್ಟೋಬರ್ 5 ರಿಂದ ನಿರಂತರವಾಗಿ ಹೋರಾಟ ಮಾಡುತ್ತಿದ್ದು ಗುರುವಾರ ನಡೆದ 737ನೇ ದಿನದ ಹೋರಾಟದಲ್ಲಿ ಅವರು ಮಾತನಾಡಿದರು.

ಕನ್ನಡ ನಾಡಿನಲ್ಲಿ ಕನ್ನಡಿಗನೇ ಸಾರ್ವಭೌಮನಾಗಿದ್ದು, ಕನ್ನಡನಾಡಿನಲ್ಲಿ ರಾಜ್ಯೋತ್ಸವದ ದಿನ ನಾಡ ಧ್ವಜಕ್ಕೆ ಗೌರವ ನೀಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತದಿಂದ ಎಲ್ಲಾ ಸರ್ಕಾರಿ ಕಚೇರಿಗಳು ಸೇರಿದಂತೆ ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತದಿಂದ ರಾಷ್ಟ್ರಧ್ವಜದ ಜೊತೆಗೆ ನಾಡ ಧ್ವಜಾರೋಹಣ ಮಾಡಬೇಕು. ಬೇರೆ ಜಿಲ್ಲೆಗಳಲ್ಲಿ ಇದು ಜಾಲ್ತಿಯಲ್ಲಿದ್ದರೂ ರಾಜ್ಯದ ರಾಜಧಾನಿಗೆ ಹತ್ತಿರ ಇರುವ ಬೆಂಗಳೂರು ದಕ್ಷಿಣ ಜಿಲ್ಲೆಯಲ್ಲಿ ಇದನ್ನು ಆಚರಣೆ ಮಾಡುತ್ತಿಲ್ಲ. ಕಳೆದ ವರ್ಷ ಈ ಬಗ್ಗೆ ಜಿಲ್ಲಾಡಳಿತ ನಿರ್ಲಕ್ಷ್ಯ ಮಾಡಿತ್ತು. ಈ ನಿಟ್ಟಿನಲ್ಲಿ 20 ದಿನ ಮುಂಚಿತವಾಗಿಯೇ ಈ ಬಗ್ಗೆ ಜಿಲ್ಲಾಡಳಿತಕ್ಕೆ ಕಸ್ತೂರಿ ಕರ್ನಾಟಕ ಜನಪರ ವೇದಿಕೆ ಎಚ್ಚರಿಕೆ ನೀಡುತ್ತಿದ್ದು ನಾಡ ಧ್ವಜಾರೋಹಣ ಮಾಡದಿದ್ದರೆ ಜಿಲ್ಲಾಡಳಿತದ ವಿರುದ್ಧ ಕಪ್ಪು ಪಟ್ಟಿ ಪ್ರದರ್ಶನ ಮಾಡಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಮೇಕೆದಾಟು ಯೋಜನೆಗೆ ಆಗ್ರಹಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್‌ಅವರು ಕೋವಿಡ್ ಸಂದರ್ಭವನ್ನು ಲೆಕ್ಕಿಸದೆ ನಮ್ಮ ನೀರು ನಮ್ಮ ಹಕ್ಕು ಎಂದು ಪಾದಯಾತ್ರೆ ಮಾಡಿ ಇದೀಗ ಅಧಿಕಾರಕ್ಕೆ ಬಂದರೂ ಸಹ ಮೇಕೆದಾಟು ಯೋಜನೆ ಜಾರಿಗೆ ಶ್ರಮಿಸುತ್ತಿಲ್ಲ. ಜೊತೆಗೆ ಕೇಂದ್ರಕ್ಕೆ ಆಯ್ಕೆಯಾಗಿರುವ ಸಂಸದರು ರಾಜ್ಯ ಸಚಿವರುಗಳು ಸಹ ಈ ಬಗ್ಗೆ ಗಮನ ನೀಡುತ್ತಿಲ್ಲ. ಈ ಬಗ್ಗೆ ಮುಂದಾದರೂ ಸರ್ಕಾರ ಶ್ರಮಿಸಲಿ ಎಂದು ಯೋಗೇಶ್‌ಗೌಡ ಒತ್ತಾಯಿಸಿದರು. ಗಾಯಕ ಚೌ.ಪು.ಸ್ವಾಮಿ ಮಾತನಾಡಿ, ಮೇಕೆದಾಟು ಯೋಜನೆಯಿಂದ 6 ಜಿಲ್ಲೆಗಳಿಗೆ ಶಾಶ್ವತ ನೀರಾವರಿ ಯೋಜನೆ ಆಗಲಿದ್ದು, ಈ ಬಗ್ಗೆ ಸರ್ಕಾರ ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎಂಬ ಆಗ್ರಹ ನಮ್ಮದಾಗಿದೆ. ಈ ನಿಟ್ಟಿನಲ್ಲಿ ಶಾಸಕರು ಮುಂದಾದರೂ ಈ ಬಗ್ಗೆ ಗಮನ ನೀಡಬೇಕು ಎಂದು ಆಗ್ರಹಿಸಿದರು.

ಸಂದರ್ಭದಲ್ಲಿ ಜಗದಾಪುರ ಕೃಷ್ಣೇಗೌಡ, ಪುರಿಸಿದ್ದು, ಪಾನಿಪುರಿ ಚನ್ನಪ್ಪ, ಬೀರೇಶ್, ರವಿ, ಚಿಕ್ಕೇನಹಳ್ಳಿ ಸಿದ್ದಪ್ಪಾಜಿ, ಆನಂದ ಇತರರು ಇದ್ದರು.

# ಅತ್ಯಾಚಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ವಿವಿಧ ಮಹಿಳಾ ಸಂಘ ಗಳಿಂದ ಪ್ರತಿಭಟನೆ

**ದಾವಣಗೆರೆ:** ಧರ್ಮಸ್ಥಳ ಸೇರಿದಂತೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮಹಿಳೆಯರನ್ನು ಅತ್ಯಾಚಾರ ಮಾಡಿ ಕೊಲೆಗೈದವರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಅಖಿಲ ಭಾರತ ರಾಷ್ಟ್ರೀಯ ಮಹಿಳಾ ಒಕ್ಕೂಟ, ನೆರಳು ಬೀಡಿ ಕಾರ್ಮಿಕರ ಸಂಘ, ಮಹಿಳಾ ಮುನ್ನಡೆ ಸಂಘಟನೆಗಳ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಗುರುವಾರ ನಗರದ ಜಯದೇವ ವೃತ್ತದಲ್ಲಿ ಜಿಲ್ಲೆಯ ವಿವಿಧ ಮಹಿಳಾ ಸಂಘಟನೆಗಳ ನೇತೃತ್ವದಲ್ಲಿ ಮಹಿಳೆಯರ ಮೇಲೆ ನಡೆದ ಅತ್ಯಾಚಾರ, ಹತ್ಯೆ ಪ್ರಕರಣದ ಆರೋಪಿಗಳನ್ನು ಪತ್ತೆ ಮಾಡುವಂತೆ ಒತ್ತಾಯಿಸಿ ಘೋಷಣೆ ಕೂಗಲಾಯಿತು.

ಈ ವೇಳೆ ಸಂಘಟನೆ ಮುಖಂಡರು ಮಾತನಾಡಿ, ಧರ್ಮಸ್ಥಳ ಮತ್ತು ಸುತ್ತಲಿನ ಪ್ರದೇಶದಲ್ಲಿ ಕಳೆದ 2 ದಶಕಗಳಿಂದಲೂ ಹೋರಾಟ ನಡೆಸುತ್ತಿರುವ ಸಂತ್ರಸ್ಥರ ಕುಟುಂ

ಬಗಳಿಗೆ ನ್ಯಾಯವನ್ನು ಒದಗಿಸುವ ಕೆಲಸ ಆಗಬೇಕು. ಕಳೆದ 4–5 ದಶಕದಿಂದಲೂ ಮಹಿಳೆಯರ ಹಕ್ಕುಗಳು, ಮಹಿಳೆಯರ ಘನತೆಗಾಗಿ ನಿರಂತರ ಹೋರಾಟ ನಡೆಸುತ್ತಿರು

ವ ಸಂಘಟನೆಗಳು ಇದೀಗ ಹೋರಾಟವನ್ನು ಚುರುಕುಗೊಳಿಸಿವೆ. ಸರ್ಕಾರವನ್ನು ಪ್ರಶ್ನಿಸುವ ಮೂಲಕ ಧರ್ಮಸ್ಥಳ ಮತ್ತು ಅಲ್ಲಿನ ಪರಿಸರದಲ್ಲಿ ಹತ್ಯೆಯಾದ ವೇದವಲ್ಲಿ, ಪದ್ಮಲತಾ, ಯಮುನಾ, ನಾರಾಯಣ, ಸೌಜನ್ಯರ ಅತ್ಯಾಚಾರ ಮತ್ತು

ಕೊಲೆ ಇವುಗಳಷ್ಟೇ ಅಲ್ಲದೇ, ಅಲ್ಲಿ ನೂರಾರು ಮಹಿಳೆಯರು, ಯುವತಿಯರ ಅಸಹಜ ಸಾವುಗಳು ಸಹ ಸಂಭವಿಸಿವೆ. ಮಹಿಳೆಯರು ಮತ್ತು ಮಕ್ಕಳ ಮೇಲಿನ ದೌರ್ಜನ್ಯವ

ನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಮುಂದಾಗಬೇಕು ಎಂದು ಅವರು ತಾಕೀತು ಮಾಡಿದರು.

ಸಂಘಟನೆಗಳ ಮುಖಂಡರಾದ ಸರೋಜ, ನಿರ್ಮಲಾ, ಮಂಜುಳಾ, ಹೊಸಳ್ಳಿ ಗೀತಾ, ಹುಲಿಗೆಮ್ಮ, ರಮೀಜಾ ಬೀ, ಪಾಪಮ್ಮ, ಲತಾ, ಪ್ರೇಮಾ ಬಾಯಿ, ನೆರಳು ಸಂಘಟನೆಯ ಜಬೀನಾ ಖಾನಂ, ಎಂ.ಕರಿಬಸಪ್ಪ, ನಾಜಿಮಾ, ನೂರ್ ಫಾತಿಮಾ, ಜಮೀರ್ ಉನ್ನೀಸಾ, ರೇಷ್ಮಾ, ಬದ್ರೂನ್, ಸೈಯದ್ ಸಲ್ಮಾ, ಕಾರ್ಮಿಕ ಮುಖಂಡರಾದ

ಆವರಗೆರೆ ಚಂದ್ರು, ಆವರಗೆರೆ ಎಚ್.ಜಿ.ಉಮೇಶ, ಇಫ್ಟಾದ ಐರಣಿ ಚಂದ್ರು, ಎ.ತಿಪ್ಪೇಶ ರಾಜು, ಯಲ್ಲಪ್ಪ, ಶೇಖರ ನಾಯ್ಕ, ಸತೀಶ ಅರವಿಂದ ಇತರರು ಇದ್ದರು.

# ನರೇಗಾ ಕೂಲಿಕಾರರ ಸಬಲೀಕರಣದತ್ತ ಮುಂದಾದ ಗಜೇಂದ್ರಗಡ ತಾಲೂಕು ಆಡಳಿತ

**ಗಜೇಂದ್ರಗಡ:** ಗಜೇಂದ್ರಗಡ ತಾಲೂಕಿನಲ್ಲಿ ನರೇಗಾ ಯೋಜನೆಯಡಿ ಕೆಲಸ ಮಾಡುತ್ತಿರುವ ಕೂಲಿಕಾರರ ಇ–ಕೆವೈಸಿ ಕಾರ್ಯ ಪ್ರಗತಿಯನ್ನು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ. ಕಂದಕೂರ ಅವರು ಗುರುವಾರ ಬೆಳಿಗ್ಗೆ ಪರಿಶೀಲಿಸಿದರು.

ಇಟಗಿ ಗ್ರಾಮ ಪಂಚಾಯತಿಗೆ ಭೇಟಿ ನೀಡಿದ ಇಒ ಅವರು, ನರೇಗಾ ಕೂಲಿಕಾರರ ಆಧಾರ್ ಆಧಾರಿತ ಇ–ಕೆವೈಸಿ ಪ್ರಕ್ರಿಯೆ ಹೇಗೆ ನಡೆಯುತ್ತಿದೆ ಎಂಬುದನ್ನು ಸ್ಥಳದಲ್ಲೇ ಪರಿಶೀಲಿಸಿ, ಕಾರ್ಯನಿರ್ವಹಿಸುತ್ತಿದ್ದ ಬಿಎಫ್‌ಟಿ, ಡಿಇಒ ಮತ್ತು ಗ್ರಾಮ

ಕಾಯಕ ಮಿತ್ರರ ಕೆಲಸವನ್ನು ಅವಲೋಕಿಸಿದರು.ಕಾರ್ಯನಿರ್ವಾಹಕ ಅಧಿಕಾರಿ ಅವರು ಪ್ರತಿದಿನ ನಿಗದಿತ ಗುರಿಯಂತೆ ಇ–ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸಿಬ್ಬಂದಿಗೆ ಸೂಚನೆ ನೀಡಿದರು."ನರೇಗಾ ಯೋಜನೆಯಡಿ ಮುಂದಿನ ದಿನಗಳಲ್ಲಿ ಕೂಲಿಕಾರರು ಕೆಲಸ ಪಡೆಯಬೇಕಾದರೆ ಇ–ಕೆವೈಸಿ ಕಡ್ಡಾಯವಾಗಿದೆ. ನಮ್ಮ ಗ್ರಾಮ ಪಂಚಾಯತ್ ಸಿಬ್ಬಂದಿ ಮನೆ–ಮನೆಗೆ ಭೇಟಿ ನೀಡಿ ಈ ಕಾರ್ಯವನ್ನು ಶ್ರಮಪೂರ್ವಕವಾಗಿ ಮಾಡುತ್ತಿದ್ದಾರೆ. ಇದರ



ಪ್ರಯೋಜನ ಎಲ್ಲ ಕೂಲಿಕಾರರು ಪಡೆಯಬೇಕು" ಎಂದು ಅವರು ಹೇಳಿದರು.ಇದೇ ವೇಳೆ, ನರೇಗಾ ಕೂಲಿಕಾರರೊಂದಿಗೆ ನೇರವಾಗಿ ಮಾತನಾಡಿ, ಇ–ಕೆವೈಸಿ ಪ್ರಕ್ರಿಯೆಯ ಪ್ರಯೋಜನಗಳು ಹಾಗೂ ಭದ್ರತೆ ಕ್ರಮಗಳು ಕುರಿತು ವಿವರಿಸಿದರು."ಇ–ಕೆವೈಸಿ ಮಾಡಿದರೆ ಕೂಲಿಕಾರರಿಗೆ ಪಾರದರ್ಶಕ ಪಾವತಿ ವ್ಯವಸ್ಥೆ, ವೇತನದಲ್ಲಿ ವಿಳಂಬ ತಪ್ಪುವುದು ಹಾಗೂ ಕೇಂದ್ರ ಸರ್ಕಾರದ ವಿವಿಧ ಸೌಲಭ್ಯಗಳು ದೊರೆಯುತ್ತವೆ," ಎಂದು ಇಒ ಚಂದ್ರಶೇಖರ ಅವರು ಹೇಳಿದರು.

# ವಿಶೇಷ ತರಬೇತಿ ಕಾರ್ಯಕ್ರಮದ ಉದ್ಘಾಟನೆ

**ಗದಗ** : ಸಹಕಾರ ಇಲಾಖೆ, ಗದಗ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿ., ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್ ನಿ., ಗದಗ, ಕೆ.ಸಿ.ಸಿ. ಬ್ಯಾಂಕ್ ಲಿ., ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ಗದಗ ಜಿಲ್ಲೆಯಲ್ಲಿ ಚುನಾವಣೆ ಜರುಗಲಿರುವ ಸಹಕಾರ ಸಂಘಗಳ ರಿಟರ್ನಿಂಗ್ ಅಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ವಿಶೇಷ ತರಬೇತಿ ಕಾರ್ಯಕ್ರಮವನ್ನು ಗುರುವಾರ ದಿ ಕೆ.ಸಿ.ಸಿ.ಬ್ಯಾಂಕ್ ಲಿ., ಗದಗ ಇದರ ಸಭಾಭವನ, ಪಾಲಾ ಬದಾಮಿ ರಸ್ತೆ, ಗಾಂಧಿ ಸರ್ಕಲ್ ಹತ್ತಿರ, ಗದಗ ಇಲ್ಲಿ ಹಮ್ಮಿಕೊಳ್ಳಲಾಯಿತು.



ಸಹಕಾರ ಸಂಘಗಳ ಉಪನಿಬಂಧಕಿಯರಾದ ಶ್ರೀಮತಿ ಎಸ್. ಎಸ್. ಕಬಾಡೆ ರವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಾ ಯಾವ ಸಹಕಾರ ಸಂಘದ ರಿಟರ್ನಿಂಗ್ ಅಧಿಕಾರಿಯಾಗಿ ನೇಮಿಸಲಾಗಿದೆಯೋ ಆ ಸಹಕಾರ ಸಂಘದ ಉಪವಿಧಿಯನ್ನು ಅಧ್ಯಯನ ಮಾಡಿ ಆಡಳಿತ ಮಂಡಲಿಯ ಸ್ವರೂಪವನ್ನು ರಿಟರ್ನಿಂಗ್ ಅಧಿಕಾರಿಗಳು ತಿಳಿದುಕೊಳ್ಳತಕ್ಕದ್ದು, ಉಪವಿಧಿಯು ನೋಂದಣಿಯಾಗಿರುವುದನ್ನು ಖಾತ್ರಿ ಪಡಿಸಿಕೊಳ್ಳತಕ್ಕದ್ದು, (ನಿಯಮ 13 ಇ) ಪ್ರಕಾರ ಎಲ್ಲಾ ಕಾನೂನಾತ್ಮಕವಾಗಿ ಸಹಕಾರ ಸಂಘಗಳ ನಿರ್ವಹಣೆ ಮಾಡಿಕೊಂಡು ಸಂಘಗಳನ್ನು ಬೆಳಸಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಸಹಕಾರಿ ಹಾಲು ಉತ್ಪಾದಕರ ಮಹಾಂಡಳ ನಿ., ಬೆಂಗಳೂರು ಇದರ ನಿರ್ದೇಶಕರಾದ ಎಚ್. ಜಿ. ಹಿರೇಗೌಡ್ರ ರವರು ಆಡಳಿತ ಮಂಡಳಿ ಸದಸ್ಯರ ಚುನಾವಣೆ ನಡೆಸಲು ಅತ್ಯಂತ ಪ್ರಮುಖ ಅವಶ್ಯಕತೆ ಅರ್ಹ ಮತದಾರರ ಯಾದಿ ಸಹಕಾರ ಸಂಘದ ಮುಖ್ಯ ಕಾರ್ಯನಿರ್ವಾಹಕನು ಕಳೆದ 5 ವಾರ್ಷಿಕ ಮಹಾಸಭೆಗಳ ಪೈಕಿ ಕನಿಷ್ಠ ಯಾವುದೇ 2 ಸಭೆಗಳಿಗೆ ಹಾಜರಾಗದ ಮತ್ತು ಕಳೆದ 5 ಸಹಕಾರ ವರ್ಷಗಳ ಪೈಕಿ ಕನಿಷ್ಠ ಯಾವುದೇ 2 ಸಹಕಾರ ವರ್ಷಗಳಲ್ಲಿ ಸಂಘದ ಉಪವಿಧಿಗಳಲ್ಲಿ ನಿಗಧಿಪಡಿಸಿದ ಕನಿಷ್ಠ ಸೇವೆಗಳನ್ನು ಬಳಸಿಕೊಳ್ಳಲು ವಿಫಲರಾದ ಸದಸ್ಯರಿಗೆ ಚುನಾವಣಾ ದಿನಾಂಕಕ್ಕಿಂತ 180 ದಿನಗಳ ಮುಂಚೆ, ಸ್ಪಷ್ಟ 15 ದಿನಗಳ ನೋಂದಾಯಿತ ಅಂಚೆ ಮೂಲಕ ನೋಟಿಸನ್ನು ಹೊರಡಿಸತಕ್ಕದ್ದು ಮತ್ತು ಅಂತಹ ಅನರ್ಹ ಸದಸ್ಯರಿಗೆ ತಾನು ನೋಟಿಸು ಹೊರಡಿಸಿದ 15 ದಿನಗಳೊಳಗಾಗಿ ಆಕ್ಷೇಪಣೆ ಸಲ್ಲಿಸಲು ತಿಳಿಸತಕ್ಕದ್ದು. ಅಲ್ಲದೆ ಅನರ್ಹ ಸದಸ್ಯನು ತನ್ನ ಆಕ್ಷೇಪಣೆಗಳನ್ನು ನೋಟಿಸು ಹೋರಡಿಸಿದ 30 ರಿಂದ 60 ದಿನಗಳೊಳಗಾಗಿ ಜಿಲ್ಲಾ ಚುನಾವಣಾಧಿಕಾರಿಗಳ ಕಛೇರಿಗೆ ಹಾಜರಾಗಿ ಪರಿಹಾರ ಕಂಡುಕೊಳ್ಳುವಂತೆ ನೋಟಿಸಿನಲ್ಲಿ ಪ್ರಕಟಿಸಬೇಕೆಂದು ಹೇಳಿದರು ಯೂನಿಯನ್‌ದ ವತಿಯಿಂದ ಜರುಗುವ ಇಂತಹ ತರಬೇತಿ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕೆಂದು ಹೇಳಿದರು.

ತರಬೇತಿ ಕಾರ್ಯಾಗಾರದಲ್ಲಿ ಸಹಕಾರ ಸಂಘಗಳ ಆಡಳಿತ ಮಂಡಲಿ ಚುನಾವಣೆ ಜರುಗಿಸುವ ವಿಧಿ ವಿಧಾನಗಳ ಕುರಿತು ಶಂಕರ ಎಸ್. ಕರಬಸಣ್ಣವರ, ಸಹಕಾರ ಅಭಿವೃದ್ಧಿ ಅಧಿಕಾರಿಗಳು, ರಾಯಬಾಗ ಜಿ.ಬೆಳಗಾವಿ ಹಾಗೂ ಕೆ.ಸಿ.ಸಿ. ಬ್ಯಾಂಕ್ ಲಿ., ಗದಗ ಇದರ ಪ್ರಭಾರ ಜಿಲ್ಲಾ ನಿಯಂತ್ರಣಾಧಿಕಾರಿಗಳಾದ ಸುನೀಲ್‌ಕುಮಾರ ಚಳಗೇರಿ ರವರು ಸಹಕಾರ ಸಂಘಗಳ ಪದಾಧಿಕಾರಿಗಳ ಚುನಾವಣೆ ಜರುಗಿಸುವ ಕುರಿತು ಉಪನ್ಯಾಸವನ್ನು ನೀಡಿದರು.

ಗಂಗಾಪೂರ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಕಾರ್ಯದರ್ಶಿ ಶ್ರೀಮತಿ ರೇಣುಕಾ ಈರನಗೌಡ್ರ ಪ್ರಾರ್ಥನೆ ಮಾಡಿದರು. ಗದಗ ಜಿಲ್ಲಾ ಸಹಕಾರ ಯೂನಿಯನ್ನಿನ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಚಂದ್ರಶೇಖರ ಎಸ್. ಕರಿಯಪ್ಪನವರ ಸ್ವಾಗತಿಸಿ ನಿರೂಪಿಸಿದರು. ಮಹಿಳಾ ಸಹಕಾರ ಶಿಕ್ಷಕಿ ಶ್ರೀಮತಿ ಆರ್. ಸಿ. ಯಲಿಗಾರ ವಂದಿಸಿದರು.

# ಸರ್ವ ಸದಸ್ಯರ ವಾರ್ಷಿಕ ಮಹಾಸಭೆ

**ಹಾಸನ** : ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಹಾಸನ ವತಿಯಿಂದ 2024–25ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಸರ್ಕಾರಿ ನೌಕರರ ಭವನ, ಆರ್.ಸಿ. ರಸ್ತೆ ಹಾಸನ ಇಲ್ಲಿ ಆಯೋಜಿಸಿದ್ದು ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಬಿ.ಪಿ.ಕೃಷ್ಣಗೌಡರವರ ಅಧ್ಯಕ್ಷತೆಯಲ್ಲಿ ಸಭೆಯು ಯಶಸ್ವಿಯಾಗಿ ಮೂಡಿಬಂದಿತು. ಜಿಲ್ಲಾ ಖಜಾಂಜಿ ಹೇಮಂತ್ ಕೆ.ಆರ್ ರವರು 2024–25ನೇ ಸಾಲಿನ ಲೆಕ್ಕಾ ಪರಿಶೋದನಾ ವರದಿಯನ್ನು ಸಭೆಯಲ್ಲಿ ಮಂಡಿಸಿದರು ಸಭೆಯು ಸರ್ವಾನುಮತದಿಂದ ಅನುಮೋದನೆಯನ್ನು ನೀಡಿತು ಜಿಲ್ಲಾ ಕಾರ್ಯದರ್ಶಿಗಳಾದ ಡಾ|ಲಕ್ಷ್ಮಿಕಾಂತ್ ಬಿ.ಎಂ ರವರು ವಾರ್ಷಿಕ ಸಭೆಯ ಆಜಂಡವನ್ನು ಸಭೆಯಲ್ಲಿ ಓದಿ ತಿಳಿಸಿದರು ಸಭೆಯು ಸರ್ವಾನುಮತದಿಂದ ಅನುಮೋದನೆಯನ್ನು ನೀಡಿತು. ರಾಜ್ಯ ಪರಿಷತ್ ಸದಸ್ಯರಾದ ರಾಜು ರವರು ಜಿಲ್ಲಾ ಸಂಘದ ನಿಯೋಗವು, ರಾಜ್ಯ ಸಂಘದೊಂದಿಗೆ ಚರ್ಚಿಸಿ ಸಂಘದ ಕಟ್ಟಡ ಕಾಮಗಾರಿ, ಜಿಲ್ಲಾ ಸಂಘದ ಬೇಡಿಕೆಗಳಿಗೆ ರಾಜ್ಯ ಸಂಘದಿಂದ ತುರ್ತಾಗಿ ಅನುಮೋದನೆ ಪಡೆಯುವುದಾಗಿ ಭರವಸೆ ನೀಡಿದರು. ಕಾರ್ಯಾಧ್ಯಕ್ಷರಾದ ವಿಷ್ಣುಪ್ರಕಾರ್ ರವರು 2025–2008 ಸಾಲಿನ ನೌಕರರ ಸಂಘದ ಕಾರ್ಯಕ್ರಮಗಳು, ರಾಷ್ಟ್ರೀಯ ಹಬ್ಬಗಳ ಆಚರಣೆಯ ಬಗ್ಗೆ ನೌಕರರು ಪರಿಪೂರ್ಣವಾಗಿ ಪಾಲ್ಗೊಳ್ಳಬೇಕೆಂದು ತಿಳಿಸಿದರು.

# ವಾಹನ ವಿಲೇವಾರಿ

**ಶಿವಮೊಗ್ಗ:** ಶಿವಮೊಗ್ಗ ತುಂಗಾನಗರ ಪೊಲೀಸ್ ಠಾಣೆಯಲ್ಲಿ ವಾರಸ್ಸುದಾರರು ಪತ್ತೆಯಾಗದ 45 ವಿವಿಧ ವಾಹನಗಳನ್ನು ಯಥಾ ಸ್ಥಿತಿಯಲ್ಲಿ ನ್ಯಾಯಾಲಯದ ಆದೇಶದನ್ವಯ ಅ.13 ರಂದು ಬೆಳಿಗ್ಗೆ 09 ಗಂಟೆಗೆ ತುಂಗಾನಗರ ಪೊಲೀಸ್ ಠಾಣಾ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

ಹೆಚ್ಚಿನ ಮಾಹಿತಿಗೆ ತುಂಗಾನಗರ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದೆಂದು ಪೊಲೀಸ್ ಇನ್ಸ್‌ಪೆಕ್ಟರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಿಜೆಐ ಮೇಲೆ ಶೂ ಎಸೆತ ಖಂಡಿಸಿ ಪ್ರಗತಿ ಪರ ಸಂಘಟನೆಗಳ ಪ್ರತಿಭಟನೆ

**ದಾವಣಗೆರೆ:** ದೇಶದ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಾಧೀಶ ಬಿ.ಆರ್.ಗವಾಯಿ ಮೇಲೆ ಸುಪ್ರೀಂ ಕೋರ್ಟ್ ವಕೀಲ ರಾಕೇಶ್ ಕಿಶೋರ್, ಶೂ ಎಸೆದಿರುವುದನ್ನು ಖಂಡಿಸಿ ದಾವಣಗೆರೆ ನಗರದದಲ್ಲಿ ವಿವಿಧ ಪ್ರಗತಿಪರ ಸಂಘಟನೆಗಳು ಪಂಜಿನ ಮೆರವಣಿಗೆ ಮಾಡುವ ಮೂಲಕ ಪ್ರತಿಭಟನೆ ವ್ಯಕ್ತ ಪಡಿಸಿದವು.ಬುಧವಾರ ರಾತ್ರಿ ನಗರದ ಹದಡಿ ರಸ್ತೆಯಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಜಯದೇವ ವೃತ್ತದವರೆಗೆ ಪ್ರತಿಭಟನೆ ನಡೆಸಿ ಪ್ರಗತಿ

ಪರ ಸಂಘಟನೆಗಳ ಒಕ್ಕೂಟದ ಪದಾಧಿಕಾರಿಗಳು ಶೂ ಎಸೆತ ಘಟನೆಯನ್ನು ಖಂಡಿಸಿ, ಈ ಕೂಡಲೇ ತಪ್ಪಿತಸ್ಥನ ವಿರುದ್ದ ಕಠಿಣ ಕಾನೂನು ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರಕ್ಕೆ ಆಗ್ರಹಿಸಿದರು. ಕಾರ್ಮಿಕ ಮುಖಂಡ ಆವರಗೆರೆ ಹೆಚ್.ಜಿ.ಉಮೇಶ್ ಮಾತನಾಡಿ, ದೇಶದಲ್ಲಿ ಮನುವಾದಿಗಳ ಅಟ್ಟಹಾಸ ಮಿತಿಮೀರಿದೆ. ಈ ದೇಶದ ಸರ್ವೋಚ್ಚ ನ್ಯಾಯಾಧೀಶರ ಮೇಲೆ ವಕೀಲ ಶೂ ಎಸೆದಿರುವುದು ಖಂಡನೀಯ. ದೇಶದ ಐಕ್ಯತೆಗೆ ಭಂಗ ತರುವಂತಹ ದುಶ್ಕೃತ್ಯ




ಮಾಡಿದ್ದಾರೆ. ಕಾರಣ ದುಷ್ಕರ್ಮಿಯನ್ನು ಕೇಂದ್ರ ಸರ್ಕಾರ ಕೂಡಲೇ ಬಂಧಿಸಿ ದೇಶದಿಂದಲೇ ಗಡಿಪಾರು ಮಾಡಬೇಕೆಂದು ಆಗ್ರಹಿಸಿದರುಇಂತಹ ಘಟನೆಗಳನ್ನು ದೇಶದ ಯಾವುದೇ ಭಾಗದಲ್ಲಿ ನಡೆಯದಂತೆ ಕೇಂದ್ರ ಸರ್ಕಾರವು ನೋಡಿಕೊಳ್ಳಬೇಕು. ಈ ಘಟನೆಗೆ ಕಾರಣವಾದವರ ಮೇಲೆ ಅತ್ಯಂತ ಕಠಿಣ ಕ್ರಮವನ್ನು ಹಾಗೂ ಬಾರ್ ಕೌನ್ಸಿಲ್ ಆಫ್ ಇಂಡಿಯಾ ಇವರು ಕೂಡಲೇ ಈ ವಕೀಲರ ಸದಸ್ಯತ್ವವನ್ನು ವಜಾಗೊಳಿಸಬೇಕೆಂದು ಆಗ್ರಹಿಸಿದರು.

ಬ್ಯಾಂಕ್ ಉದ್ಯೋಗಿ, ಕಾರ್ಮಿಕ ಮುಖಂಡ ರಾಘವೇಂದ್ರ ಕೆ.ನಾಯರಿ ಮಾತನಾಡಿ,

ಮುಖ್ಯ ನ್ಯಾಯಾಧೀಶ ಬಿ.ಆರ್. ಗವಾಯಿ ಮತ್ತು ಮತ್ತೊಬ್ಬ ಸುಪ್ರೀಂ ಕೋರ್ಟ್ ನ್ಯಾಯಾಧೀಶರನ್ನೊಳಗೊಂಡ ಪೀಠವು ಎಂದಿನಂತೆ ತಮ್ಮ ಕಾರ್ಯದಲ್ಲಿ ತೊಡಗಿದ್ದಾಗ, ಏಕಾಏಕಿ ಯಾವುದೋ ದುರುದ್ದೇಶದಿಂದ ನ್ಯಾಯಾಧೀಶರ ಪೀಠದ ಮೇಲೆ ಸುಪ್ರೀಂ ಕೋರ್ಟ್ ವಕೀಲರಾದ

ರಾಕೇಶ್ ಕಿಶೋರ್ ಶೂ ಎಸೆದಿದ್ದು, ಈ ಘಟನೆ ಇಡೀ ದೇಶವೇ ತಲೆತಗ್ಗಿಸುವಂತಹ ಕೃತ್ಯ ಎಂದು ಹೇಳಿದರು.ಈ ವೇಳೆ ವಿಶ್ವನಾಥ್ ಬಿಲ್ವ, ಆರ್.ಮಂಜಪ್ಪ, ವಿ.ಲಕ್ಷ್ಮಣ್, ಆವರಗೆರೆ ಚಂದ್ರು, ಮಧು ತೊಗಲೇರಿ, ಸುನೀತ್ ಕುಮಾರ್, ರಾಜು

ಕರನಹಳ್ಳಿ, ಆನಂದ, ರಮೇಶ್ ಗೋಶಾಲೆ, ಸಿದ್ದೇಶ್ ಆವರಗೆರೆ, ದಾದಾಪೀರ್, ರಂಗಸ್ವಾಮಿ, ಮಂಜುಳ, ಕುಸುಮ, ಪವಿತ್ರಾ, ಸತೀಶ್ ಅರವಿಂದ್, ಟಿ.ಅಸ್ಗರ್, ಆದೀಲ್‌ಖಾನ್, ದಾದಾಪೀರ್ ಇತರರು ಇದ್ದರು.

# ಮಿಷನ್ ವಾತ್ಸಲ್ಯ ಯೋಜನೆಯಡಿ ಶಿಕ್ಷರ ಹುದ್ದೆಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಮಕ್ಕಳ ರಕ್ಷಣಾ ಘಟಕದಡಿಯಲ್ಲಿ ಬರುವ ಸರ್ಕಾರಿ ಮಕ್ಕಳ ಪಾಲನಾ ಸಂಸ್ಥೆಗಳಾದ ಸರ್ಕಾರಿ ಬಾಲಕರ/ಬಾಲಕಿಯರ ಬಾಲ ಮಂದಿರ ಹಾಗೂ ಸರ್ಕಾರಿ ವೀಕ್ಷಣಾಲಯಗಳ ಮಕ್ಕಳಿಗೆ ಮಿಷನ್ ವಾತ್ಸಲ್ಯ ಯೋಜನೆಯಡಿ ಸಮಾಜ ವಿಜ್ಞಾನ/ ಆಂಗ್ಲ, ಗಣಿತ / ವಿಜ್ಞಾನ ಮತ್ತು ಸಂಗೀತ/ ಕ್ರಾಫ್ಟ್, ಯೋಜ/ದೈಹಿಕ ಶಿಕ್ಷರನ್ನು ಮಾಸಿಕ ರೂ. 10,000/- ದಂತೆ ಗೌರವಧನ ಅಧಾರದ ಮೇಲೆ ನೇಮಕಾತಿ ಮಾಡಿಕೊಳ್ಳುತ್ತಿದ್ದು, ಶಿವಮೊಗ್ಗ ನಗರ ವ್ಯಾಪ್ತಿಯಲ್ಲಿನ ಅರ್ಹ ಆಸಕ್ತರಿಂದ ಅರ್ಜಿ ಆಹ್ವಾನಿಸಿದೆ.

ಆಸಕ್ತರು ನಿಗದಿತ ನಮೂನೆ ಅರ್ಜಿಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಕಚೇರಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, 100ಅಡಿ ರಸ್ತೆ, ಆಲ್ಕೋಳ, ಶಿವಮೊಗ್ಗ ಇವರಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅ.15ರೊಳಗಾಗಿ ಸಲ್ಲಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂ.ಸಂ.: 08182-295709 ನ್ನು ಸಂಪರ್ಕಿಸುವುದು.

## ಹೆಲಿ ಟ್ಯೂಸರಿಂಗೆ ಚಾಲನೆ

**ಹಾಸನ :** ಹಾಸನ ನಗರದ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಜಿಲ್ಲಾಡಳಿತ ಮತ್ತು ಪ್ರವಾಸೋದ್ಯಮ ಇಲಾಖೆ, ಹಾಸನ ವತಿಯಿಂದ ಅ.10 ರಿಂದ ಅ.22 ರವರೆಗೆ ನಗರದ ಚನ್ನಪಟ್ಟಣ ಕೆರೆ ಅಂಗಳದಲ್ಲಿರುವ ಹೆಲಿಪ್ಯಾಡ್ ಬಳಿ ಏರ್ಪಡಿಸಲಾಗಿದ್ದ ಹೆಲಿಟ್ಯೂಸರಿಂಗೆ ಕಂದಾಯ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಭೈರೇಗೌಡಅವರುಉದ್ಘಾಟಿಸಿದರು.ನಂತರ ಪೋಸ್ಟರ್ ಬಿಡುಗಡೆ ಮಾಡಿದರು.

ಈ ವೇಳೆಯಲ್ಲಿಜಿಲ್ಲಾಧಿಕಾರಿಕೆ.ಎಸ್ ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕಅಧಿಕಾರಿಡಾ. ಪೂರ್ಣಿಮಾಬಿ.ಆರ್, ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಮತ್ತಿತರರು ಹಾಜರಿದ್ದರು.

## ಏಕ ಬಳಕೆ ಪ್ಲಾಸ್ಟಿಕ್ ನಿಷೇಧ: ಜಿಲ್ಲಾಧಿಕಾರಿ

**ದಾವಣಗೆರೆ :** ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಸೂಚನೆಯಂತೆ ಜಿಲ್ಲೆಯಲ್ಲಿ ಎಲ್ಲಾ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ನಿಂದ ತಯಾರಿಸಿದ ರಾಷ್ಟ್ರೀಯ ಧ್ವಜ ಬಳಕೆದಾರರು, ಮಾರಾಟಗಾರರು, ದಾಸ್ತಾನುದಾರರು ಮತ್ತು ಉತ್ಪಾದನಾ ಘಟಕಗಳನ್ನು ಪರಿಶೀಲನೆ ನಡೆಸಲು ಮತ್ತು ಪರಿಶೀಲನೆ ವೇಳೆ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳು ಕಂಡುಬಂದಲ್ಲಿ ಜಪ್ತಿ ಮಾಡುವುದರೊಂದಿಗೆ ದಂಡ ವಿಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಪ್ಲಾಸ್ಟಿಕ್ ಬಾವುಟ ಬಳಕೆಯ ಪರ್ಯಾಯವಾಗಿ ಕಾಗದ ಅಥವಾ ಬಟ್ಟೆಗಳಿಂದ ತಯಾರಿಸಿದ ಬಾವುಟಗಳಣ್ನು ಬಳಸುವ ಬಗ್ಗೆ ಸದರಿ ಕಾರ್ಯಕ್ರಮಗಳ ನಂತರ ಉಪಯೋಗಿಸಿದ ಧ್ವಜಗಳನ್ನು ಧ್ವಜದ ಘನೆತೆಗೆ ಅನುಗುಣವಾಗಿ ವಿಲೇವಾರಿ ಮಾಡಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರಿವು ಮೂಡಿಸುವ ಕಾರ್ಯಾಗಾರ

**ದಾವಣಗೆರೆ :** ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಹಾಗೂ ಕೆ.ಸಿ.ಟಿ.ಯು ಬೆಂಗಳೂರು ಹಾಗೂ ಜೈನ್ ಇನ್ ಟ್ಯೂಟ್ ಆಫ್ ಟೆಕ್ನಾಲಜಿ ಇವರ ಸಂಯುಕ್ತಾಶ್ರಯದಲ್ಲಿ ಅಕ್ಟೋಬರ್ 10 ರಂದು ಬೆಳಿಗ್ಗೆ 10.30ಕ್ಕೆ ನಗರದ ಜೈನ್ ಇನ್ ಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಎಂಎಂಎಂಇಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ಮತ್ತು ವೇಗಗೊಳಿಸುವ ಯೋಜನೆಯಡಿ ಒಂದು ದಿನದ ಅರಿವು ಮೂಡಿಸುವ ಕಾರ್ಯಗಾರವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ಸಣ್ಣ ಕೈಗಾರಿಕೋದ್ಯಮಿಗಳ ಸಂಘದ ಅಧ್ಯಕ್ಷರಾದ ಶಂಭುಲಿಂಗಪ್ಪ ಬಸವನಾಳ ಉದ್ಘಾಟಿಸುವರು. ಜೈನ್ ಇನ್ ಟ್ಯೂಟ್ ಆಫ್ ಟೆಕ್ನಾಲಜಿಯ ಪ್ರಾಂಶುಪಾಲರು ಮತ್ತು ನಿರ್ದೇಶಕರಾದ ಡಾ.ಗಣೇಶ್.ಡಿ.ಬಿ ಅಧ್ಯಕ್ಷತೆ ವಹಿಸುವರು.

ಅತಿಥಿಗಳಾಗಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಆರ್.ಗಣೇಶ್, ಲೀಡ್ ಬ್ಯಾಂಕ್ ಮುಖ್ಯ ವ್ಯವಸ್ಥಾಪಕರಾದ ಪಿ.ಸಿ ಹಿರೇಮಠ, ಟೈಲ್ ಪಾರ್ಕ್ ಅಸೋಸಿಯೇಷನ್ ಅಧ್ಯಕ್ಷರಾದ ಕೋಮಲ್ ಜೈನ್, ಭಾಗವಹಿಸುವರು.

# ಶ್ರೀ ಹಾಸನಾಂಬ ದೇವಿ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ವಿವಿಧ ಕಾರ್ಯಕ್ರಮಗಳ ಆಯೋಜನೆ

**ಹಾಸನ :** ಹಾಸನ ನಗರದ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವವನ್ನು ಪ್ರತಿ ವರ್ಷ ಅತ್ಯಂತ ವಿಜೃಂಭಣೆಯಿಂದ ಆಯೋಜಿಸಲಾಗುತ್ತಿದ್ದು, ಸದರಿ ಜಾತ್ರಾ ಮಹೋತ್ಸವಕ್ಕೆ ಬೇರೆ, ಬೇರೆ ರಾಜ್ಯ, ಜಿಲ್ಲೆಗಳಿಂದ ಭಕ್ತರು ಅಪಾರ ಸಂಖ್ಯೆಯಲ್ಲಿ ಭಾಗವಹಿಸುತ್ತಾರೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತ, ಹಾಸನ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೃಷಿ ಇಲಾಖೆ, ಹಾಸನ ರವರ ಸಹಯೋಗದೊಂದಿಗೆ 2025 ನೇ ಸಾಲಿನ ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಅ.10ರಿಂದ ಅ.21ರವರೆಗೆ ದೇವಸ್ಥಾನದ ಬಳಿ, ಸರ್ಕಾರಿ ವಿಜ್ಞಾನ ಕಾಲೇಜು ಮೈದಾನ ಮತ್ತು ಸಿಲ್ವರ್ ಜುಬ್ಲಿ ಪಾರ್ಕ್ ಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಾಗೂ ವಸ್ತು ಪ್ರದರ್ಶನ ಮತ್ತು ಮಾರಾಟ ಮಳಿಗೆಗಳನ್ನು ಸರ್ಕಾರಿ ವಿಜ್ಞಾನ ಕಾಲೇಜು ಮೈದಾನದಲ್ಲಿ ಆಯೋಜಿಸಲಾಗಿದೆ.

ಲೈವ್ ಕನ್ಸರ್ಟ್ (ದೇವಸ್ಥಾನದ ಬಳಿ, ಹಾಸನಾಂಬ ವೇದಿಕೆ) ಜಾತ್ರಾಮಹೋತ್ಸವಕ್ಕೆ ಆಗಮಿಸುವಭಕ್ತರನ್ನುಸ್ವಾಗತಿಸಲುಹಾಗೂನಾಡಿನಸಾಂಸ್ಕೃತಿಕ ಪರಂಪರೆಯನ್ನು ಪರಿಚಯಿಸಲು



ಜಾನಪದ ಗೀತೆ, ಭಕ್ತಿ ಗೀತೆ, ಭಾವಗೀತೆ, ಮಂಟೇಸ್ವಾಮಿ, ಸಂತ ಶಿಶುನಾಳ ಶರೀಫರ ತತ್ವಪದಗಳು, ಕನಕದಾಸ, ಪುರಂದರದಾಸರ ಕೀರ್ತನೆಗಳು ಹೀಗೆ ಸಂಗೀತದ ಹಲವು ಪ್ರಾಕಾರಗಳನ್ನು ಈ ನಾಡಿನ ಪ್ರಸಿದ್ಧ ಗಾಯಕರು ಹಾಡಲಿದ್ದಾರೆ. ಸರತಿ ಸಾಲಿನಲ್ಲಿ ಬರುವ ಭಕ್ತಾದಿಗಳು ಈ ಲೈವ್ ಕಾರ್ಯಕ್ರಮವನ್ನು ಅ.10ರಿಂದ ಅ.21 ರವರೆಗೆ ಬೆಳಗ್ಗೆ 10.30 ರಿಂದ ಮದ್ಯಾಹ್ನ 1.30 ರವರೆಗೆ ಮತ್ತು ಸಂಜೆ 8 ರಿಂದ 11ರವರೆಗೆ ವೀಕ್ಷಿಸಬಹುದಾಗಿದೆ.

ಇದರೊಂದಿಗೆ ಪ್ರತಿದಿನ ಮುಂಜಾನೆ 5.30 ರಿಂದ 7.30ರ ವರೆಗೆ ಭಕ್ತಿಯ ಪರಾಕಾಷ್ಠೆ ಮೆರೆಯುವ ಭಜನೆಯೊಂದಿಗೆ ದಿನದ ಆರಂಭ ಮಾಡಲಾಗುತ್ತದೆ. ಬರುವ ಭಕ್ತಾಧಿಗಳು ಭಜನೆಯ ಕೀರ್ತನೆಗಳನ್ನು ಆಲಿಸಿ ಭಕ್ತಿಯ ಸಮರ್ಪಣೆಯೊಂದಿಗೆ ದೇವಿಯ ದರ್ಶನ ಮಾಡಬಹುದಾಗಿದೆ.

ಸರ್ಕಾರಿ ವಿಜ್ಞಾನ ಕಾಲೇಜು ಮೈದಾನ, ಸಾಲಗಾಮೆ ರಸ್ತೆ (ಹೇಮಾವತಿ ವೇದಿಕೆ) ಜಿಲ್ಲೆಯಸಾಂಸ್ಕೃತಿಕಪರಂಪರೆಂಯನ್ನು ಕಾರ್ಯಕ್ರಮಗಳಮೂಲಕಭಕ್ತಾಧಿಗಳಿಗೆ ಅಭಿರುಚಿಗೊಳಿಸಲು ಜಾನಪದನೃತ್ಯ, ರಂಗಗೀತೆ, ಭಕ್ತಿಗೀತೆ, ಜಾನಪದ ಗೀತೆ, ನೃತ್ಯ ರೂಪಕ, ತತ್ವಪದ, ಗೀಗಿಪದ, ಸುಗಮಸಂಗೀತಮುಂತಾದಸಾಂಸ್ಕೃತಿಕಕಾರ್ಯಕ್ರಮಗಳನ್ನು ಈ ವೇದಿಕೆಯಲ್ಲಿ ದಿನಾಂಕ: 10-10-2025 ರಿಂದ 21-10-2025ರ ಸಂಜೆ 7.30 ರಿಂದ 10.30ರ ವರೆಗೆ ಆಯೋಜಿಸಲಾಗಿದೆ.

ಸಿಲ್ವರ್ ಜುಬ್ಲಿ ಪಾರ್ಕ್(ಬಾಹುಬಲಿ ವೇದಿಕೆ) ಯುವ ಕಲಾವಿದರಿಂದ ಯುವ ಜನತೆಗಾಗಿ ಹಾಗೂಬರುವ ಎಲ್ಲಾಭಕ್ತರಿಗಾಗಿ ವೈಭವಪೂರಿತವಿಶಿಷ್ಟ ಕಾರ್ಯಕ್ರಮವನ್ನುದಿನಾಂಕ: 17-10-2025 ರಿಂದ 20-10-2025ರ ಸಂಜೆ 7 ರಿಂದ 09ರ ವರೆಗೆ ಆಯೋಜಿಸಲಾಗಿದೆ. ಬರುವ ಭಕ್ತಾಧಿಗಳು ಭಿನ್ನಭಿನ್ನ ಫಲಪುಷ್ಪ ಪ್ರದರ್ಶನಗಳನ್ನು ನೋಡುವುದರ ಜೊತೆಗೆ ಸಾಂಸ್ಕೃತಿಕ ಕಾರ್ಯಕ್ರಮವನ್ನು ಆನಂದಿಸಬಹುದಾಗಿದೆ.

ವಸ್ತು ಪ್ರದರ್ಶನ ಮತ್ತು ಮಾರಾಟ ಮಳಿ,ಸರ್ಕಾರಿ ವಿಜ್ಞಾನ ಕಾಲೇಜು ಮೈದಾನ ವಸ್ತುಪ್ರದರ್ಶನ ಕಾರ್ಯಕ್ರಮದಲ್ಲಿ ಕೃಷಿಹಾಗೂಸಂಬಂಧಿತ ಇಲಾಖೆಗಳಾದ ತೋಟಗಾರಿಕೆ, ರೇಷ್ಮೆ, ಮೀನುಗಾರಿಕೆ, ಪಶುಪಾಲನೆ, ಕಾಫಿಬೋರ್ಡ್ಹಾಗೂ ಆರೋಗ್ಯ, ಕೈಗಾರಿಕೆ, ಕೆ.ಎಂ.ಎಫ್, ಎನ್.ಆರ್.ಎಲ್.ಎಂ, ಎನ್.ಯು.ಎಲ್.ಎಂ. ಒಳಗೊಂಡಂತೆ ಇತರೆವಸ್ತುಪ್ರದರ್ಶನಮಳಿಗೆಗಳನ್ನು ತೆರೆಯಲಾಗುತ್ತಿದ್ದು, ದಿನಾಂಕ: 10-10-2025 ರಿಂದ 21-10-2025ರ ಬೆಳಗ್ಗೆ 9-00 ರಿಂದ ರಾತ್ರಿ 8-30ರವರೆಗೆ ಸಾರ್ವಜನಿಕರಿಗೆ / ಭಕ್ತಾದಿಗಳಿಗೆ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿರುತ್ತದೆ.

ದಿನಾಂಕ: 12-10-2025 ರಂದು ಬೆಳಗ್ಗೆ 10-00 ಗಂಟೆಗೆ ಪಾಕ ಸ್ಪರ್ದೆ ಏರ್ಪಡಿಸಿದ್ದು, ವಿಜೇತ ಮೊದಲ ಮೂರು ಸ್ಪರ್ದಿಗಳಿಗೆ ನಗದು ಬಹುಮಾನಗಳನ್ನು ನೀಡಲಾಗುತ್ತದೆ ಹಾಗೂ ದಿನಾಂಕ: 19-10-2025 ರಂದು ಶ್ವಾನ ಪ್ರದರ್ಶನವನ್ನು ಸಹ ಏರ್ಪಡಿಸಲಾಗಿರುತ್ತದೆ.

ಶ್ರೀ ಹಾಸನಾಂಬ ದೇವಿ ದರ್ಶನ ಮತ್ತು ಶ್ರೀ ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವಕ್ಕೆ -2025ರ ಅಂಗವಾಗಿ ಆಯೋಜಿಸಲಾಗಿರುವ ಸಾಂಸ್ಕೃತಿಕ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು / ಭಕ್ತಾದಿಗಳು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಜಿಲ್ಲಾಡಳಿತ, ಹಾಸನ ಈ ಮೂಲಕ ಕೋರಿದೆ.

# ಹಟ್ಟಿ, ಕಾಲನಿಗಳಲ್ಲಿ ಜಾಗೃತಿ ತುರ್ತು ಅಗತ್ಯ

**ಚಿತ್ರದುರ್ಗ:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಒಳ್ಳೆಯ ಬದ್ಧತೆಯಿಂದ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸಮೀಕ್ಷೆ ಕಾರ್ಯ ಕೈಗೊಂಡಿದ್ದು, ರಾಜ್ಯದ ಪ್ರಗತಿಗೆ ದಾರಿ ಆಗಲಿದೆ. ಆದ್ದರಿಂದ ಯಾರೊಬ್ಬರೂ ಅಪಸ್ವರ ಮಾಡದೆ ಎಲ್ಲ ಜಾತಿ ಜನರು ಪಾಲ್ಗೊಳ್ಳಬೇಕೆಂದು ಮಾಜಿ ಸಚಿವ ಎಚ್.ಆಂಜನೇಯ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ,ಯಾವುದೇ ರಾಜ್ಯ ಅಭಿವೃದ್ಧಿಗೊಳ್ಳಬೇಕಾದರೆ, ಅಲ್ಲಿನ ಜನರ ಸ್ಥಿತಿಗತಿ ಅರಿತುಕೊಳ್ಳಬೇಕು. ಯಾವ ಸಮುದಾಯ ಎಷ್ಟು ಸಂಖ್ಯೆಯಲ್ಲಿದೆ, ಅವರ ಹಿಂದುಳಿಯುವಿಕೆ ಸೇರಿ ವಿವಿಧ ಅಂಶಗಳ ಮಾಹಿತಿ ಅಗತ್ಯ. ಆಗ ಮಾತ್ರ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲು ಸಾಧ್ಯ ಎಂದರು.

ಯಾವ ಸಮುದಾಯದ ಬಳಿ ಎಷ್ಟು ಸಂಪತ್ತು ಇದೆ, ಇಲ್ಲದ ವರ್ಗ ಯಾವುದು, ಶಿಕ್ಷಣ ಪ್ರಗತಿ ಹೀಗೆ ವಿವಿಧ ರೀತಿ ಮಾಹಿತಿ ರಾಜ್ಯ ಸರ್ಕಾರದ ಬಳಿಯಿದ್ದಾಗ ಮಾತ್ರ ಹಿಂದುಳಿದ ಜಾತಿ ಜನರನ್ನು ಮುಖ್ಯವಾಹಿನಿಗೆ ತರಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಈ ನಿಟ್ಟಿನಲ್ಲಿ ನಡೆಯುತ್ತಿರುವ ಜಾತಿಗಣತಿ ಸಮೀಕ್ಷೆ ಕಾರ್ಯದಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು. ಅ.18ರ ವರೆಗೆ ಸಮೀಕ್ಷೆ ವಿಸ್ತರಣೆ ಮಾಡಿರುವುದು ಉತ್ತಮ ನಡೆ ಆಗಿದೆ. ರಾಜ್ಯದಲ್ಲಿ ಮಾದಿಗರ ಸಂಖ್ಯೆ ಕುಗ್ಗಿಸುವ ಕುತಂತ್ರ ನಡೆಯುತ್ತಿದೆ. ಇಂತಹ ವೇಳೆ ನಾವು ಹೆಚ್ಚು ಜಾಗೃತಿ ವಹಿಸಬೇಕು. ಹೋರಾಟಗಾರರು ಎಚ್.ಸಿ.ಮಹಾದೇವಪ್ಪ ಸೇರಿ ವಿವಿಧ ಮಂತ್ರಿಗಳ ಮನೆಗಳಿಗೆ ಮುತ್ತಿಗೆ ನಡೆ ಕೈಬಿಟ್ಟು, ಜಾತಿಗಣತಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕೆಂದರು.

ಈ ಹಿಂದೆ ಕಾಂತರಾಜ್ ಆಯೋಗ ವೈಜ್ಞಾನಿಕ ವರದಿ ನೀಡಿತ್ತು. ಆದರೆ, 10 ವರ್ಷಹಳೆಯದ್ದಾಗಿದೆಯೆಂಬ ಆರೋಪ ಕೇಳಿಬಂದಿದ್ದರಿಂದ ಮತ್ತೊಮ್ಮೆ ಸಮೀಕ್ಷೆ ಕಾರ್ಯವನ್ನು ಸರ್ಕಾರ ನಡೆಸುತ್ತಿದೆ. ಈ ಕಾರ್ಯಕ್ಕೆ ಆರಂಭದಲ್ಲಿ ಕೆಲವರು



ವಿರೋಧ ವ್ಯಕ್ತಪಡಿಸಿದ್ದರು. ಆದರೆ, ಈಗ ವಾಸ್ತವತೆ ಅರಿತು ಎಲ್ಲರೂ ಪಾಲ್ಗೊಳ್ಳುವುದು ಸ್ವಾಗತರ್ಹ ನಡೆ ಎಂದು ತಿಳಿಸಿದರು.

ಮಾದಿಗರು ಸೇರಿ ಎಲ್ಲ ಸಮುದಾಯಗಳು ಮನೆ, ಮಕ್ಕಳಿಗೆ ಶಿಕ್ಷಣ, ಗಂಗಕಲ್ಯಾಣ ಯೋಜನೆಯಡಿ ಕೊಳವೆಬಾವಿ, ಸಾಲ ಸೌಲಭ್ಯ ಹೀಗೆ ಸವಲತ್ತು ಪಡೆಯಲು ಜಾತಿಗಣತಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳುವುದು ಅಗತ್ಯ ಎಂದರು.

ಒಳಮೀಸಲಾತಿ ಜಾರಿ ವಿಷಯದಲ್ಲಿ ಎಕೆ, ಎಎ, ಎಡಿ ಜಾತಿ ಸೂಚಕ ವರ್ಗದಲ್ಲಿ ಗುರುತಿಸಿಕೊಂಡಿದ್ದವರು, ಎ ಅಥವಾ ಬಿ ಗುಂಪಿನಲ್ಲಿ ಗುರುತಿಸಿಕೊಳ್ಳಲು ಕಡ್ಡಾಯವಾಗಿ ಜಾತಿ ಘೋಷಣೆ ಮಾಡಿಕೊಳ್ಳಬೇಕಿದೆ. ಇಲ್ಲದಿದ್ದರೆ ಅವರು ಮೀಸಲಾತಿ ಸೌಲಭ್ಯದಿಂದ ವಂಚಿತರಾಗಲಿದ್ದಾರೆ ಎಂದು ತಿಳಿಸಿದರು.

ಈ ವೇಳೆ ಹೊಲಯ-ಮಾದಿಗ ಅದಲು-ಬದಲು ಆಗದಂತೆ ಎಚ್ಚರಿಕೆ ವಹಿಸಬೇಕಾಗಿದೆ. ಒಂದೊಮ್ಮೆ ಕಳ್ಳದಾರಿಯಲ್ಲಿ ನಮ್ಮ ಗುಂಪಿಗೆ ಪ್ರವೇಶಿಸಿದರೆ ಅಂತಹವರ ವಿರುದ್ಧ ಕಾನೂನು ಹೋರಾಟ ನಡೆಸಿ, ಶಿಕ್ಷೆ ಆಗುವವರೆಗೂ ವಿರಮಿಸುವುದಿಲ್ಲ

ಎಂದರು.ದಕ್ಷಿಣ ಕನ್ನಡದಲ್ಲಿ ಎಡಿ ಜಾತಿ ಸೂಚಕ ಜನರನ್ನು ಬಿ ಗುಂಪಿನಲ್ಲಿ ಗುರುತಿಸಲಾಗಿದೆ. ಆದ್ದರಿಂದ ಒಳಮೀಸಲಾತಿ ವಿಷಯದಲ್ಲಿ ಯಾವುದೇ ಗೊಂದಲಗಳು ಇಲ್ಲ. ಅನಗತ್ಯವಾಗಿ ಸುಳ್ಳು ವದಂತೆಗಳಿಗೆ ಕಿವಿಗೊಡದೆ ಮೀಸಲು ಸೌಲಭ್ಯ ಸದ್ಬಳಕೆ

ಮಾಡಿಕೊಳ್ಳಲು ಮುಂದಾಗಬೇಕು. ಮಕ್ಕಳನ್ನು ಶಿಕ್ಷಣವಂತರನ್ನಾಗಿಸಿ, ಉದ್ಯೋಗಸ್ಥರನ್ನಾಗಿ ಮಾಡಲು ಶ್ರಮಿಸಬೇಕೆಂದು ತಿಳಿಸಿದರು.

ಕಾಡುಗೊಲ್ಲರು ಈಗ ಜಾಗೃತಗೊಂಡಿದ್ದು, ಅವರು ಜಾತಿ ಕಲಂನಲ್ಲಿ ಕಾಡುಗೊಲ್ಲ ಎಂದೇ ಬರೆಸುವಂತೆ ಜಾಗೃತಿ ಮೂಡಿಸುತ್ತಿದ್ದಾರೆ. ಅವರ ಈ ಕಾರ್ಯ ಸ್ವಾಗತರ್ಹ.

ಒಟ್ಟಾರೆ ಅರ್ಧ ಗಂಟೆ ಸಮೀಕ್ಷೆಯಲ್ಲಿ ಪಾಲ್ಗೊಂಡರೇ ನಮ್ಮ ಭವಿಷ್ಯದ ಪೀಳಿಗೆಗೆ ಸರ್ಕಾರಿ ಸೌಲಭ್ಯ ದೊರೆಯಲಿದೆ ಎಂದರು.

ಹೋರಾಟಗಾರರು ಸದಾ ಚಳವಳಿ ನಡೆಸುವುದು ಅವರ ಬದ್ಧತೆ. ಮುಂದಿನ ದಿನಗಳಲ್ಲಿಯೂ ಹೋರಾಟ ನಡೆಸಬಹುದು. ಆದರೆ, ಅನಗತ್ಯವಾಗಿ ಸಚಿವ ಎಚ್.ಸಿ.ಮಹಾದೇವಪ್ಪ ಸೇರಿ ಅನೇಕರ ಮನೆಗೆ ಮುತ್ತಿಗೆ ಹಾಕುವುದರಿಂದ ಕಾಲಹರಣ ಆಗಲಿದೆ ಎಂದು ಆಂಜನೇಯ ಬೇಸರಿಸಿದರು.

ಈಗ ಜಾತಿಗಣತಿ ಸಮೀಕ್ಷೆ ಕಾರ್ಯದಲ್ಲಿ ಸಮುದಾಯದ ಪ್ರತಿ ವ್ಯಕ್ತಿ ಪಾಲ್ಗೊಳ್ಳುವ ರೀತಿ ಜಾಗೃತಿ ಮೂಡಿಸಲು ಹಳ್ಳಿ, ಸ್ಲಂ, ಎಕೆ, ಎಸ್ಸಿ, ಮಾದಿಗರ ಹಟ್ಟಿಗಳಿಗೆ ತೆರಳಬೇಕು. ಅ.18 ರ ಬಳಿಕ ನೀವು ಹೋರಾಟ ಮಾಡಿದರೆ ನಮ್ಮ ಅಭ್ಯಂತರ ಇಲ್ಲ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಜಿಪಂ ಮಾಜಿ ಅಧ್ಯಕ್ಷೆ ಗೀತಾನಂದಿನಿ ಗೌಡ, ಮಾಜಿ ಸದಸ್ಯ ಆರ್.ನರಸಿಂಹರಾಜು,

ಲಿಡ್ಕರ್ ಮಾಜಿ ಅಧ್ಯಕ್ಷ ಓ.ಶಂಕರ್, ವಕೀಲರಾದ ಶರಣಪ್ಪ, ಸಿ.ಎಸ್.ರವೀಂದ್ರ, ಮುಖಂಡರಾದ ಅನಿಲ್ ಕೋಟಿ, ಚೇತನ್ ಎಚ್.ಬೋರೇನಹಳ್ಳಿ, ಪ್ರಸನ್ನ ಜಯಣ್ಣ ಇತರರಿದ್ದರು.

# ನನ್ನ ಮತ ನನ್ನ ಹಕ್ಕು ವಿಷಯ ಕುರಿತು ಛಾಯಾಗ್ರಹಣ ಸ್ಪರ್ಧೆ

**ಗದಗ :** ದಿನಾಂಕ 15-9-2025 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಆಚರಿಸಲಾಗಿದ್ದು, ಅದರ ಅಂಗವಾಗಿ ನನ್ನ ಮತ ನನ್ನ ಹಕ್ಕು ಕುರಿತು ಎಲ್ಲ ಸರ್ಕಾರಿ/ ಖಾಸಗಿ ಅನುದಾನಿತ ಪಾಲಿಟೆಕ್ನಿಕ್ / ಇಂಜನೀಯರಿಂಗ್ ಕಾಲೇಜುಗಳಲ್ಲಿಯ ವಿದ್ಯಾರ್ಥಿಗಳಿಗೆ ಛಾಯಾಗ್ರಹಣ ( ಫೋಟೋಗ್ರಾಫಿ ಕಾಂಪಿಟೇಷನ್) ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಮತದಾನದ ಹಕ್ಕಿನ ಕುರಿತಾದ ಛಾಯಾಗ್ರಹಣದ (ಫೋಟೋಗ್ರಾಫಿ) ಚಿತ್ರಗಳನ್ನು ಅಕ್ಟೋಬರ್ 31 ರೊಳಗಾಗಿ https:www.democracydaykarnataka.in ಇಲಾಖೆಯ ವೆಬ್ ಸೈಟ್ ನಲ್ಲಿ ಅಪಲೋಡ್ ಮಾಡಲು ಎಲ್ಲ ಸರ್ಕಾರಿ / ಖಾಸಗಿ ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜನೀಯರಿಂಗ್ ಕಾಲೇಜುಗಳಲ್ಲಿಯ ವಿದ್ಯಾರ್ಥಿಗಳಿಗೆ ಕೋರಿದೆ. in ಇಲಾಖೆಯ ವೆಬ್ ಸೈಟ್ ನಲ್ಲಿ ಅಪಲೋಡ್ ಮಾಡಲು ಎಲ್ಲ ಸರ್ಕಾರಿ / ಖಾಸಗಿ ಅನುದಾನಿತ ಪಾಲಿಟೆಕ್ನಿಕ್ ಮತ್ತು ಇಂಜನೀಯರಿಂಗ್ ಕಾಲೇಜುಗಳಲ್ಲಿಯ ವಿದ್ಯಾರ್ಥಿಗಳಿಗೆ ಕೋರಿದೆ. ಸ್ಪರ್ಧೆಯಲ್ಲಿ ಭಾಗವಹಿಸಿದ ಮೊದಲ ಮೂರು ಸ್ಪರ್ಧಾಳುಗಳಿಗೆ ನಗದು ಬಹುಮಾನ ನೀಡಲಾಗುವುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನವೋದಯ ಪ್ರವೇಶ ಪರೀಕ್ಷೆ ಅವಧಿ ವಿಸ್ತರಣೆ

**ಶಿವಮೊಗ್ಗ:** ಜಿಲ್ಲೆಯ ಗಾಜನೂರಿನ ಜವಾಹರ ನವೋದಯ ವಿದ್ಯಾಲಯದ 2026-27 ನೇ ಸಾಲಿಗೆ 9 ಮತ್ತು 11 ನೇ ತರಗತಿ ಖಾಲಿ ಇರುವ ಸೀಟುಗಳನ್ನು ತುಂಬಲು ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ಅ.21 ರವರೆಗೆ ವಿಸ್ತರಿಸಲಾಗಿದೆ. ಪ್ರವೇಶ ಪರೀಕ್ಷೆಯ ದಿನಾಂಕ; 07/02/2026.

ಅರ್ಹ 9 ನೇ ತರಗತಿ ವಿದ್ಯಾರ್ಥಿಗಳು https://cbseitms.nic.in/2025/nvsix_9 ಹಾಗೂ ಅರ್ಹ 11 ನೇ ತರಗತಿ ವಿದ್ಯಾರ್ಥಿಗಳು https://cbseitms.nic.in/2025/nvsxi_11 ಈ ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸುವಂತೆ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವ ಹಿರಿಯ ನಾಗರಿಕರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ.ರಾಜೇಶ್ ಎನ್.ಹೊಸಮನೆ ಅಭಿಪ್ರಾಯ

# ದೇಶದ ಅಭಿವೃದ್ಧಿಗೆ ಹಿರಿಯ ನಾಗರಿಕರ ಮಾರ್ಗದರ್ಶನ ಅವಶ್ಯಕ

**ಬಳ್ಳಾರಿ:** ಹಿರಿಯ ನಾಗರಿಕರು ಸಮಾಜದ ಬೇರುಗಳು. ಒಂದು ದೇಶ, ರಾಜ್ಯ ಅಭಿವೃದ್ಧಿಯಾಗಲು ಹಿರಿಯ ನಾಗರಿಕರ ಮಾರ್ಗದರ್ಶನ ಅವಶ್ಯಕವಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಹಿರಿಯ ನಾಗರಿಕರಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ "ಹಿರಿಯ ನಾಗರಿಕರು:

ನಮ್ಮ ಆಶೋತ್ತರಗಳು ನಮ್ಮ ಯೋಗಕ್ಷೇಮ ಮತ್ತು ನಮ್ಮ ಹಕ್ಕುಗಳನ್ನು ಸ್ಥಳೀಯ ಮತ್ತು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಬಲ್ಲ ಸಶಕ್ತರು" ಎಂಬ ವಿಶ್ವಸಂಸ್ಥೆಯ ಘೋಷವಾಕ್ಯದಡಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಗುರುವಾರ ಏರ್ಪಡಿಸಿದ್ದ "ವಿಶ್ವ ಹಿರಿಯ ನಾಗರಿಕರ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಹಿರಿಯ ನಾಗರಿಕರನ್ನು ಕಡೆಗಣಿಸುತ್ತಿರುವುದು ಕಂಡುಬರುತ್ತಿದ್ದು, ವಿಷಾಧನೀಯ ಸಂಗತಿಯಾಗಿದೆ. ಹಿರಿಯ ನಾಗರಿಕರನ್ನು ಗೌರವದಿಂದ ಕಾಣಬೇಕು. ಅವರನ್ನು ಕಡೆಗಣಿಸದೇ ಕಾಳಜಿ ವಹಿಸಿ ಒಂಟಿತನ ಕಾಡದೇ ಹಾಗೆ ನೋಡಿಕೊಳ್ಳಬೇಕು ಎಂದರು.

ಸಮಾಜದಲ್ಲಿ ಹಿರಿಯ ನಾಗರಿಕರಿಗೆ ಬೇಕಾದ ಗೌರವ, ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿಕೊಡಬೇಕು. ಹಿರಿಯ



ನಾಗರಿಕರು ನಿಮ್ಮಲ್ಲಿರುವ ಯಾವುದೇ ಕಾನೂನಾತ್ಮಕ ಸಮಸ್ಯೆಗಳಿದ್ದರೆ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರಕ್ಕೆ ದೂರು ಸಲ್ಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಅವರು ಮಾತನಾಡಿ, ಹಿರಿಯ ನಾಗರಿಕರ ಅನುಭವದಿಂದ ದೇಶವು ಅಭಿವೃದ್ಧಿಯಲ್ಲಿ ಸಾಗುತ್ತಿದೆ.

ನಮ್ಮ ದೇಶದ ಪ್ರಧಾನಿ ಹಾಗೂ ರಾಜ್ಯದ ಮುಖ್ಯಮಂತ್ರಿಗಳು ಸಹ ಹಿರಿಯ ನಾಗರಿಕರಾಗಿದ್ದು, ದೇಶವನ್ನು ಅಭಿವೃದ್ಧಿಯ ಕಡೆ ಮುನ್ನೆಡೆಸುವಲ್ಲಿ ಅವರ ಮಾರ್ಗದರ್ಶನವು ಅತ್ಯಂತ ಮಹತ್ತರವಾಗಿದೆ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣ ನಾಯಕ್ ಅವರು ಮಾತನಾಡಿ, ಒಂದು ದೇಶವು ಸುಭೀಕ್ಷೆಯಿಂದ ಇರಲು ಮಕ್ಕಳು, ಮಹಿಳೆಯರು, ಹಿರಿಯ ನಾಗರಿಕರು ತುಂಬಾ ಅವಶ್ಯಕ. ಹಿರಿಯ ನಾಗರಿಕರು ನೈತಿಕ ಮೌಲ್ಯಗಳನ್ನು ಮತ್ತು ಜೀವನದ ರೂಪುರೇಷೆಗಳನ್ನು ಇಂದಿನ ಪೀಳಿಗೆಯಲ್ಲಿ ಆಳವಾಗಿ ಬಿತ್ತುವ ಕೆಲಸವಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಶತಾಯುಶಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಹಿರಿಯ ನಾಗರಿಕರಿಗೆ ಸನ್ಮಾನಿಸಲಾಯಿತು. ಬಳಿಕ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ಹಿರಿಯ ನಾಗರಿಕರಿಗೆ ಬಹುಮಾನ ವಿತರಿಸಲಾಯಿತು. ವಿವಿಧ ರೀತಿಯ ಸಲಕರಣೆ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಕಲ್ಯಾಣಾಧಿಕಾರಿ ಗೋವಿಂದಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿ ಸವಿತಾ, ನಿವೃತ್ತ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಎಂ.ಟಿ.ಮಲ್ಲೇಶ್, ಹಿರಿಯ ಸಾಹಿತಿ ಡಿ.ವೆಂಕಮ್ಮ, ಸ್ಮೈಲ್ ಸಂಸ್ಥೆಯ ಸಿಬ್ಬಂದಿ ಸೇರಿದಂತೆ ಹಿರಿಯ ನಾಗರಿಕರು ಹಾಗೂ ಇತರರು ಉಪಸ್ಥಿತರಿದ್ದರು.

# ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ನಿರ್ದೇಶನ ಅಧಿಕಾರಿಗಳು ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಹತ್ವ ಅರಿಯಬೇಕು



**ಬಳ್ಳಾರಿ:** ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯರೂ ಆಗಿರುವ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಪ್ರಾಧಿಕಾರದ ಮಹತ್ವ ಅರಿತುಕೊಂಡಾಗ ಮಾತ್ರ ಅನಿರೀಕ್ಷಿತವಾಗಿ ಸಂಭವಿಸುವ ಎಂತಹ ವಿಪತ್ತನ್ನು ಎದುರಿಸಲು ಸಾಧ್ಯ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ ಉಂಟಾಗಿರುವ ಹಾನಿಯ ಕುರಿತು ಹಾಗೂ ಮಳೆ, ಪ್ರವಾಹ ಪರಿಸ್ಥಿತಿ ನಿಭಾಯಿಸಲು ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಚರ್ಚಿಸಲು ಗುರುವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಪತ್ತು ಎನ್ನುವುದು ಸಾರ್ವಜನಿಕ ಜೀವನಕ್ಕೆ ಅನಿರೀಕ್ಷಿತ ಮತ್ತು ಗಂಭೀರವಾದದ್ದು. ಹಾಗಾಗಿ ಪ್ರಾಧಿಕಾರದ ಸದಸ್ಯರಾಗಿರುವ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳಿಗೆ ನಿಯಮಿತವಾಗಿ ಅಣಕು ಪ್ರದರ್ಶನ ಮತ್ತು ತರಬೇತಿ ಹೊಂದಬೇಕು ಎಂದು ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಕೃಷಿ ಮತ್ತು ತೋಟಗಾರಿಕೆ ಕ್ಷೇತ್ರಕ್ಕೆ ಸಂಬಂಧಿಸಿದಂತೆ, ಯಾವುದೇ ರೀತಿಯ ಗಂಭೀರ ಹಾನಿಯಾಗಿರುವುದು ಕಂಡುಬಂದಿಲ್ಲ. ಆದರೆ, ಜಿಲ್ಲೆಯಲ್ಲಿ ವಿವಿಧೆಡೆ ಭತ್ತದ ಬೆಳೆಗೆ ದುಂಡಾಣು ಮಚ್ಚೆ ರೋಗಕಂಡುಬಂದಿದ್ದು, ಈ ಕುರಿತು ರೈತರಿಗೆ ಸೂಕ್ತ ಕ್ರಮವಹಿಸಲು ನಿರ್ದೇಶನ ನೀಡಬೇಕು. 1 ಎಕರೆಯಾದರೂ ಅಥವಾ 100 ಎಕರೆಯದರೂ ಸಹ ಬೆಳೆ ಹಾನಿಯಾದಲ್ಲಿ ಯಾವುದನ್ನು ನಿರ್ಲ್ಯಕ್ಷಿಸುವಂತಿಲ್ಲ, ಗಣತಿ ಮಾಡಿ ವರದಿ ಮಾಡಬೇಕು ಎಂದು ಕೃಷಿ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಮಳೆಯಿಂದಾಗಿ ರಾಜ್ಯ ಹೆದ್ದಾರಿ, ಗ್ರಾಮೀಣ ಭಾಗದ ರಸ್ತೆಗಳಲ್ಲಿ ತಗ್ಗು-ಗುಂಡಿ ಆಗಿದ್ದಲ್ಲಿ ಕೂಡಲೇ ಮುಚ್ಚಬೇಕು ಮತ್ತು ನಿರ್ವಹಣೆ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂದು ಲೋಕೋಪಯೋಗಿ, ಪಂಚಾಯತ್ ರಾಜ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬೆಳೆಹಾನಿ, ಸಾರ್ವಜನಿಕ ಕಟ್ಟಡ, ರಸ್ತೆ ಹಾನಿ, ಕುಡಿಯುವ ನೀರು ಮತ್ತು ಆರೋಗ್ಯ ಸೌಲಭ್ಯ ಸೇರಿದಂತೆ ಯಾವುದೇ ರೀತಿಯ ಸಮಸ್ಯೆಗಳ ಕುರಿತು ಪತ್ರಿಕೆಗಳಲ್ಲಿ ವರದಿಯಾದಲ್ಲಿ ಅಂತಹವುಗಳನ್ನು ಆದ್ಯತೆಯಾಗಿ ಪರಿಗಣನೆಗೆ ತೆಗೆದುಕೊಂಡು ಸರಿಪಡಿಸಲು ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ಜಿಲ್ಲೆಯಲ್ಲಿ ಈವರೆಗೆ ಶಾಲೆ ಮತ್ತು ಅಂಗನವಾಡಿ ಕೊಠಡಿಗಳು ಬೀಳುವ ಹಂತದಲ್ಲಿ ಅಥವಾ ದುರಸ್ತಿಯಿರುವ ಕಟ್ಟಡಗಳನ್ನು ಗುರುತಿಸಿ ಮಾಹಿತಿ ನೀಡಬೇಕು. ದುರಸ್ತಿ ವಿದ್ಯುತ್ ಕಂಬಗಳಿದ್ದಲ್ಲಿ ಗುರುತಿಸಬೇಕು ಎಂದು ಡಿಡಿಪಿಐ, ಜೆಸ್ಕಾಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಸಾಂಕ್ರಾಮಿಕ ರೋಗಗಳು ಹರಡದಂತೆ ಮತ್ತು ಅಗತ್ಯ ಔಷಧಿಗಳ ದಾಸ್ತಾನು ಇಟ್ಟುಕೊಳ್ಳುವಂತೆ ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಎಸ್‌ಡಿಆರ್‌ಎಫ್ ಅಡಿ ಬಾಕಿ ಇರುವ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸಬೇಕು. ಅಗ್ನಿಶಾಮಕ ಅಧಿಕಾರಿಗಳು ನಿಯಮಿತವಾಗಿ ಪೂರ್ವ ತಯಾರಿ ಹೊಂದುವ ಮೂಲಕ ವಿಪತ್ತು ಸಂದರ್ಭದಲ್ಲಿ ಸಿದ್ಧರಿರಬೇಕು ಎಂದು ಜಿಲ್ಲಾಧಿಕಾರಿಯವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಸಹಾಯಕ ಆಯುಕ್ತ ಪಿ.ಪ್ರಮೋದ್, ಕೃಷಿ ಜಂಟಿ ನಿರ್ದೇಶಕ ಸೋಮಸುಂದರ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹನುಮನಗೌಡ ಪೊಲೀಸ್ ಪಾಟೀಲ್ ಸೇರಿದಂತೆ ತೋಟಗಾರಿಕೆ, ಡಿಯುಡಿಸಿ, ಜೆಸ್ಕಾಂ, ಡಿಡಿಪಿಐ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ದಾವಣಗೆರೆಯಲ್ಲಿ ಅ.13ರಿಂದ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ವತಿಯಿಂದ ಅಕ್ಟೋಬರ್ 13ರಿಂದ 19ರವರೆಗೆ ನಗರದ ನೇತಾಜಿ ಸುಭಾಷ್ ಚಂದ್ರ ಬೋಸ್ ಒಳಾಂಗಣ ಕ್ರೀಡಾಂಗಣದಲ್ಲಿ ಯುನಿಕ್ಸ್ ಸನ್ ರೈಸ್ ರಾಜ್ಯ ಮಟ್ಟದ ಬ್ಯಾಡ್ಮಿಂಟನ್ ಪಂದ್ಯಾವಳಿ ನಡೆಯಲಿದೆ ಎಂದು ದಾವಣಗೆರೆ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ಎಸ್.ಎನ್.ಬಸವರಾಜ್ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ಟೋಬರ್ 13ರಂದು ಬೆಳಗ್ಗೆ 11.45ಕ್ಕೆ ಪಂದ್ಯಾವಳಿ ಆರಂಭ ಆಗಲಿದ್ದು, ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಸಚಿವರು ಮತ್ತು ದಾವಣಗೆರೆ ಜಿಲ್ಲೆಯ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಉದ್ಘಾಟನೆ ಮಾಡುವರು.

ಕ್ರೀಡಾ ಧ್ವಜಾರೋಹಣ ಮಾಡುವ ಮೂಲಕ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಪಂದ್ಯಗಳನ್ನು ಉದ್ಘಾಟಿಸುವರು. ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ, ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ,

ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್, ಬೆಂಗಳೂರಿನ ಕಾರ್ಯದರ್ಶಿ ಪಿ.ರಾಜೇಶ್ ಈ ವೇಳೆ ಇರಲಿದ್ದಾರೆ. ಅಧ್ಯಕ್ಷತೆಯನ್ನು ದಾವಣಗೆರೆ ಜಿಲ್ಲಾ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷ ಎಸ್. ಎನ್. ಬಸವರಾಜ್ ವಹಿಸಲಿದ್ದಾರೆ ಎಂದರು.

ಮುಖ್ಯ ಅತಿಥಿಗಳಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶ್ರೀಹರ್ಷ, ಶ್ರೀನಿವಾಸ್ ಶಿವಗಂಗಾ, ಉದಯ ಶಿವಕುಮಾರ್, ಮಹೇಶ್ ಆರ್ ಶೆಟ್ಟಿ,

ಶ್ರೀಧರ್ ಎಸ್.ಪಿ., ನಲ್ಲೂರು ರಾಘವೇಂದ್ರ, ಗಿರಿರಾಜು ಡಿ.ಆರ್., ಇತರರು ಆಗಮಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಹೇಶ್, ಗಿರಿರಾಜ್ ಇತರರು ಇದ್ದರು.

# ಮ್ಯಾಮ್ಕೋಸ್ : ಪ್ರತಿಭಾವಂತ ಮಕ್ಕಳಿಗೆ ಪಾರಿತೋಷಕ ಪಡೆಯಲು ಅರ್ಜಿ ಆಹ್ವಾನ

**ಶಿವಮೊಗ್ಗ:** ಮಲೆನಾಡು ಅಡಿಕೆ ಮಾರಾಟದ ಸಹಕಾರ ಸಂಘ ನಿಯಮಿತಿ ವತಿಯಿಂದ 2024–25 ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ರ‍್ಯಾಂಕ್ ಪಡೆದ ಸಂಘದ ಸದಸ್ಯರ ಮಕ್ಕಳಿಗೆ ಪಾರಿತೋಷಕ ನೀಡಿ ಗೌರವಿಸಲು ಅರ್ಜಿ ಆಹ್ವಾನಿಸಿದೆ.

ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಗಳಲ್ಲಿ ರ‍್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಬೆಳ್ಳಿ ಹಬ್ಬದ ಪಾರಿತೋಷಕ, ಬಿ.ಎ, ಬಿ.ಎಸ್ಸಿ, ಬಿಕಾಂ/ಬಿಬಿಎಂ/ಬಿಬಿಎ ಅಥವಾ ಬಿಸಿಎ, ಬಿಎಸ್ಸಿ(ಕೃಷಿ/ತೋಟಗಾರಿಕೆ/ಸಿರಿಕಲ್ಚರ್), ಬಿವಿಎಸ್‌ಸಿ, ಬಿಎಫ್‌ಎಸ್‌ಸಿ, ಬಿಟೆಕ್. ಡೈರಿ, ಎಂಬಿಬಿಎಸ್, ಬಿಯುಎಂಎಸ್, ಬಿಹೆಚ್‌ಎಂಎಸ್, ಬಿಎಎಂಎಸ್, ಬಿಎಸ್‌ಎಂಎಸ್, ಬಿಎನ್‌ವೈಎಸ್, ಬಿಡಿಎಸ್, ಬಿಪಿಟಿ, ಬಿಫಾರ್ಮ್ ಪದವಿಗಳಲ್ಲಿ ರ‍್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ಸುವರ್ಣ ಮಹೋತ್ಸವ ಪಾರಿತೋಷಕ ಹಾಗೂ ಸಂಸ್ಕೃತ ಅಥವಾ ಯಾವುದೇ ವಿಷಯದಲ್ಲಿ ಎಂ.ಎ, ಎಂಕಾಂ ಅಥವಾ ಎಂಸಿಎ/ಎಂಎಸ್ಸಿ/ ಎಂಬಿಎ/ ಎಂಟೆಕ್ ಅಥವಾ ಎಂಇ/ ಎಂಫಾರ್ಮ್/ ಸಿಎ/ ಇಂಜಿನಿಯರಿಂಗ್/ ಎಂಎಸ್/ ಪಿಹೆಚ್‌ಡಿ ಪದವಿಗಳಲ್ಲಿ ರ‍್ಯಾಂಕ್ ಪಡೆದ ವಿದ್ಯಾರ್ಥಿಗಳಿಗೆ ವಜ್ರ ಮಹೋತ್ಸವ ಪಾರಿತೋಷಕ ನೀಡಿ ಗೌರವಿಸಲಾಗುತ್ತದೆ.

ಶೈಕ್ಷಣಿಕವಾಗಿ ಮಾತ್ರವಲ್ಲದೆ ಕ್ರೀಡೆಯಲ್ಲಿ ರಾಜ್ಯಮಟ್ಟ, ರಾಷ್ಟ್ರ ಮಟ್ಟ ಹಾಗೂ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟದಲ್ಲಿ ಭಾಗವಹಿಸಿ ಪುರಸ್ಕಾರ ಪಡೆದಿರುವ ಕ್ರೀಡಾಪಟುಗಳಿಗೆ ಪಾರಿತೋಷಕ ನೀಡಿ ಗೌರವಿಸಲಾಗುತ್ತದೆ.

ಆಸಕ್ತರು ಅ.31 ರೊಳಗೆ ಅರ್ಜಿಯೊಂದಿಗೆ ಅಂಕಪಟ್ಟಿಯ ಮೂಲಕ ಪ್ರತಿ ನಕಲನ್ನು ಸಂಘದ ಶಾಖೆಗಳಿಗೆ ಅಥವಾ ಕೇಂದ್ರ ಕಚೇರಿಗೆ ಸಲ್ಲಿಸಬೇಕು ಎಂದು ಮಾಮ್‌ಕೋಸ್ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

# ಸಾಮಾನ್ಯ, ಎಸ್‌ಸಿ/ಎಸ್‌ಟಿ ರೈತರಿಗೆ ಎಎಂಸಿ ವಿತರಣೆ ಕಾರ್ಯಕ್ರಮ ಆಯೋಜನೆ

**ಶಿವಮೊಗ್ಗ:** 2025–26 ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ "ಸಮಗ್ರ ಪೋಷಕಾಂಶ ನಿರ್ವಹಣೆ ಹಾಗೂ ಸಮಗ್ರ ರೋಗ/ಕೀಟ ನಿಯಂತ್ರಣ" ಕಾರ್ಯಕ್ರಮದಡಿ ಜೈವಿಕ ಗೊಬ್ಬರವಾದ ಅರ್ಕಾ ಮೈಕ್ರೋಬಿಯಲ್ ಕನ್ಸಾರ್ಷಿಯಮ್ (ಎಎಂಸಿ) ಪರಿಕರವನ್ನು ಅರ್ಹ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ವಿತರಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು, ಅರ್ಹ ರೈತರಿಂದ ನೋಂದಣಿ ಆಹ್ವಾನಿಸಿದೆ.

ಆಸಕ್ತ ರೈತರು ಪಹಣಿ, ಆಧಾರ ಮತ್ತು ಬ್ಯಾಂಕ್ ಪಾಸ್‌ಬುಕ್, ಎಸ್‌ಸಿ/ಎಸ್‌ಟಿ ರೈತರು ಆರ್‌ಡಿ ಸಂಖ್ಯೆ ಇರುವ ಜಾತಿ ಪ್ರಮಾಣ ಪತ್ರ ನಕಲುಗಳೊಂದಿಗೆ ಸಹಾಯಕ ತೋಟಗಾರಿಕೆ ಕಚೇರಿಯನ್ನು ಸಂಪರ್ಕಿಸಿ.

ಹೆಚ್ಚಿನ ಮಾಹಿತಿಗಾಗಿ ದೂ,ಸಂ: ಕಸಬಾ ಹೋಬಳಿಯ ಅಧಿಕಾರಿ ಪ್ರಿಯಾಂಕ–9113812090, ಅಂಜನಾಪುರ ಹೋಬಳಿಯ ಅಧಿಕಾರಿ ದೊರೆರಾಜ್–8861994178, ಉಡುಗಣಿ ಹೋಬಳಿಯ ಅಧಿಕಾರಿ ಅಶೋಕ ಎಂ.ಸಿ–9108548454, ಹೊಸೂರು ಹೋಬಳಿಯ ಅಧಿಕಾರಿ ಶರತ್–6363095898, ತಾಳಗುಂದ ಹೋಬಳಿಯ ಅಧಿಕಾರಿ ರುದ್ರೇಶ್–7975515575 ಗೆ ಸಂಪರ್ಕಿಸಬಹುದೆಂದು ಶಿಕಾರಿಪುರದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

# ವೈದ್ಯಕೀಯ ಪದವಿಯಲ್ಲಿ ಎರಡನೇ ಟಾಪರ್ ಆಗಿ ಲಲಿತೇಶ್ವರಿ ಕೆ.ಎಸ್.



**ಶಿವಮೊಗ್ಗ :**– ತಾಲೂಕಿನ ನಿದಿಗೆ ಡೈರಿ ಸಮೀಪವಿರುವ ಪ್ರತಿಷ್ಠಿತ ಟಿಎಂಎಇಎಸ್ ಆಯುರ್ವೇದ ವೈದ್ಯಕೀಯ ಶಿಕ್ಷಣ ಕಾಲೇಜಿನ 2020–21ನೇ ಬ್ಯಾಚ್‌ನ ಟಾಪರ್ ವಿದ್ಯಾರ್ಥಿಗಳ ಪಟ್ಟಿಯಲ್ಲಿ ಎರಡನೇ ಟಾಪರ್ ಆಗಿ ಲಲಿತೇಶ್ವರಿ ಕೆ.ಎಸ್. ಅವರು ಉತ್ತೀರ್ಣರಾಗಿ ಕಾಲೇಜಿಗೆ ಹಾಗೂ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಈ ಪ್ರತಿಭಾನ್ವಿತೆಯು ನಗರದ ಖ್ಯಾತ ಪತ್ರಿಕಾ ಛಾಯಾಗ್ರಾಹಕರಾದ ಕೆ.ಆರ್. ಸೋಮನಾಥ್ ಮತ್ತು ಉಷಾ ದಂಪತಿಗಳ ಪುತ್ರಿ. ಇವರ ಸಾಧನೆಗೆ ಸಂಸದ ಬಿ.ವೈ . ರಾಘವೇಂದ್ರ, ಮಾಜಿ ಉಪ ಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪ , ಶಾಸಕರಾದ ಚನ್ನಬಸಪ್ಪ, ರಾಷ್ಟ್ರ ಬಳಗದ ಯುವ ಮುಖಂಡ ಕೆ.ಇ. ಕಾಂತೇಶ್ ಇನ್ನಿತರರು ಅಭಿನಂದಿಸಿದ್ದಾರೆ.

# ರಾಜ್ಯಮಟ್ಟದ ಕರಾಟೆಯಲ್ಲಿ – ಕುಶಾಲ್ ಎಂ.

**ಶಿವಮೊಗ್ಗ:** ಶಾಲಾ ಶಿಕ್ಷಣ ಇಲಾಖೆ, ಉಪ ನಿರ್ದೇಶಕರ ಕಚೇರಿ ಶಿವಮೊಗ್ಗ. ಇವರ ಆಶ್ರಯದಲ್ಲಿ ನೆಹರು ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ತಾಲೂಕು ಮತ್ತು ಜಿಲ್ಲಾಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಗುರುಪುರದ ಬಿಜಿಎಸ್ ಆಂಗ್ಲ ಮಾಧ್ಯಮ ಶಾಲೆಯ ಪ್ರತಿಭಾನ್ವಿತ ಕ್ರೀಡಾಪಟು ಕುಶಾಲ್ ಎಂ. ತಾಲೂಕು ಮತ್ತು ಜಿಲ್ಲಾಮಟ್ಟದ 45 ಕೆಜಿ ವಿಭಾಗದ ಕರಾಟೆ ಸ್ಪರ್ಧೆಯಲ್ಲಿ ಭಾಗವಹಿಸಿ, ಉತ್ತಮ ಸ್ಪರ್ಧೆಯನ್ನು ನೀಡಿ,ತಾಲ್ಲೂಕು ಮತ್ತು ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು, ದಾವಣಗೆರೆಯಲ್ಲಿ ನಡೆಯುವ ರಾಜ್ಯಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾನೆ.

ಬಿಜಿಎಸ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 6ನೇ ತರಗತಿಯಲ್ಲಿ ಓದುತ್ತಿರುವ ಈ ಪ್ರತಿಭೆಯು ಕ್ರೀಡೆಯ ಜೊತೆಗೆ, ಓದಿನಲ್ಲಿಯೂ

ಪ್ರತಿಭಾನ್ವಿತನಾಗಿರುತ್ತಾನೆ.ಗುರುಪುರದಲ್ಲಿ ವಾಸವಿರುವ ಮೋಹನ್ ಕೆ. ಎಸ್. ಮತ್ತು ಉಮಾದೇವಿ ದಂಪತಿಗಳ ಪುತ್ರನಾಗಿರುತ್ತಾನೆ.

ಈ ಕ್ರೀಡಾ ಪ್ರತಿಭೆಯ ಮುಂದಿನ ಕ್ರೀಡಾ ಜೀವನ ಯಶಶ್ವಿಯಾಗಲೆಂದು ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ



ಪ್ರಧಾನ ಕಾರ್ಯದರ್ಶಿಗಳಾದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿಯವರು, ಪೂಜ್ಯ ಶ್ರೀಶ್ರೀ ನಾದಮಯಾನಂದನಾಥ ಸ್ವಾಮೀಜಿಯವರು, ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಶಾಲಾ ಕಾಲೇಜಿನ ಪ್ರಾಂಶುಪಾಲರಾದ ಸುರೇಶ್ ಎಸ್. ಎಚ್. ಹಾಗೂ ಅಧ್ಯಾಪಕ ವೃಂದದವರು, ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ

# ಚುನಾವಣಾ ಆಯೋಗದ ವಿರುದ್ಧ ಹರಿಹಾಯ್ದ ಜೈರಾಮ್ ರಮೇಶ್

**ನವದೆಹಲಿ:** ಮತದಾರರ ಪಟ್ಟಿಯಿಂದ ನಾಗರಿಕರಲ್ಲದವರನ್ನು ತೆಗೆದುಹಾಕಲು ಎಸ್‌ಐಆರ್ ಪ್ರಕ್ರಿಯೆಯ ಅಗತ್ಯವು ಹೆಚ್ಚಾಗಿದೆ ಎಂದು ಕಾಂಗ್ರೆಸ್ ಹೇಳಿದೆ ಆದರೆ ಬಿಹಾರದಲ್ಲಿ ಎಷ್ಟು ನಾಗರಿಕರಲ್ಲದವರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂಬುದರ ಕುರಿತು ದೇಶಕ್ಕೆ ಅರಿವು ಮೂಡಿಸುವ ಸಮಗ್ರತೆ ಅಥವಾ ಧೈರ್ಯ ಚುನಾವಣಾ ಆಯೋಗಕ್ಕೆ ಇಲ್ಲ ಎಂದು ದೂರಿದೆ.

ಬಿಹಾರದಲ್ಲಿ ಎಷ್ಟು ನಾಗರಿಕರಲ್ಲದವರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂದು ಚುನಾವಣಾ ಸಂಸ್ಥೆ ತಿಳಿಸಿದ್ದರೆ, ಅದು ಈಗಾಗಲೇ ಇರುವುದಕ್ಕಿಂತ ಹೆಚ್ಚು ಬಹಿರಂಗವಾಗುತ್ತಿತ್ತು ಎಂದು ವಿರೋಧ ಪಕ್ಷ ಹೇಳಿದೆ.

ಬಿಹಾರ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಸುಪ್ರಿಂ ಕೋರ್ಟ್ ವಿಚಾರಣೆ ನಡೆಸಲಿದೆ ಎಂದು ಕಾಂಗ್ರೆಸ್

ಸಂವಹನ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ.

ಸುಪ್ರಿಂ ಕೋರ್ಟ್ ಮಧ್ಯಸ್ಥಿಕೆಗಳು ಸಾಮೂಹಿಕ ಮತದಾನದ ಅಭಾವದ ಭಯವನ್ನು ನಿವಾರಿಸಿದರೂ, ನಿಖರತೆ, ಸಮಾನತೆ, ಪಾರದರ್ಶಕತೆ ಮತ್ತು ನ್ಯಾಯಸಮ್ಮತತೆಯ ದೃಷ್ಟಿಕೋನದಿಂದ ಈ ಪ್ರಕ್ರಿಯೆ ಅಪೇಕ್ಷಿತವಾಗಿರುವುದನ್ನು ಬಿಟ್ಟುಬಿಟ್ಟಿದೆ ಎಂದು ವಿಶ್ಲೇಷಣೆ ಹೇಳಿಕೊಂಡಿದೆ.ಈ ಉತ್ತಮ ವಿಶ್ಲೇಷಣೆಯು ಚುನಾವಣಾ ಆಯೋಗವು ನಡೆಸಿದ ಸಂಪೂರ್ಣ ಪ್ರಕ್ರಿಯೆ ಸಂಪೂರ್ಣತೆ, ಸಮಾನತೆ ಮತ್ತು ನಿಖರತೆಯ ಮೂರು ಅಂಶಗಳಲ್ಲಿ ವಿಫಲವಾಗಿದೆ ಎಂದು ತೋರಿಸುತ್ತದೆ ಎಂದು ರಮೇಶ್ ಎಕ್ಸ್ ಮಾಡಿದ್ದಾರೆ.ಮತದಾರರ ಪಟ್ಟಿಯಿಂದ ನಾಗರಿಕರಲ್ಲದವರನ್ನು ತೆಗೆದುಹಾಕಲು ಪ್ರಕ್ರಿಯೆಯ ಅಗತ್ಯದ ಬಗ್ಗೆ ಹೆಚ್ಚಿನದನ್ನು ಹೇಳಲಾಗಿದೆ. ಬಿಹಾರದಲ್ಲಿ ಅಂತಹ ಎಷ್ಟು ನಾಗರಿಕರಲ್ಲದವರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗಿದೆ ಎಂಬುದರ ಕುರಿತು ದೇಶಕ್ಕೆ ಅರಿವು ಮೂಡಿಸುವ ಸಮಗ್ರತೆ ಅಥವಾ ಧೈರ್ಯ ಆಯೋಗಕ್ಕೆ ಇಲ್ಲ ಎಂದು ಅವರು ಹೇಳಿದರು.

# ಪೌರಕಾರ್ಮಿಕರಿಗೆ ಸಿಹಿ ಪೆಟ್ಟಿಗೆ ಮತ್ತು ರಕ್ಷಣಾತ್ಮಕ ಕ್ಯಾಪ್ ವಿತರಣೆ

**ದಾವಣಗೆರೆ** : ನವರಾತ್ರಿ ಸಂದರ್ಭದಲ್ಲಿ ಇಂಡಿಯಾ ಸ್ವೀಟ್ ಹೌಸ್ ದಾವಣಗೆರೆ ಮಹಾನಗರ ಪಾಲಿಕೆ ಕಚೇರಿಯಲ್ಲಿ ಪೌರಕಾರ್ಮಿಕರಿಗೆ ಸಿಹಿ ಪೆಟ್ಟಿಗೆ ಮತ್ತು ರಕ್ಷಣಾತ್ಮಕ ಸೂರ್ಯ ಕ್ಯಾಪ್‌ಗಳನ್ನು ವಿತರಿಸಿತು.

ಈ ಕಾರ್ಯಕ್ರಮದ ನೇತೃತ್ವವನ್ನು ಪಾಲಿಕೆ ಆಯುಕ್ತೆ ಶ್ರೀಮತಿ ರೇಣುಕಾ ವಹಿಸಿದ್ದರು, ವೇದಿಕೆ ಪ್ರತಿನಿಧಿ ಪ್ರಶಾಂತ್ ಬಿಡಿ ಸಮ್ಮುಖದಲ್ಲಿ.

ದಾವಣಗೆರೆಯ ಪೌರಕಾರ್ಮಿಕರು, ಬೇರೆಡೆಗಳಂತೆ, ನಗರದ ನೈರ್ಮಲ್ಯ ಮತ್ತು ಸಾರ್ವಜನಿಕ ಆರೋಗ್ಯವನ್ನು ಎತ್ತಿಹಿಡಿಯಲು – ಆಗಾಗ್ಗೆ ಕಠಿಣ ಹವಾಮಾನ ಮತ್ತು ಸವಾಲಿನ ಪರಿಸ್ಥಿತಿಗಳಲ್ಲಿ – ದಣಿವರಿಯಿಲ್ಲದೆ ಕೆಲಸ ಮಾಡುತ್ತಾರೆ. ಇಂಡಿಯಾ ಸ್ವೀಟ್ ಹೌಸ್‌ನ ಉಪಕ್ರಮವು ಸಾಂಪ್ರದಾಯಿಕ ಹಬ್ಬದ ಸನ್ನೆಗಳನ್ನು ಮೀರಿದೆ: ಪ್ರತಿಯೊಬ್ಬ ಪೌರಕಾರ್ಮಿಕರಿಗೆ ವಿಶೇಷವಾಗಿ ಸಂಗ್ರಹಿಸಲಾದ ಸಿಹಿ ಪೆಟ್ಟಿಗೆಯನ್ನು ಮಾತ್ರವಲ್ಲದೆ ಸೂರ್ಯನಿಂದ ರಕ್ಷಿಸಲು ರಕ್ಷಣಾತ್ಮಕ ಕ್ಯಾಪ್ ಸಹ ಪಡೆದರು, ಇದು ಕಾರ್ಮಿಕರ ಸುರಕ್ಷತೆ ಮತ್ತು ಸೌಕರ್ಯಕ್ಕೆ ಅಭಿಯಾನದ ಬದ್ಧತೆಯನ್ನು ಒತ್ತಿಹೇಳುತ್ತದೆ.




"ನಮ್ಮ ಪೌರಕಾರ್ಮಿಕರು ದಾವಣಗೆರೆಯ ಪ್ರಗತಿಯ ಬೆನ್ನೆಲುಬು. ವಿಶೇಷವಾಗಿ ನವರಾತ್ರಿಯ ಸಮಯದಲ್ಲಿ ಅವರ ಅವಿರತ ಸಮರ್ಪಣೆಯನ್ನು ಗುರುತಿಸುವುದು ನಮ್ಮ ಕರ್ತವ್ಯ ಮತ್ತು ನಮ್ಮ ಸವಲತ್ತು" ಎಂದು ಆಯುಕ್ತರಾದ ಶ್ರೀಮತಿ ರೇಣುಕಾ ಹೇಳಿದರು.

ಸಂಸ್ಥಾಪಕರಾದ ಶ್ವೇತಾ ಮತ್ತು ವಿಶ್ವನಾಥ್ ಅವರು, "ನವರಾತ್ರಿಯು ಕರುಣೆ, ಶಕ್ತಿ ಮತ್ತು ಕೃತಜ್ಞತೆಯ ಬಗ್ಗೆ. ಈ ವರ್ಷ, ದಾವಣಗೆರೆಯ ಪ್ರತಿಯೊಬ್ಬ ನೈರ್ಮಲ್ಯ ಕಾರ್ಮಿಕರು ತಮ್ಮನ್ನು ಗೌರವಿಸುತ್ತಾರೆಂದು ತಿಳಿದುಕೊಳ್ಳಬೇಕೆಂದು ನಾವು ಬಯಸಿದ್ದೇವೆ – ಕೇವಲ ಸಿಹಿ ತಿನಿಸುಗಳೊಂದಿಗೆ ಅಲ್ಲ, ಆದರೆ ಅವರ ಯೋಗಕ್ಷೇಮಕ್ಕಾಗಿ ಪ್ರಾಯೋಗಿಕವಾದದ್ದರೊಂದಿಗೆ. ಕ್ಯಾಪ್ ಮತ್ತು ಸಿಹಿ ಪೆಟ್ಟಿಗೆ ಒಟ್ಟಿಗೆ ನಮ್ಮ ಗೌರವ ಮತ್ತು ಕಾಳಜಿಯನ್ನು ಸಂಕೇತಿಸುತ್ತದೆ."

ಈ ಕಾರ್ಯಕ್ರಮವು ಸಮುದಾಯ, ಒಳಗೊಳ್ಳುವಿಕೆ ಮತ್ತು ಶ್ರಮಕ್ಕೆ ಘನತೆಯ ಪ್ರಜ್ಞೆಯನ್ನು ಬೆಳೆಸಿತು, ನಿಜವಾದ ಆಚರಣೆಗಳು ಎಲ್ಲರಿಗೂ ದೈನಂದಿನ ಜೀವನವನ್ನು ಸಾಧ್ಯವಾಗಿಸುವವರನ್ನು ಗುರುತಿಸುವುದು ಮತ್ತು ಬೆಂಬಲಿಸುವುದರೊಂದಿಗೆ ಪ್ರಾರಂಭವಾಗುತ್ತವೆ ಎಂಬ ಇಂಡಿಯಾ ಸ್ವೀಟ್ ಹೌಸ್‌ನ ಮೂಲ ನಂಬಿಕೆಯನ್ನು ಪ್ರತಿಧ್ವನಿಸಿತು.

# ಟ್ರಾನ್ಸ್ ಜೆಂಡರ್ ಸಮೀಕ್ಷೆಯಲ್ಲಿ ಭಾಗವಹಿಸಲು ಮನವಿ

**ರಾಮನಗರ:** ಸರ್ಕಾರದ ಆದೇಶದಂತೆ ಇದೇ ಪ್ರಥಮ ಬಾರಿಗೆ ರಾಜ್ಯಾದ್ಯಂತ ಟ್ರಾನ್ಸ್ ಜೆಂಡರ್ ಸಮೀಕ್ಷಾ ಕಾರ್ಯ ಪ್ರಾರಂಭವಾಗಿದ್ದು, ಮುಂಬರುವ ನವೆಂಬರ್ 21ರ ವರೆಗೆ (ಸರ್ಕಾರಿ ರಜೆ ಹೊರತು ಪಡಿಸಿ) ಟ್ರಾನ್ಸ್ ಜೆಂಡರ್ ಸಮೀಕ್ಷೆ ನಡೆಯಲಿದೆ.ಈ ಹಿನ್ನಲೆಯಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಮಹಿಳಾ ಅಭಿವೃದ್ಧಿ ನಿಗಮದ ವತಿಯಿಂದ ಟ್ರಾನ್ಸ್ ಜೆಂಡರ್ ಸಮುದಾಯದವರಿಗೆ ಜಿಲ್ಲಾ ಮಟ್ಟದಲ್ಲಿ ಸಮೀಕ್ಷೆ ನಡೆಸಲು ರಾಮನಗರ ಸರ್ಕಾರಿ ಆಸ್ಪತ್ರೆ ಹಾಗೂ ಚನ್ನಪಟ್ಟಣ, ಮಾಗಡಿ, ಕನಕಪುರ ತಾಲ್ಲೂಕು ಮಟ್ಟದ ಸರ್ಕಾರಿ ಆಸ್ಪತ್ರೆಗಳಲ್ಲಿ ಸ್ಥಳ ನಿಗದಿಯಾಗಿದೆ. ಟ್ರಾನ್ಸ್ಜೆಂಡರ್ ಅವರನ್ನು ಮುಖ್ಯವಾಹಿನಿಗೆ ತರಲು ಉದ್ಯೋಗ, ಶಿಕ್ಷಣ, ಮೀಸಲಾತಿ ಒದಗಿಸುವುದು, ಸಮುದಾಯದ ಜನಸಂಖ್ಯೆ, ಶೈಕ್ಷಣಿಕ ಮಟ್ಟ, ಸಾಮಾಜಿಕ ಹಾಗೂ ಆರ್ಥಿಕ ಸ್ಥಿತಿಗಳ ಮಾಹಿತಿಯನ್ನು ಕ್ರೂಢೀಕರಿಸಿ ಸಮುದಾಯದವರಿಗೆ ಅಗತ್ಯ ಸೌಲಭ್ಯಗಳನ್ನು ನೀಡುವುದು ಸಮೀಕ್ಷೆಯ ಮುಖ್ಯ ಉದ್ದೇಶವಾಗಿದೆ. ಹೆಚ್ಚಿನ ಸಂಖ್ಯೆಯಲ್ಲಿ ಸಮೀಕ್ಷೆಗೆ ಒಳಪಡಲು ಇಚ್ಚಿಸುವ ಲಿಂಗತ್ವ ಅಲ್ಪ ಸಂಖ್ಯಾತರು ನಿಗದಿಪಡಿಸಿರುವ ಸ್ಥಳಗಳಿಗೆ ತೆರಳಿ ತಮ್ಮ ವಿವರನ್ನು ನೋಂದಾಯಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ: 1800–599–2025 ಅನ್ನು ಸಂಪರ್ಕಿಸಬಹುದಾಗಿದೆ. ಟ್ರಾನ್ಸ್ ಜೆಂಡರ್ ಸಮುದಾಯದವರು ಮೂಲ ಹಂತದ ಸರ್ವೇಗೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಬೆಂಗಳೂರು ದಕ್ಷಿಣ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಕ್ಕೆಜೋಳ ಭತ್ತ, ರಾಗಿ ಇತರೆ ಬೆಳೆಗಳನ್ನು ಬೆಂಬಲ ಬೆಲೆಯಲ್ಲಿ ಖರೀದಿ ಮಾಡಲು ಸರ್ಕಾರ ತುರ್ತು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಮನವಿ



**ದಾವಣಗೆರೆ :** ಈ ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಂತೆ ಪ್ರಸಕ್ತ ಸಾಲಿನಲ್ಲಿ ಮುಂಗಾರಿನಲ್ಲಿ ಅತಿ ಹೆಚ್ಚು ಮಳೆಯಾಗಿದ್ದು ಜಮೀನುಗಳು ಜವುಗುಅತ್ತಿ, ಬಹುತೇಕ ಬೆಳೆಗಳು ಹಾಳಾಗಿರುತ್ತವೆ .ಇಳುವರಿ ತುಂಬಾ ಕುಂಠಿತವಾಗಿದೆ. ಇದ್ದ ಬದ್ದ ಬೆಳೆಗಳು ಈಗ ಒಂದೂವರೆ ತಿಂಗಳಿಂದ ಮಳೆ ಇಲ್ಲದೆ ಒಣಗಿ ಹೋಗಿರುತ್ತವೆ. ಇದರಿಂದ ರೈತರ ಸ್ಥಿತಿ ಇರುವ ಬೆಳೆಯನ್ನು ಸಂಗ್ರಹಿಸಿ ಮಾರಾಟ ಮಾಡಲು ಕಷ್ಟವಾಗಿದೆ. ಸೂಕ್ತ ಬೆಲೆ ದೊರೆಯುತ್ತಿಲ್ಲ, ಆದ ಪ್ರಯುಕ್ತ ಸರ್ಕಾರವು ಮೆಕ್ಕೆಜೋಳಕ್ಕೆ 3000/–ರೂಗಳನ್ನು ಬೆಂಬಲ ಬೆಲೆಯಾಗಿ ಘೋಷಿಸಬೇಕು. ಹಾಗೂ ದಾವಣಗೆರೆ ಜಿಲ್ಲೆಯಲ್ಲಿ 1,65,000 ಹೆಕ್ಟೇರ್ ಜಮೀನಿನಲ್ಲಿ, ಭದ್ರಾ ಅಚ್ಚುಕಟ್ಟು ಮತ್ತು ಪಂಪ್‌ಸೆಟ್ಟುಗಳ ನೆರವಿನಿಂದ ಹಾಗೂ ಇತರೆ ನೀರಿನ ಮೂಲಗಳಿಂದ ಭತ್ತವನ್ನು ಬೆಳೆಯಲಾಗಿದೆ. ಸುಮಾರು ನಾಲ್ಕು ಲಕ್ಷದಿಂದ 5 ಲಕ್ಷ ಮೆಟ್ರಿಕ್ ಟನ್ ಭತ್ತ ಬೆಳೆಯಲಾಗಿದೆ. ಆದ್ದರಿಂದ ರೈತರಿಗೆ 3000/– ರೂಪಾಯಿಗಳನ್ನು ಬೆಂಬಲ ಬೆಲೆ ನೀಡಿ ತುರ್ತಾಗಿ ಖರೀದಿ ಕೇಂದ್ರ ಪ್ರಾರಂಭಿಸಿ ಖರೀದಿಸಬೇಕೆಂದು ಮತ್ತು ಇನ್ನುಳಿದ ಉಳಿದ ಬೆಳೆಗಳಿಗೆ ಪ್ರೋತ್ಸಾಹಧನ ನೀಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು.

ಬಲ್ಲೂರು ರವಿಕುಮಾರ, ರಾಂಪುರ ಬಸನಗೌಡರು, ಅಂಜಿನಪ್ಪ ಪೂಜಾರಿ, ನಾಗರಕಟ್ಟೆ ಜಯನಾಯ್ಕ್, ಹೆಬ್ಬಾಳು ರಾಜಯೋಗಿ, ಮಾಯಕೊಂಡದ ಪ್ರತಾಪ್, ಮಿಯಾಪುರ ತಿರುಮಲೇಶ್, ದಶರಥ ಸೋಮಗೊಂಡು, ಗುಡೂರು ವೆಂಕಟೇಶ್ ಎಲ್. ಇನ್ನಿತರರು ಉಪಸ್ಥಿತರಿದ್ದರು.

# ಹಾಸನಾಂಬೆ ದರ್ಶನಕ್ಕೆ ವಿದ್ಯುಕ್ತ ಚಾಲನೆ

**ಹಾಸನ** : ಹಾಸನದಅಧಿದೇವತೆ ಹಾಗೂ ವರ್ಷಕ್ಕೊಮ್ಮೆಯಷ್ಟೇದರ್ಶನ ಭಾಗ್ಯಕರುಣಿಸುವ ಹಾಸನಾಂಬೆ ಗರ್ಭಗುಡಿ ಬಾಗಿಲನ್ನುಇಂದು ಮಧ್ಯಾಹ್ನ 12.20ಕ್ಕೆ ಶಾಸ್ತ್ರೋಕ್ತವಾಗಿತೆರೆಯಲಾಯಿತು.

ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿ, ತುಮಕೂರು ಶ್ರೀ ಸಿದ್ಧಗಂಗಾ ಮಠದ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು, ಕಂದಾಯ ಸಚಿವರು ಹಾಗೂ ಜಿಲ್ಲಾಉಸ್ತುವಾರಿ ಸಚಿವರಾದಕೃಷ್ಣ ಭೈರೇಗೌಡ, ಸಂಸದರಾದ ಶ್ರೇಯಸ್ ಎಂ ಪಟೇಲ್, ರಾಜ್ಯ ಗೃಹ ಮಂಡಳಿ ಅಧ್ಯಕ್ಷರು ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಶಾಸಕರಾದ ಸ್ವರೂಪ್ ಪ್ರಕಾಶ್‌ಅವರ ಸಮ್ಮುಖದಲ್ಲಿ ಬಾಗಿಲು ತೆರೆಯಲಾಯಿತು.ನಂತರ ಮಾತನಾಡಿದಕಂದಾಯ ಸಚಿವರು ಹಾಗೂ ಜಿಲ್ಲಾಉಸ್ತುವಾರಿ ಸಚಿವರಾದಕೃಷ್ಣ ಭೈರೇಗೌಡಅವರು ಮಾತನಾಡಿ ಹಾಸನಾಂಬ ಜಾತ್ರಾ ಮಹೋತ್ಸವದಿಂದ ನಾಡಿಗೆ ಶುಭವಾಗುತ್ತದೆ. ನಾಳೆ 6 ಗಂಟೆಯಿಂದ 7 ಗಂಟೆಯವರೆಗೂ ಸಾರ್ವಜನಿಕರಿಗೆದರ್ಶನವಿರುತ್ತದೆ. ಆದರೆ ನಾಳೆ ಸರದಿ ಸಾಲು ಆರುಗಂಟೆಗೆ ಮೊದಲೇಆರಂಭವಾಗುತ್ತದೆ. ಮತ್ತು ಸಂಜೆ 4 ಗಂಟೆಗೆ ಸರತಿ ಸಾಲಿಗೆ ನಿಲ್ಲುವುದನ್ನು ಬಂದ್ ಮಾಡಿ ಏಳು ಗಂಟೆಯವರೆಗೂದರ್ಶನ ಮಾಡಲು ಅವಕಾಶ ಕಲ್ಪಿಸಿಕೊಡಲಾಗುತ್ತದೆ. ಕಾರಣಅದರ ನಂತರದೇವಾಲಯದ ಶಾಸ್ತ್ರಗಳಿಗೆ ಅನುವು ಮಾಡಿಕೊಡಬೇಕಾಗಿಎಂದು ತಿಳಿಸಿದರು.

11ನೇ ತಾರೀಖು ಬೆ.06 ಗಂಟೆಗೆಆರಂಭವಾದರೆ 22ನೇ ತಾರೀಖು ಸಂಜೆ 07 ಗಂಟೆಯವರೆಗೆದರ್ಶನ ಮುಂದುವರೆಯುತ್ತದೆ. ಆದರೆ ನೈವೇದ್ಯ ಮತ್ತುಅಲಂಕಾರ, ಪೂಜಾಕೈಂಕರ್ಯಕ್ಕೆ ಆ



ಸಮಯವನ್ನು ಮೀಸಲಿಡ ಬೇಕಾಗಿರುವುದರಿಂದ, ಪ್ರತಿದಿನ ಮುಂಜಾನೆ 02 ರಿಂದ 05 ವರೆಗೆ ಮತ್ತು ಮಧ್ಯಾಹ್ನ 02 ರಿಂದ 03.30 ಗಂಟೆವರೆಗೆದೇವಾಲಂ ಯತೆರೆದಿದ್ದರೂ ಈ ಸಮಯದಲ್ಲಿದರ್ಶನಕ್ಕೆಅವಕಾಶ ವಿರುವುದಿಲ್ಲ ಎಂದರು.

ಹಾಸನ ಆದಿ ಚುಂಚನಗಿರಿ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಸಂಸದ ಶ್ರೇಯಸ್ ಪಟೇಲ್, ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಹಾಗೂ ಶಾಸಕರಾದ ಕೆ.ಎಂ.ಶಿವಲಿಂಗೇಗೌಡ, ಶಾಸಕರುಗಳಾದ ಹೆಚ್.ಪಿ.ಸ್ವರೂಪ್ ಪ್ರಕಾಶ್, ಸಿಮೆಂಟ್ ಮಂಜು, ಸಿ.ಎನ್.ಬಾಲಕೃಷ್ಣ, ಮಹಾನಗರ ಪಾಲಿಕೆಯ ಮಹಾ ಪೌರರಾದಗಿರೀಶ್‌ಚನ್ನವೀರಪ್ಪ, ಉಪ ಮೇಯರ್ ಹೇಮಲತಾ, ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ, ಜಿಲ್ಲಾಧಿಕಾರಿಕೆ. ಎಸ್ ಲತಾಕುಮಾರಿ, ಜಿಲ್ಲಾ ಪಂಚಾಯಿತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ. ಪೂರ್ಣಿಮಾಬಿ.ಆರ್, ಜಿಲ್ಲಾ ಪೊಲೀಸ್ ವರೀಷ್ಠಾಧಿಕಾರಿ ಮೊಹಮ್ಮದ್ ಸುಜೀತಾ, ಉಪ ವಿಭಾಗಾಧಿಕಾರಿ ಹಾಗೂ ಶ್ರೀ ಹಾಸನಾಂಬ ದೇವಾಲಯದ ಆಡಳಿತಾಧಿಕಾರಿ ಮಾರುತಿಜೆ.ಬಿ, ಉಪ ವಿಭಾಗಾಧಿಕಾರಿರಾಜೇಶ್ ಮತ್ತಿತರರು ಹಾಜರಿದ್ದರು.

# ಡಾ. ವೀರೇಂದ್ರ ಹೆಗ್ಗಡೆಯವರ ದೂರದೃಷ್ಟಿ ದೇಶಕ್ಕೆ ಮಾದರಿ

**ಚಿಕ್ಕಮಗಳೂರು:** ಸರ್ಕಾರಗಳು ಮಾಡಲಾಗದ ಸಾಧನೆಗಳನ್ನು ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಗಳ ಮೂಲಕ ಸಾಕಾರಗೊಳಿಸಲಾಗುತ್ತಿರುವ ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ದೂರದೃಷ್ಟಿತ್ವ ದೇಶಕ್ಕೆ ಮಾದರಿ ಎಂದು ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಹೇಳಿದ್ದಾರೆ.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ, ನವಜೀವನ ಸಮಿತಿ, ಚಿಕ್ಕಮಗಳೂರು ತಾಲ್ಲೂಕು ಮತ್ತು ಶೌರ್ಯ ವಿಪತ್ತು ನಿರ್ವಹಣಾ ಘಟಕ ಇವರ ಸಹಯೋಗದೊಂದಿಗೆ ಗಾಂಧಿ ಜಯಂತಿಯ ಸಂಭ್ರಮಾಚರಣೆ ಅಂಗವಾಗಿ ನಿನ್ನೆ ಗುರುವಾರ ಮಲ್ಲೇನಹಳ್ಳಿ ಗ್ರಾ.ಪಂ.ಯಲ್ಲಿ ಹಮ್ಮಿಕೊಂಡಿದ್ದ ಗಾಂಧಿ ಸ್ಮೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮೂಲಕ ಹಮ್ಮಿಕೊಳ್ಳುತ್ತಿರುವ ಮದ್ಯವರ್ಜನೆ ಶಿಬಿರಗಳ ಮೂಲಕ ಕತ್ತಲೆ ತುಂಬಿದ್ದ ನೂರಾರು ಕುಟುಂಬಗಳಲ್ಲಿ ಬೆಳಕು ಚೆಲ್ಲುವ ಮೂಲಕ ನೆಮ್ಮದಿಯ ಜೀವನ ನಡೆಸುವಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಸಹಕಾರಿಯಾಗಿದೆ ಎಂದು ತಿಳಿಸಿದರು.



ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಸದಾನಂದ ಬಂಗೇರ ಮಾತನಾಡಿ ಕ್ಷೇತ್ರದಿಂದ ನೀಡುವ ಅನುದಾನದ ಬಗ್ಗೆ ಮತ್ತು ಸಮಾಜಮುಖಿ ಯೋಜನೆಗಳ ಮೂಲಕ ತರಬೇತಿ ಕುರಿತು ಸವಿಸ್ತಾರವಾದ ಮಾಹಿತಿ ನೀಡಿದರು.

ಮಲ್ಲೇನಹಳ್ಳಿ ಸಮೀಪದ ಕೊಂಬುಗತ್ತಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಪ್ರಕಾಶ್ ಸಂಪನ್ಮೂಲ ವ್ಯಕ್ತಿಗಳಾಗಿ ಮಾತನಾಡಿ ಗ್ರಾಮೀಣ ಪ್ರದೇಶದ ಗ್ರಾಮಗಳು ರಾಮರಾಜ್ಯಗಳಾಗಬೇಕು ಎಂದು ಕನಸು ಕಂಡಿದ್ದ ಮಹಾತ್ಮ ಗಾಂಧೀಜಿಯವರ ಕನಸ್ಸನ್ನು ಡಾ. ವೀರೇಂದ್ರ ಹೆಗ್ಗಡೆಯವರು ತಮ್ಮ ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ನನಸು ಮಾಡಿದ್ದಾರೆ. ಹೆಗ್ಗಡೆಯವರ ಈ ಕಾರ್ಯ ಅತ್ಯಂತ ಶ್ಲಾಘನೀಯವಾಗಿದ್ದು, ಅವರ ಈ ಗ್ರಾಮಾಭಿವೃದ್ಧಿ ಯೋಜನೆ ದೇಶದೆಲ್ಲೆಡೆ ಮಾದರಿಯಾಗಿದೆ ಎಂದರು.

ಚಿಕ್ಕಮಗಳೂರು ತಾಲ್ಲೂಕಿನ ನವಜೀವನ ಸಮಿತಿ ಸದಸ್ಯರು ಕಾರ್ಯಕ್ರಮದಲ್ಲಿ ತಮ್ಮ ಅನಿಸಿಕೆ ವ್ಯಕ್ತಪಡಿಸಿ, ತಮ್ಮ ಹಕ್ಕೊತ್ತಾಯದ ಮನವಿ ಪತ್ರವನ್ನು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿಯವರಿಗೆ ಸಲ್ಲಿಸಿದರು. ಗ್ರಾ.ಪಂ. ಉಪಾಧ್ಯಕ್ಷೆ ಕಾವ್ಯ, ಪೊಲೀಸ್ ನಿರೀಕ್ಷಕ ಸಚಿನ್ ಕುಮಾರ್, ವಲಯ ಮೇಲ್ವಿಚಾರಕ ಚಂದ್ರಶೇಖರ್ ಸಮಾರಂಭದಲ್ಲಿ ಭಾಗವಹಿಸಿದ್ದರು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಚಿಕ್ಕಮಗಳೂರು ತಾಲ್ಲೂಕು ಯೋಜನಾಧಿಕಾರಿ ರೂಪ ಜಿ. ಜೈನ್ ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನೂ ಸ್ವಾಗತಿಸಿದರು. ಹೇಮಲತ ವಂದಿಸಿದರು. ಕೃಷಿ ಅಧಿಕಾರಿ ಡಿ. ಉಮೇಶ್ ಕಾರ್ಯಕ್ರಮ ನಿರೂಪಿಸಿದರು. ಜನಜಾಗೃತಿ ವೇದಿಕೆಯ ಸದಸ್ಯರಾದ ನಾಗೇಶ್‌ಕುಮಾರ್, ಧರ್ಮರಾಜ್, ಗ್ರಾ.ಪಂ. ಅಭಿವೃದ್ಧಿ ಅಧಿಕಾರಿ ಸುಶ್ಮಿತಗೌಡ, ಚಿಕ್ಕಮಗಳೂರು ತಾಲ್ಲೂಕು ಶೌರ್ಯ ವಿಪತ್ತು ಮಾಸ್ಟರ್ ಶಶಿಕುಮಾರ್, ಒಕ್ಕೂಟದ ಅಧ್ಯಕ್ಷರು ಮತ್ತು ಪದಾಧಿಕಾರಿಗಳು, ನವಜೀವನ ಸಮಿತಿ ಸದಸ್ಯರು, ಮೇಲ್ವಿಚಾರಕ ಶ್ರೇಣಿಯ ಸಿಬ್ಬಂದಿಗಳು, ಸೇವಾ ಪ್ರತಿನಿಧಿಗಳು ಹಾಗೂ ಸಂಘದ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು

# ವಿಸ್ತರಣೆ

**ದಾವಣಗೆರೆ :** ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಅವಧಿಯನ್ನು ಅಕ್ಟೋಬರ್ 14 ರವರೆಗೆ ವಿಸ್ತರಿಸಲಾಗಿದೆ ಎಂದು ಇಲಾಖೆಯ ಅಧಿಕಾರಿ ತಿಳಿಸಿದ್ದಾರೆ.

# ವಾಹನ ವಿಲೇವಾರಿ

**ಶಿವಮೊಗ್ಗ:** ಶಿವಮೊಗ್ಗ ತುಂಗಾನಗರ ಪೊಲೀಸ್ ಠಾಣೆಯಲ್ಲಿ ವಾರಸ್ಸುದಾರರು ಪತ್ತೆಯಾಗದ 45 ವಿವಿಧ ವಾಹನಗಳನ್ನು ಯಥಾ ಸ್ಥಿತಿಯಲ್ಲಿ ನ್ಯಾಯಾಲಯದ ಆದೇಶದನ್ವಯ ಅ.13 ರಂದು ಬೆಳಿಗ್ಗೆ 09 ಗಂಟೆಗೆ ತುಂಗಾನಗರ ಪೊಲೀಸ್ ಠಾಣಾ ಆವರಣದಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದು.

# ನಟಿ ರಮ್ಯಾಗೆ ಅಶ್ಲೀಲ ಮೆಸೇಜ್ ಕಳಿಸಿದವರ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದ ಪೊಲೀಸರು

**ಬೆಂಗಳೂರು,ಅ.9**–ಮಾಜಿ ಸಂಸದೆ ಹಾಗೂ ಸ್ಯಾಂಡಲ್ ವುಡ್ ನಟಿ ಮೋಹಕ ತಾರೆ ರಮ್ಯಾಗೆ ಸೋಶಿಯಲ್ ಮೀಡಿಯಾದಲ್ಲಿ ಅಶ್ಲೀಲ ಸಂದೇಶ ಕಳುಹಿಸಿದ ಕಿಡಿಗೇಡಿ ವಿರುದ್ಧ ಸಿಸಿಬಿ ಸೈಬರ್ ಪೊಲೀಸರು ಚಾರ್ಜ್ ಶೀಟ್ ಸಲ್ಲಿಕೆ ಮಾಡಿದ್ದಾರೆ.

11 ಆರೋಪಿಗಳ ಮೇಲೆ 380 ಪುಟಗಳ ಸುದೀರ್ಘ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲಾಗಿದೆ. ಆರೋಪಿಗಳ ಮೊಬೈಲ್, ಸೋಷಿಯಲ್ ಮೀಡಿಯಾದಲ್ಲಿ ಕಮೆಂಟ್ ಹಾಕಿದ ಸ್ಕ್ರೀನ್ ಶಾಟ್, ವಿಡಿಯೋ ಶೇರ್ ಆಗಿರುವ ಲಿಂಕ್‌ಗಳು, ದೂರುದಾರೆ ರಮ್ಯಾ ಸ್ಟೇಟ್‌ಮೆಂಟ್, ವಿಧಿ ವಿಜ್ಞಾನ ಪ್ರಯೋಗಾಲಯದ ವರದಿ, ಆರೋಪಿಗಳ ಸ್ವ ಇಚ್ಛಾ ಹೇಳಿಕೆ ಆಧಾರದಲ್ಲಿ ಚಾರ್ಜ್ ಶೀಟ್ ಸಲ್ಲಿಕೆ ಮಾಡಲಾಗಿದೆ.

ದರ್ಶನ್ ಅವರ ಜಾಮೀನು ರದ್ದುಪಡಿಸುವಂತೆ ಕರ್ನಾಟಕ ಪೊಲೀಸರು ಸುಪ್ರೀಂ ಕೋರ್ಟ್‌ಗೆ ತೆರಳಿದ್ದ ಸಂದರ್ಭದಲ್ಲಿ ನಟಿ ರಮ್ಯಾ ಮಾಡಿದ್ದ ಟ್ವೀಟ್ ವ್ಯಗ್ರಗೊಂಡಿದ್ದ ದರ್ಶನ್ ಅಭಿಮಾನಿಗಳು, ರಮ್ಯಾ ಕುರಿತು ಕೆಟ್ಟದಾಗಿ ಹಾಗೂ ಅವಹೇಳನಕಾರಿಯಾಗಿ ಕಮೆಂಟ್ ಮಾಡಿದ್ದರಲ್ಲದೆ, ಸೋಶಿಯಲ್ ಮೀಡಿಯಾದಲ್ಲಿ ರಮ್ಯಾ ವಿರುದ್ಧ ಅಭಿಯಾನವನ್ನೇ ಕೈಗೊಂಡಿದ್ದರು. ಇದರ ವಿರುದ್ಧ ರಮ್ಯಾ ಪೊಲೀಸರ ಮೊರೆ ಹೋಗಿದ್ದರು. ಹಲವಾರು ಮಂದಿಯನ್ನು ಬಂಧಿಸಲಾಗಿತ್ತು.


60 ದಿನಗಳ ಗಡುವು ಮುಗಿಯುವ ಹಿನ್ನೆಲೆಯಲ್ಲಿ ದೋಷಾರೋಪಣ ಪಟ್ಟಿ ಸಲ್ಲಿಕೆ ಮಾಡಲಾಗಿದೆ. ಅಶ್ಲೀಲ ಕಮೆಂಟ್ ಹಾಕಿದ ಇನ್ನೂ 6 ಆರೋಪಿಗಳು ಪೊಲೀಸರಿಗೆ ಸಿಕ್ಕಿಲ್ಲ. ಆ ಆರೋಪಿಗಳು ಸಿಕ್ಕ ಬಳಿಕ ಹೆಚ್ಚುವರಿ ಚಾರ್ಜ್ ಶೀಟ್ ಸಲ್ಲಿಸಲಿದ್ದಾರೆ. ಅಶ್ಲೀಲ ಕಮೆಂಟ್ ಹಾಕಿದ ಇನ್ನೂ ನಾಲ್ವರು ಆರೋಪಿಗಳಿಗೆ ಬಿಡುಗಡೆ ಭಾಗ್ಯ ಸಿಕ್ಕಿಲ್ಲ. ಚಾರ್ಜ್ ಶೀಟ್ ಬೆನ್ನಲ್ಲೇ ಶೀಘ್ರದಲ್ಲೇ ಟ್ರಯಲ್ ಆರಂಭವಾಗಲಿದೆ

# ಕರ್ನಾಟಕ ಸರ್ಕಾರದಲ್ಲಿ ಆಲ್ ಈಸ್ ನಾಟ್ ವೆಲ್: ಬಿಹಾರ ಚುನಾವಣೆ ಬಳಿಕ ತಾರ್ಕಿಕ ಅಂತ್ಯ : ವಿಜಯೇಂದ್ರ ಭವಿಷ್ಯ

**ಬೆಂಗಳೂರು:** ಕರ್ನಾಟಕ ಸರ್ಕಾರದಲ್ಲಿ ಆಲ್ ಈಸ್ ನಾಟ್ ವೆಲ್. ಸದ್ಯ ಸಮಸ್ಯೆ ಶುರುವಾಗಿದೆ, ಬಿಹಾರ ಚುನಾವಣೆ ಬಳಿಕ ತಾರ್ಕಿಕ ಅಂತ್ಯ ಕಾಣಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಭವಿಷ್ಯ ನುಡಿದಿದ್ದಾರೆ.

ಬೆಂಗಳೂರಿನಲ್ಲಿ ಶುಕ್ರವಾರ ಮಾತನಾಡಿದ ಅವರು, ಆಡಳಿತ ಪಕ್ಷದ ಸಚಿವರು, ಶಾಸಕರ ಪ್ರತಿಕ್ರಿಯೆಗಳನ್ನು ಗಮನಿಸಿದರೆ, ಕಾಂಗ್ರೆಸ್ ಪಕ್ಷದಲ್ಲಿ ?ಆಲ್ ಈಸ್ ನಾಟ್ ವೆಲ್? ಎಂಬುದು ಸ್ಪಷ್ಟವಾಗುತ್ತದೆ ಎಂದು ಇನ್ನೊಂದು ಪ್ರಶ್ನೆಗೆ ಉತ್ತರ ಕೊಟ್ಟರು. ರಾಜ್ಯದಲ್ಲಿ ರಾಜಕೀಯ ವಿದ್ಯಮಾನಗಳು ಪ್ರಾರಂಭ ಆಗಿವೆ. ಬಿಹಾರ ಚುನಾವಣೆ ಬಳಿಕ ಇದು ತಾರ್ಕಿಕ ಅಂತ್ಯಕ್ಕೆ ಹೋಗಲಿದೆ ಎಂದು ಆಡಳಿತ ಪಕ್ಷದವರೇ ಮಾತನಾಡುತ್ತಿದ್ದಾರೆ ಎಂದು ತಿಳಿಸಿದರು.

ರಾಜ್ಯ ಸರಕಾರವು ಪೂರ್ವತಯಾರಿ ಇಲ್ಲದೇ ಆತುರಾತುರವಾಗಿ ಜಾತಿ ಗಣತಿ ವಿಷಯದಲ್ಲಿ ತೀರ್ಮಾನ ಮಾಡುತ್ತಿದೆ ಎಂದು ಬಿ.ವೈ ವಿಜಯೇಂದ್ರ ಅವರು ಟೀಕಿಸಿದ್ದಾರೆ. ಜಾತಿ ಗಣತಿ ವಿಚಾರದಲ್ಲಿ ಗಣತಿದಾರ ಶಿಕ್ಷಕವೃಂದಕ್ಕೂ ಸಮಸ್ಯೆ ಆಗುತ್ತಿದೆ. ರಜೆ ದಿನಗಳನ್ನೂ ವಿಸ್ತರಿಸಿದ್ದರಿಂದ ವಿಶೇಷವಾಗಿ ಗ್ರಾಮೀಣ ಭಾಗದ ಮಕ್ಕಳಿಗೆ ಸಮಸ್ಯೆ ಆಗಲಿದೆ. ಸರಕಾರಿ ಶಾಲೆಯಲ್ಲಿ ಓದುವ ಗ್ರಾಮೀಣ ಭಾಗದ ಮಕ್ಕಳಿಗೆ ಒಂದೊಂದು ದಿನವೂ ಅಷ್ಟೇ ಮಹತ್ವದ್ದು ಎಂದು ನುಡಿದರು. ಶಾಲೆಗೆ ರಜೆ ಘೋಷಿಸಿ

ಶಾಲಾ ಮಕ್ಕಳಿಗೂ ತೊಂದರೆ ನೀಡುತ್ತಿದ್ದಾ–ರೆ ಎಂದು ಆಕ್ಷೇಪಿಸಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ಮೊದಲ ಸಭೆ ಕರೆದಿದ್ದು, ಶಾಸಕರಿಗೆ ಸಭೆಯ ಕಾರ್ಯಸೂಚಿಯನ್ನೇ ನೀಡಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ಜಿಬಿಎ ಅಜೆಂಡವನ್ನೂ ಕೊಡದೆ ಗೌಪ್ಯವಾಗಿ ಸಭೆ ಮಾಡುತ್ತಿದ್ದಾರೆ. ಡಿಸೆಂಬರ್‌ನಲ್ಲಿ ಚುನಾವಣೆ ನಡೆಸುವುದಾಗಿ ಹೇಳುತ್ತಾರೆ. ಎಲ್ಲಿದೆ ತಯಾರಿ? ಎಂದು ಪ್ರಶ್ನಿಸಿದರು. ಎಷ್ಟು ಅಧಿಕಾರಿಗಳು ಬೇಕು? ಮೂಲಭೂತ ಸೌಕರ್ಯಗಳು, ಯಾವುದೂ ಇಲ್ಲದೇ ರಾಜಕೀಯ ಚಟಕ್ಕೆ ಘೋಷಣೆ ಮಾಡುತ್ತಾರೆ. ಯಾವುದೇ ಯೋಜನೆ ಇಲ್ಲದೇ ಹೊರಟಿದ್ದಾರೆ ಎಂದರು.

ಬೆಂಗಳೂರಿನ ಜನತೆ ಈ ಸರಕಾರಕ್ಕೆ ಛೀ ಥೂ ಎಂದು ಉಗುಳುತ್ತಿದ್ದಾರೆ. ಡಿ.ಕೆ.ಶಿವಕುಮಾರ್ ಅವರು ಪ್ರಧಾನಮಂತ್ರಿಯವರ ಮನೆ ಮುಂದೆ ಗುಂಡಿ ಇದೆ; ಅಲ್ಲಿ ಗುಂಡಿ ಇದೆ ಎಂದು ಲೆಕ್ಕ ಹಾಕಲು ಹೊರಟಿದ್ದಾರೆ. ಬೆಂಗಳೂರಿನಲ್ಲಿ ಗುಂಡಿಗಳ ಮಧ್ಯೆ ರಸ್ತೆ ಹುಡುಕುವ ದಾರುಣ ಪರಿಸ್ಥಿತಿ ಬಂದಿದೆ ಎಂದು ವಿಜಯೇಂದ್ರ ಅವರು ಗಮನ ಸೆಳೆದರು.

ದೊಡ್ಡ ಮನುಷ್ಯರು ಪ್ರಧಾನಿ, ಲಂಡನ್ ಕುರಿತು ಮಾತನಾಡುತ್ತಾರೆ ಎಂದರಲ್ಲದೇ ಲಂಡನ್ ಬಗ್ಗೆ ಮಾತನಾಡಲು ನೀವು ಬೇಕೇ ಎಂದು ಪ್ರಶ್ನಿಸಿದರು. ಬೆಂಗಳೂರಿನ ಮಹಾಜನತೆ ರಾಜ್ಯ ಸರಕಾರದಿಂದ ಉತ್ತರ ಕೇಳುತ್ತಿದ್ದಾರೆ. ತುರ್ತಾಗಿ ಗುಂಡಿ ಮುಚ್ಚುವ ಕೆಲಸ ಆಗಬೇಕೆಂದು ಜನರು ಅಪೇಕ್ಷೆ ಪಡುತ್ತಿದ್ದಾರೆ ಎಂದು ತಿಳಿಸಿದರು.

ನಾನು, ವಿಪಕ್ಷ ನಾಯಕರು, ಬಿಜೆಪಿ ನಿಯೋಗ ಕಲ್ಯಾಣ ಕರ್ನಾಟಕಕ್ಕೆ ಹೋಗಲಿಲ್ಲವೆಂದಾದರೆ, ಮುಖ್ಯಮಂತ್ರಿಗಳು ಇಲ್ಲೇ ಎ.ಸಿ. ಕೊಠಡಿಯಲ್ಲಿ ಕುಳಿತು ವಿಡಿಯೋ ಕಾನ್ಫರೆನ್ಸ್‌ನಲ್ಲಿ ತೀರ್ಮಾನ ಮಾಡುತ್ತಿದ್ದರು. ನಾವು ಬೀದರ್, ಗುಲ್ಬರ್ಗ, ರಾಯಚೂರು, ಯಾದಗಿರಿ ಪ್ರವಾಸ ಮಾಡಿದ್ದೇವೆ. ಅಶೋಕ್ ಅವರು, ಬೆಳಗಾವಿ, ಬಾಗಲಕೋಟೆ ಕಡೆ ಹೋದರು ಎಂದು ಗಮನ ಸೆಳೆದರು.

ವಿಪಕ್ಷದವರು ಎಲ್ಲವನ್ನೂ ಟೀಕಿಸುತ್ತಾರೆ ಎಂದು ಭಾವಿಸುವ ಅಗತ್ಯವಿಲ್ಲ; ರೈತರ ಸಂಕಷ್ಟಕ್ಕೆ ತಕ್ಷಣ ಸ್ಪಂದಿಸುವುದು ರಾಜ್ಯ ಸರಕಾರದ ಆದ್ಯ ಕರ್ತವ್ಯ. 10 ದಿನಗಳಲ್ಲಿ ಪರಿಹಾರ ಮೊತ್ತ ಕೊಡುವುದಾಗಿ ಸಚಿವ ಕೃಷ್ಣಬೈರೇಗೌಡರು ಹೇಳಿದ್ದಾರೆ. ರೈತರು ಇನ್ನೆಷ್ಟು ದಿನ ಕಾಯಬೇಕು ಎಂದು ಪ್ರಶ್ನಿಸಿದರು.

ಮಂಡ್ಯದಲ್ಲೂ ಮೈ ಶುಗರ್ ವಿಚಾರದಲ್ಲಿ ಗೊಂದಲ ಸೃಷ್ಟಿಯಾಗಿದೆ ಎಂದ ಅವರು, ಜಿಬಿಎ ಸಭೆಗೆ ಗೈರಾಗುವ ತೀರ್ಮಾನ ತೆಗೆದುಕೊಂಡಂತೆ ಕಾಣುತ್ತದೆ ಎಂದು ಪ್ರಶ್ನೆಗೆ ಉತ್ತರ ನೀಡಿದರು. ಮೊದಲ ಸಭೆ ಅಜೆಂಡ ಗೊತ್ತಿಲ್ಲದೇ ಹೋಗಿ ಮಾಡುವುದಾದರೂ ಏನು ಎಂದು ಮರುಪ್ರಶ್ನೆ ಹಾಕಿದರು. ಜಿಬಿಎ ಬಗ್ಗೆ ಆಡಳಿತ ಪಕ್ಷದಲ್ಲೂ ವಿರೋಧಗಳಿವೆ. ಎಲ್ಲ ಗೊಂದಲದ ನಡುವೆ ತೇಪೆ ಹಚ್ಚುವ ಕೆಲಸ ಮಾಡಲು ಇವರು ಹೊರಟಿದ್ದಾರೆ ಎಂದರು. ರಿಯಲ್ ಎಸ್ಟೇಟ್ ಮಾಫಿಯ ಜೊತೆ ಸರಕಾರ ಸೇರಿ ಆಡಳಿತ ನಡೆಸುವ ಪರಿಸ್ಥಿತಿ ಬಂದಿದೆ ಎಂದು ಟೀಕಿಸಿದರು.

# ಕಾಂಗ್ರೆಸ್ ಅಧಿಕಾರ, ಸಿಎಂ ಸಿದ್ದರಾಮಯ್ಯ ಕುರಿತು ಸ್ಫೋಟಕ ಭವಿಷ್ಯ ನುಡಿದ ಬ್ರಹ್ಮಾಂಡ ಗುರೂಜಿ!

**ಹಾಸನ:** ಹಾಸನಾಂಬೆ ದರ್ಶನ ಈ ವರ್ಷವೇ ಕೊನೆ ಎಂದು




ಹೇಳುವ ಮೂಲಕ ಸ್ಫೋಟಕ ಹೇಳಿಕೆ ಕೊಟ್ಟ ಬ್ರಹ್ಮಾಂಡ ಗುರೂಜಿ ಬಳಿಕ ರಾಜ್ಯದ ಆಡಳಿತ, ಕಾಂಗ್ರೆಸ್ ಅಧಿಕಾರ, ಸಿಎಂ ಸಿದ್ದರಾಮಯ್ಯ ಅವರ ಅಧಿಕಾರದ ಕುರಿತೂ ಭವಿಷ್ಯ ನುಡಿದಿದ್ದಾರೆ.

ಈಗಿರುವ ಮುಖ್ಯ ಮಂತ್ರಿ ಸಿದ್ದ ರಾಮಯ್ಯ ಅವರ ಆರೋಗ್ಯ ಕ್ಷೀಣಿಸುವ ಸಾಧ್ಯತೆ ಇದೆ. ಮುಂದಿನ ಮುಖ್ಯಮಂತ್ರಿಗಳು ಯಾರಾಗುತ್ತಾ–ರೆ, ಎಂಬ ವಿಚಾರವಾಗಿ ಮಾತನಾಡಿ, ಇಬ್ಬರಿಗೆ ಅವಕಾಶ ಇದೆ. ಅದರಲ್ಲಿ ಪ್ರಮುಖವಾಗಿ ಬಹಳ ಜನ ಎಳೆದಾಡುವ ಸಾಧ್ಯತೆಯೂ ಇದೆ ಎಂದಿದ್ದಾರೆ.

ಮುಂದಿನ ಮುಖ್ಯಮಂತ್ರಿಗಳು ಈ ವರ್ಷ ನವೆಂಬರ್, ಸಂಕ್ರಾಂತಿಯೊಳಗೆ ಆಗದೇ ಹೋದರೆ, ಆ ಯೋಗ ಹತ್ತು ವರ್ಷದ ಬಳಿಕ ಬರುವ ಸಾಧ್ಯತೆ ಇದೆ ಎಂದೂ ಹೇಳಲಾಗಿದೆ.

ಆದರೆ 10 ವರ್ಷದ ನಂತರ ಯೋಗ ಇದ್ದರೂ, ಆಗ ಕಾಂಗ್ರೆಸ್‌ಗೆ ಅಧಿಕಾರ ಬರುತ್ತೋ ಇಲ್ಲವೋ ಗೊತ್ತಿಲ್ಲ. ಬೆರಕೆ ಸಂಸಾರ ಯೋಗ ಎಂದು ಸಮ್ಮಿಶ್ರ ಸರ್ಕಾರದ ಸಾಧ್ಯತೆ ಬಗ್ಗೆ ಭವಿಷ್ಯ ನುಡಿದಿದ್ದಾರ.? ಹೀಗಾಗಿ ಕಾಂಗ್ರೆಸ್ ಅವಧಿ ಇದೇ ಕೊನೆ. ಇದಾದ್ಮೇಲೆ ಕಾಂಗ್ರೆಸ್ ಬರುವ ಅವಕಾಶ ಇರಲ್ಲ ಎಂದು ಬ್ರಹ್ಮಾಂಡ ಸ್ಫೋಟಕ ಭವಿಷ್ಯ ನುಡಿದಿದ್ದಾರೆ.

ಬಹಳಷ್ಟು ಜನರಿಗೆ ಜಲಗಂಡಾಂತರ, ಆರೋಗ್ಯ ರಕ್ಷಣೆಯನ್ನು ನೋಡಿಕೊಳ್ಳಬೇಕು. ಕೃಷ್ಣಾ, ಗೋದಾವರಿ, ಘಟಪ್ರಭಾ, ಮಲಪ್ರಭಾ ಉಕ್ಕಿ ಹರಿತಾಳೆ. ದಕ್ಷಿಣ ಭಾಗಕ್ಕೂ ಉತ್ತರ ಭಾಗವೂ ಬೇರ್ಪಡಿಸುವ ರೀತಿ ನೀರು ಉಕ್ಕಿಹರಿಯಲಿದೆ. ಸೇತುವೆ ಆಗಬೇಕಾದ ರೀತಿ, ಆಳವನ್ನು ಹುಟ್ಟಿಸುತ್ತದೆ. ಕನ್ಯಾಕುಮಾರಿ ರಕ್ಷೆಯಲ್ಲಿದೆ, ಆದರೆ ಕಾಶ್ಮೀರ ಇಲ್ಲವಾಗುತ್ತದೆ. ತಲೆ ಇಲ್ಲದೆ ಇರುವ ದೇಶವಾಗುತ್ತದೆ .

ಎಂದು ಆ ಕಾಲದಲ್ಲೇ ಬರೆದಿದೆ ಎಂದು ಬ್ರಹ್ಮಾಂಡ ಗುರೂಜಿ ಹಾಸನದಲ್ಲಿ ಹೇಳಿದ್ದಾರೆ.

## ಜಾತಿಗಣತಿ ಕಾರ್ಯಕ್ಕೆ ಅಪಸ್ವರ ಸಲ್ಲದು

## ಮಹದೇವಪ್ಪ ಮನೆ ಮುತ್ತಿಗೆ ಸಲ್ಲದು। ಹಟ್ಟಿ, ಕಾಲನಿಗಳಲ್ಲಿ ಜಾಗೃತಿ ತುರ್ತು ಅಗತ್ಯ

# ಮಾದಿಗರ ಸಂಖ್ಯೆ ಕುಗ್ಗಿಸಲು ಯತ್ನ: ಹೆಚ್.ಆಂಜನೇಯ



**ಚಿತ್ರದುರ್ಗ:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಒಳ್ಳೆಯ ಬದ್ಧತೆಯಿಂದ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸಮೀಕ್ಷೆ ಕಾರ್ಯ ಕೈಗೊಂಡಿದ್ದು, ರಾಜ್ಯದ ಪ್ರಗತಿಗೆ ದಾರಿ ಆಗಲಿದೆ. ಆದ್ದರಿಂದ ಯಾರೊಬ್ಬರೂ ಅಪಸ್ವರ ಮಾಡದೆ ಎಲ್ಲ ಜಾತಿ ಜನರು ಪಾಲ್ಗೊಳ್ಳಬೇಕೆಂದು ಮಾಜಿ ಸಚಿವ ಎಚ್. ಆಂಜನೇಯ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಯಾವುದೇ ರಾಜ್ಯ ಅಭಿವೃದ್ಧಿಗೊಳ್ಳಬೇಕಾದರೆ, ಅಲ್ಲಿನ ಜನರ ಸ್ಥಿತಿಗತಿ ಅರಿತುಕೊಳ್ಳಬೇಕು. ಯಾವ ಸಮುದಾಯ ಎಷ್ಟು ಸಂಖ್ಯೆಯಲ್ಲಿದೆ, ಅವರ ಹಿಂದುಳಿಯುವಿಕೆ ಸೇರಿ ವಿವಿಧ ಅಂಶಗಳ ಮಾಹಿತಿ ಅಗತ್ಯ. ಆಗ ಮಾತ್ರ ಯೋಜನೆ ರೂಪಿಸಿ ಅನುಷ್ಠಾನಗೊಳಿಸಲು ಸಾಧ್ಯ ಎಂದರು.

ಯಾವ ಸಮುದಾಯದ ಬಳಿ ಎಷ್ಟು ಸಂಪತ್ತು ಇದೆ, ಇಲ್ಲದ ವರ್ಗ ಯಾವುದು, ಶಿಕ್ಷಣ ಪ್ರಗತಿ ಹೀಗೆ ವಿವಿಧ ರೀತಿ ಮಾಹಿತಿ ರಾಜ್ಯ ಸರ್ಕಾರದ ಬಳಿಯಿದ್ದಾಗ ಮಾತ್ರ ಹಿಂದುಳಿದ ಜಾತಿ ಜನರನ್ನು ಮುಖ್ಯವಾಹಿನಿಗೆ ತರಲು ಸಾಧ್ಯವಾಗಲಿದೆ ಎಂದು ತಿಳಿಸಿದರು.

ಈ ನಿಟ್ಟಿನಲ್ಲಿ ನಡೆಯುತ್ತಿರುವ ಜಾತಿಗಣತಿ ಸಮೀಕ್ಷೆ ಕಾರ್ಯದಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು. ಅ.18ರ ವರೆಗೆ ಸಮೀಕ್ಷೆ ವಿಸ್ತರಣೆ ಮಾಡಿರುವುದು ಉತ್ತಮ ನಡೆ ಆಗಿದೆ. ರಾಜ್ಯದಲ್ಲಿ ಮಾದಿಗರ ಸಂಖ್ಯೆ ಕುಗ್ಗಿಸುವ ಕುತಂತ್ರ ನಡೆಯುತ್ತಿದೆ. ಇಂತಹ ವೇಳೆ ನಾವು ಹೆಚ್ಚು ಜಾಗೃತಿ ವಹಿಸಬೇಕು. ಹೋರಾಟಗಾರರು ಎಚ್.ಸಿ.ಮಹಾದೇವಪ್ಪ ಸೇರಿ ವಿವಿಧ ಮಂತ್ರಿಗಳ ಮನೆಗಳಿಗೆ ಮುತ್ತಿಗೆ ನಡೆ ಕೈಬಿಟ್ಟು, ಜಾತಿಗಣತಿ ಜಾಗೃತಿ ಮೂಡಿಸುವ ಕೆಲಸ ಮಾಡಬೇಕೆಂದರು.

ಈ ಹಿಂದೆ ಕಾಂತರಾಜ್ ಆಯೋಗ ವೈಜ್ಞಾನಿಕ ವರದಿ ನೀಡಿತ್ತು. ಆದರೆ, 10 ವರ್ಷ ಹಳೆಯದ್ದಾಗಿದೆಯೆಂಬ ಆರೋಪ ಕೇಳಿಬಂದಿದ್ದರಿಂದ ಮತ್ತೊಮ್ಮೆ ಸಮೀಕ್ಷೆ ಕಾರ್ಯವನ್ನು ಸರ್ಕಾರ ನಡೆಸುತ್ತಿದೆ. ಈ ಕಾರ್ಯಕ್ಕೆ ಆರಂಭದಲ್ಲಿ ಕೆಲವರು

ವಿರೋಧ ವ್ಯಕ್ತಪಡಿಸಿದ್ದರು. ಆದರೆ, ಈಗ ವಾಸ್ತವತೆ ಅರಿತು ಎಲ್ಲರೂ ಪಾಲ್ಗೊಳ್ಳುವುದು ಸ್ವಾಗತಾರ್ಹ ನಡೆ ಎಂದು ತಿಳಿಸಿದರು.

ಮಾದಿಗರು ಸೇರಿ ಎಲ್ಲ ಸಮುದಾಯಗಳು ಮನೆ, ಮಕ್ಕಳಿಗೆ ಶಿಕ್ಷಣ, ಗಂಗಕಲ್ಯಾಣ ಯೋಜನೆಯಡಿ ಕೊಳವೆಬಾವಿ, ಸಾಲ ಸೌಲಭ್ಯ ಹೀಗೆ ಸವಲತ್ತು ಪಡೆಯಲು ಜಾತಿಗಣತಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳುವುದು ಅಗತ್ಯ ಎಂದರು.

# ‘ಕೋಲ್ಡ್ರಿಫ್ ವಿಷಕಾರಿ’

## 17 ಮಕ್ಕಳ ಸಾವಿನ ಬಳಿಕ ಕೊನೆಗೂ ಎಚ್ಚೆತ್ತ ಕೇಂದ್ರ ಸರ್ಕಾರ

# ಮೂರು ಕೆಮ್ಮಿನ ಸಿರಪ್‌ಗಳು ನಿಷೇಧ

**ಚೆನ್ನೈ:** ಕೆಮ್ಮಿಗಾಗಿ ವೈದ್ಯರು ನೀಡಿ–ದ್ದ ಸಿರಪ್ ಗಳಿಂದ ಮಕ್ಕಳ ಕಿಡ್ನಿ ಫೇಲ್ ಆಗಿ ಬರೊಬ್ಬರಿ 17 ಮಕ್ಕಳು ಸಾವನ್ನಪ್ಪಿದ ಬೆನ್ನಲ್ಲೇ ಇದೀಗ ಕೇಂದ್ರ ಸರ್ಕಾರ 3 ಪ್ರಮುಖ ಕೆಮ್ಮಿನ ಸಿರಪ್ ಗಳನ್ನು ನಿಷೇಧಿಸಿದೆ.

ಹೌದು.. ಭಾರತದ ಆರೋಗ್ಯ ಅಧಿಕಾರಿಗಳು ಮೂರು ಕೆಮ್ಮಿನ ಸಿರಪ್‌ಗಳನ್ನು ಅಂದರೆ ಕೋಲ್ಡ್ರಿಫ್ ರೆಸ್ಪಿಫ್ರೆಶ್ ಟಿಆರ್ ಮತ್ತು ರೀಲೈಫ್ ಸಿರಪ್ ಗಳನ್ನು ನಿಷೇಧಿಸಿದ್ದಾರೆ.

ಕಳೆದ ಒಂದು ತಿಂಗಳಿನಲ್ಲಿ 17 ಮಕ್ಕಳು ಸಾವನ್ನಪ್ಪಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಇವೆಲ್ಲವೂ ಕೋಲ್ಡ್ರಿಫ್ ಸಿರಪ್ ಬಳಕೆಗೆ ಸಂಬಂಧಿಸಿವೆ ಎಂದು ಔಷಧ ನಿಯಂತ್ರಕ ಅಧಿಕಾರಿಗಳನ್ನು ಉಲ್ಲೇಖಿಸಿ ಗುರುವಾರ ವರದಿಗಳು ತಿಳಿಸಿವೆ.



**ಕೋಲ್ಡ್ರಿಫ್ ವಿಷಕಾರಿ:** ಇದೇ ವೇಳೆ ಸರ್ಕಾರಿ ಪ್ರಯೋಗಾಲಯಗಳ ಪರೀಕ್ಷೆಗಳು ಕೋಲ್ಡ್ರಿಫ್ ಸಿರಪ್ ಅಪಾಯಕಾರಿ ಎಂದು ಪತ್ತೆಯಾಗಿದ್ದು, ಇದರಲ್ಲಿ ಹೆಚ್ಚಿನ ಮಟ್ಟದ ಡೈಥಿಲೀನ್ ಗ್ಲೈಕಾಲ್ (DEG) ಅನ್ನು ಹೊಂದಿದೆ ಎಂದು ತೋರಿಸಿದೆ.

ಇದು ಆಂಟಿಫ್ರೀಜ್‌ನಂತಹ ಕೈಗಾರಿಕಾ ಉತ್ಪನ್ನಗಳಲ್ಲಿ ಬಳಸುವ ವಿಷಕಾರಿ ರಾಸಾಯನಿಕವಾಗಿದೆ. ಸಣ್ಣ ಪ್ರಮಾಣದ ಆಇಲು ಸಹ ಮೂತ್ರಪಿಂಡಗಳು ಮತ್ತು ಯಕೃತ್ತನ್ನು ಹಾನಿಗೊಳಿಸುತ್ತದೆ ಮತ್ತು ತೀವ್ರತರವಾದ ಪ್ರಕರಣಗಳಲ್ಲಿ ಸಾವಿಗೆ ಕಾರಣವಾಗಬಹುದು ಎಂದು ವರದಿ ಉಲ್ಲೇಖಿಸಿದೆ.

# ನಿಷೇಧಿತ ಪಟಾಕಿ ದಾಸ್ತಾನು ಇದ್ದಲ್ಲಿ ಗೋದಾಮು ಮುಟ್ಟುಗೋಲು : ಜಿಲ್ಲಾಧಿಕಾರಿ

**ಚಿಕ್ಕಮಗಳೂರು, ಅ.10:** ದೀಪಾವಳಿ ಹಬ್ಬದ ಆಚರಣೆ ಸಂದರ್ಭದಲ್ಲಿ ಪಟಾಕಿಗಳನ್ನು ಬಳಸುವ ವಿಚಾರಕ್ಕೆ ಸಂಬಂಧಿಸಿದಂತೆ ಸರ್ವೋಚ್ಚ ನ್ಯಾಯಾಲಯವು ನಿರ್ದೇಶಿಸಿರುವ ಅಂಶಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಜಿಲ್ಲಾಧಿಕಾರಿಗಳು ಸೂಚನೆ ನೀಡಿದ್ದಾರೆ.


ಎಲ್ಲ ಪಟಾಕಿ ಮಾರಾಟಗಾರರ ಗೋದಾಮುಗಳಲ್ಲಿ ಯಾವುದೇ ರೀತಿಯ ನಿಷೇಧಿತ ಪಟಾಕಿಗಳ ಉತ್ಪಾದನೆ, ಸಂಗ್ರಹ ಮತ್ತು ಮಾರಾಟವನ್ನು ಮಾಡುತ್ತಿದ್ದಲ್ಲಿ, ಈ ಕೂಡಲೇ ಅದನ್ನು ಪರಿಶೀಲಿಸಿ, ಅಲ್ಲಿ ಹಸಿರು ಪಟಾಕಿಯಲ್ಲದೇ ಇನ್ನಾವುದಾದರೂ ನಿಷೇಧಿತ ಪಟಾಕಿಗಳನ್ನು ದಾಸ್ತಾನು ಮಾಡಿದ್ದಲ್ಲಿ ಇಡೀ ಗೋದಾಮನ್ನು ಮುಟ್ಟುಗೋಲು ಹಾಕಿಕೊಳ್ಳುವುದು ಹಾಗೂ ಉಲ್ಲಂಘಿಸಿದವರ ವಿರುದ್ಧ ಕಾನೂನು ಪ್ರಕಾರ ತೀವ್ರವಾದ ಕ್ರಮ ಕೈಗೊಳ್ಳಬೇಕೆಂದು ತಿಳಿಸಲಾಗಿದೆ. ಈ ಬಾರಿಯ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಹಾಗೂ ಇನ್ನಾವುದೇ ಹಬ್ಬದ ಆಚರಣೆಯ ಸಂದರ್ಭದಲ್ಲಿ ಹಸಿರು ಪಟಾಕಿ ಹೊರತುಪಡಿಸಿ, ನಿಷೇಧಿತ ಪಟಾಕಿಗಳ ಉತ್ಪಾದನೆ, ಸಂಗ್ರಹ ಮತ್ತು ಮಾರಾಟ ಹಾಗೂ ಬಳಸುವುದನ್ನು ನಿಷೇಧಿಸಲಾಗಿದೆ ಎಂದು ಅವರು ನೀಡಿರುವ ಪ್ರಕಟಣೆಯಲ್ಲಿ



ತಿಳಿಸಿದ್ದಾರೆ.

ದೀಪಾವಳಿ ಹಬ್ಬದ ಆಚರಣೆಯ ಸಂದರ್ಭದಲ್ಲಿ ಪಟಾಕಿ ಸಿಡಿಸುವುದು ವಾಡಿಕೆಯಾಗಿದ್ದರೂ ಪಟಾಕಿ ತಯಾರಿಕೆಯಲ್ಲಿ ಅನೇಕ ರಾಸಾಯನಿಕಗಳನ್ನು ಬಳಕೆ ಮಾಡಲಾಗುತ್ತಿದೆ. ಪಟಾಕಿ ಸಿಡಿಸಿದ ಮೇಲೆ ಅದರಿಂದ ಬಿಡುಗಡೆಯಾಗುವ ರಾಸಾಯನಿಕ ವಸ್ತುಗಳು ವಾತಾವರಣದಲ್ಲಿ ಬಿಡುಗಡೆಗೊಂಡು ವಾಯುಮಾಲಿನ್ಯಕ್ಕೆ ಕಾರಣವಾಗುತ್ತಿದೆ. ಈ ನಿಟ್ಟಿನಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಪಟಾಕಿಗಳಿಗೆ ಸಂಬಂಧಿಸಿದಂತೆ, ರಿಟ್ ಪಿಟಿಷನ್(ಸಿ) ನಂ.728/2015 ರಲ್ಲಿ ದಿನಾಂಕ:23/10/2018 ಮತ್ತು ದಿನಾಂಕ:31/10/2018 ಹಾಗೂ ತದನಂತರ ಹಲವಾರು ನಿರ್ದೇಶನಗಳನ್ನು ನೀಡಿದ್ದು, ಈ ಆದೇಶದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಮಯ ರಾತ್ರಿ 8 ಗಂಟೆಯಿಂದ ರಾತ್ರಿ 10 ಗಂಟೆಯವರೆಗೆ ಮಾತ್ರ ಪಟಾಕಿಗಳನ್ನು ಸಿಡಿಸಲು ಅವಕಾಶ ನೀಡಿದೆ. ಇದಲ್ಲದೆ ಮಾನ್ಯ ಸರ್ವೋಚ್ಚ ನ್ಯಾಯಾಲಯವು ತನ್ನ ನಿರ್ದೇಶನಗಳಲ್ಲಿ ಅನುಮತಿಸಿರುವ ಹಸಿರು ಪಟಾಕಿಗಳನ್ನು ಬಿಟ್ಟು ಉಳಿದ ಯಾವುದೇ ಇತರೆ ಪಟಾಕಿಗಳ ಮಾರಾಟ ಹಾಗೂ ಬಳಕೆಯನ್ನು ಸಹ ನಿಷೇಧಿಸಿದೆ. ಹಸಿರು ಪಟಾಕಿ ಕುರಿತು ಸರ್ಕಾರದ ಆದೇಶ ಸಂಖ್ಯೆ: ಆರ್ಡಿ 465 ಟಿಎನ್‌ಆರ್ 2020 ದಿನಾಂಕ:12/11/2020ರಲ್ಲಿ ವಿವರಣೆಯನ್ನು ನೀಡಲಾಗಿದ್ದು, ರಾಜ್ಯ ಪರಿಸರ ಮತ್ತು ಜೀವಿ ಪರಿಸ್ಥಿತಿ ಇಲಾಖೆಯು ತನ್ನ ಆದೇಶ ಸಂಖ್ಯೆ ಎಫ್‌ಇಇ:46 ಇಎನ್‌ವಿ:2000, ಬೆಂಗಳೂರು ದಿನಾಂಕ :29.01.2004 ರಂತೆ ಪ್ರತಿ ಜಿಲ್ಲೆಯಲ್ಲಿ ಈಗಾಗಲೇ ಸ್ಥಾಪಿತಗೊಂಡಿರುವ ಜಿಲ್ಲಾ ಪರಿಸರ ಸಂರಕ್ಷಣಾ ಪ್ರಾಧಿಕಾರಕ್ಕೆ ಶಬ್ದ ಮಾಲಿನ್ಯ ನಿಯಂತ್ರಣ ಕಾರ್ಯವನ್ನು ವಹಿಸಲಾಗಿದೆ ಎಂದು ಈ ಸಂಬಂಧದ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

# ರಾಷ್ಟ್ರಭಕ್ತಿ ಜಾಗೃತಿ ಮೂಡಿಸಿದ ಆರ್‌ಎಸ್‌ಎಸ್ ಶತಾಬ್ದಿ ಸಂಚಲನ



**ಚಿಕ್ಕಮಗಳೂರು:** ರಾಷ್ಟ್ರೀಯ ಸ್ವಯಂ ಸೇವಕ ಸಂಘಕ್ಕೆ 100 ವರ್ಷಗಳಾಗುತ್ತಿರುವ ಹಿನ್ನೆಲೆಯಲ್ಲಿ ನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಂಘದ ಶತಾಬ್ಧಿ ಸಂಚಲನವು ಸಾರ್ವಜನಿಕರಲ್ಲಿ ರಾಷ್ಟ್ರಭಕ್ತಿಯ ಜಾಗೃತಿ ಮೂಡಿಸಿತು.

ನಗರದ ಜೆವಿಎಸ್ ಶಾಲೆ ಆವರಣದಿಂದ ಸಂಘದ ಸಮವಸ್ತ್ರ ಧರಿಸಿ, ದಂಡ ಹಿಡಿದು ಶಿಸ್ತಿನ ಹೆಜ್ಜೆ ಹಾಕಿದ ಸಹಸ್ರಾರು ಸ್ವಯಂ ಸೇವಕರು, ಸಂಘ ಶಕ್ತಿಯನ್ನು ಅನಾವರಣಗೊಳಿಸಿದರೆ, ರಸ್ತೆ ಇಕ್ಕೆಲಗಳಲ್ಲಿ ನಿಂತು ಗಣವೇಷಧಾರಿಗಳಿಗೆ ಪುಷ್ಪಾರ್ಚನೆ ಮಾಡಿದ ಮಹಿಳೆಯರು, ಮಕ್ಕಳಾದಿಯಾಗಿ ಸಾರ್ವಜನಿಕರು ಸಂಘ ಶತಾಬ್ಧಿಯ ಸಂಚಲನಕ್ಕೆ ಸಾಕ್ಷಿಯಾದರು.

ಜೆವಿಎಸ್ ಶಾಲೆಯಿಂದ ವಿಜಯಪುರ ಮುಖ್ಯರಸ್ತೆ ಮಾರ್ಗವಾಗಿ ಹನುಮಂತಪ್ಪ ವೃತ್ತದಿಂದ ಎಂ.ಜಿ ರಸ್ತೆ ಮುಖಾಂತರ ಪಥಸಂಚಲನವು ಬೇಲೂರು ರಸ್ತೆಯ ಸರ್ಕಾರಿ ಪದವೀಪೂರ್ವ ಕಾಲೇಜನ್ನು ತಲುಪಿತು.

ಎಂ.ಜಿ ರಸ್ತೆಯ ಆರಂಭದಿಂದ ಕೊನೆಯವರೆಗೂ ಅಂಗಡಿ ಮುಂಗಟ್ಟುಗಳ ಮಾಲೀಕರು, ಸ್ವಯಂಪ್ರೇರಿತರಾಗಿ ಎರಡು ಬದಿಯಲ್ಲಿ ನಿಂತು ಸ್ವಯಂಸೇವಕರಿಗೆ ಪುಷ್ಪಾರ್ಚನೆ ಮಾಡಿದರು. ಮಹಿಳೆಯರು, ಮಕ್ಕಳು, ವೃದ್ಧರು ದೂರದಿಂದಲೇ ಕೈಮುಗಿದರೆ ಇನ್ನೂ ಕೆಲವರು ಭಾರತ್ ಮಾತಾಕಿ ಜೈ ಎಂಬ ಘೋಷಣೆಗಳು ಮೊಳಗಿಸಿ ಆರ್‌ಎಸ್‌ಎಸ್‌ಗೆ ಗೌರವ ಸೂಚಿಸಿದರು.

# ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಸಮಸ್ಯೆ ಪರಿಹರಿಸುವ ವಿಶ್ವಾಸ ಪೆಟ್ಟಿಗೆ: ಶಾಸಕಿ ನಯನ

**ಚಿಕ್ಕಮಗಳೂರು:** ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಹಾಗೂ ಬಾಲಕಿಯರು, ಬಾಲಕರು ಅನುಭವಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಕಂಡುಕೊಳ್ಳುವುದು ಭದ್ರಬಾಲ್ಯದ ಮೂಲ ಆಶಯವಾಗಿದೆ ಎಂದು ಮೂಡಿಗೆರೆ ಶಾಸಕಿ ನಯನ ಮೋಟಮ್ಮ ಹೇಳಿದರು.

ತಾಲ್ಲೂಕಿನ ಮುಗುಳುವಳ್ಳಿ ಗ್ರಾ.ಪಂ. ವ್ಯಾಪ್ತಿಯ ವಿದ್ಯಾರ್ಥಿ ಪ್ಯಾರಾ ಮೆಡಿಕಲ್ ಕಾಲೇಜಿನಲ್ಲಿ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿ ಸಹಯೋಗದಲ್ಲಿ ಆಯೋಜಿಸಿದ್ದ ‘ಭದ್ರಬಾಲ್ಯ’ ಯೋಜನೆ ಅನುಷ್ಠಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆ ರಾಜ್ಯದಲ್ಲೇ ಪೋಕ್ಸೋ ಪ್ರಕರಣದಲ್ಲಿ ಮೊದಲನೇ ಸ್ಥಾನ ಹಾಗೂ ಬಾಲ್ಯವಿವಾಹದಲ್ಲಿ ಮೂರನೇ ಸ್ಥಾನ ಪಡೆದುಕೊಂಡು ತಲೆತಗ್ಗಿಸುವಂತಾಗಿದೆ. ಹೀಗಾಗಿ ಈ ಸಮಸ್ಯೆಗಳನ್ನು ತಡೆಗಟ್ಟುವ ಸಲುವಾಗಿ ಸರ್ಕಾರ ಭದ್ರಬಾಲ್ಯ ಯೋಜನೆ ಜಾರಿಗೊಳಿಸಿ ಶೋಷಿತರು, ಬಾಲ್ಯ ಗರ್ಭಿಣಿಯರನ್ನು ಕಾಪಾಡಲು ಮುಂದಾಗಿದೆ ಎಂದರು.

ಸಮಾಜದಲ್ಲಿ ಶೇ.80ರಷ್ಟು ಮಹಿಳೆಯರು ಲೈಂಗಿಕ ಕಿರುಕುಳಕ್ಕೆ ಒಳಗಾಗಿರಬಹುದು. ಆದರೆ ಈ ವಿಷಯಗಳನ್ನು ಹೇಳಿಕೊಳ್ಳಲು ಸಾಧ್ಯವಾಗುವುದಿಲ್ಲ. ಶಾಲಾ ವಿದ್ಯಾರ್ಥಿನಿಯರು ಪಾಲಕರಲ್ಲೂ ಹೇಳಿಕೊಳ್ಳುವುದು ಕಷ್ಟಸಾಧ್ಯವಾಗಿದೆ. ಇಂಥ ಸಮಸ್ಯೆಗಳನ್ನು ಬಗೆಹರಿಸಲು ಸಲುವಾಗಿ ಮುಗುಳುವಳ್ಳಿ ಗ್ರಾ.ಪಂ.ನಿಂದ ವಿಶ್ವಾದ ಪೆಟ್ಟಿಗೆ ಪ್ರಾಯೋಗಿಕವಾಗಿ ಇರಿಸಿದ್ದು, ಮುಂದೆ ಜಿಲ್ಲೆಯ 226 ಗ್ರಾ.ಪಂ.ಗಳಲ್ಲಿ ಅನುಷ್ಠಾನಗೊಳಿಸುತ್ತೇವೆ ಎಂದರು.

ಭದ್ರಬಾಲ್ಯ ಯೋಜನೆ ಕೇವಲ ಹೆಣ್ಣುಮಕ್ಕಳಿಗೆ



ಸೀಮಿತಗೊಳ್ಳದೆ 18 ವರ್ಷದೊಳಗಿನ ಗಂಡುಮಕ್ಕಳಿಗೆ ಅನ್ವಯವಾಗಲಿದೆ. ಈ ಸಮಸ್ಯೆಯಿಂದ ಬಳಲುತ್ತಿರುವ ಮಕ್ಕಳು ಮುಕ್ತವಾಗಿ ಹೇಳಿಕೊಳ್ಳಲು ರಾಜ್ಯ ಸರ್ಕಾರ ಯೋಜನೆ ಜಾರಿಗೊಳಿಸಿದ್ದು, ಈ ಕಾರ್ಯಕ್ರಮ ಕೇವಲ ಪತ್ರಿಕೆಗಳಲ್ಲಿ ಪ್ರಚಾರಕ್ಕೆ ಸೀಮಿತವಾಗದೇ ಎಲ್ಲೆಡೆ ತಲುಪಿಸುವ ಜವಾಬ್ದಾರಿ ಜನತೆಯ ಮೇಲಿದೆ ಎಂದು ಹೇಳಿದರು.

ವಿಶ್ವಾದ ಪೆಟ್ಟಿಗೆ ಕ್ಷೇತ್ರದ ಪ್ರತಿ ಶಾಲೆಗಳಲ್ಲಿ ತಮ್ಮ ನೇತೃತ್ವದಲ್ಲಿ ಅಳವಡಿಸಲು ತೀರ್ಮಾನಿಸಲಾಗಿದೆ. ಅದರಂತೆ ಈ ಪೆಟ್ಟಿಗೆ ತೆರೆಯಲು ಮೂರು ಜನರ ತಂಡವಿದೆ. ಜೊತೆಗೆ ಕಾರ್ಯಪಡೆಗಳ ಜೊತೆಗೂಡಿ ಮಕ್ಕಳ ಸಮಸ್ಯೆ ಬಗ್ಗೆ ಚರ್ಚಿಸಿ ಯಾವ ಮಟ್ಟದಲ್ಲಿ ಬಗೆಹರಿಸಲು ತೀರ್ಮಾನಿಸಬಹುದು ಎಂಬ ಕುರಿತು ಮುಗುಳುವಳ್ಳಿ ಪ್ರಪ್ರಥಮವಾಗಿ ಈ ಯೋಜನೆ ಜಾರಿಗೊಳಿಸಿ ಸುಭದ್ರ ಗ್ರಾ.ಪಂ.ಗೆ ಪಾತ್ರವಾಗಿದೆ ಎಂದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೀರ್ತನಾ ಮಾತನಾಡಿ, ದೈನಂದಿನ ಚಟುವಟಿಕೆಯಲ್ಲಿ ಹೆಣ್ಣುಮಕ್ಕಳು ಕಿರಾಣಿ ಅಂಗಡಿ, ಬಸ್‌ಗಳಲ್ಲಿ ತೆರಳುವಾಗ ಲೈಂಗಿಕ ದೌರ್ಜನ್ಯಕ್ಕೆ ಒಳಗಾಗುತ್ತಾರೆ. ಇದು ವೈಯಕ್ತಿಕವಾಗಿ ಬಹಳಷ್ಟು ಸಮಸ್ಯೆ ಎದುರಾದರೆ ಹೇಳಿಕೊಳ್ಳಲಾರದಂಥ ಸ್ಥಿತಿ ನಿರ್ಮಾಣಗೊಂಡಿವೆ. ಈ ಕಾರಣದಿಂದಲೇ ವಿಶ್ವಾಸ ಪೆಟ್ಟಿಗೆಯಲ್ಲಿ ಮಕ್ಕಳು ಸಮಸ್ಯೆ ಹೇಳಿಕೊಳ್ಳಬಹುದು ಎಂದು ಹೇಳಿದರು.

ಇತ್ತೀಚಿನ ದಿನದಲ್ಲಿ ಬಾಲ್ಯದಲ್ಲೇ ಗರ್ಭಿಣಿಯಾಗುವ ಪ್ರಕರಣಗಳು ಹೆಚ್ಚುತ್ತಿವೆ. ಆ ನಿಟ್ಟಿನಲ್ಲಿ ಮಕ್ಕಳ ಭಾವನೆಯಲ್ಲೇ ಬದಲಾವಣೆ ತರಲು ಪ್ರಯತ್ನಿಸಲಾಗುತ್ತಿದೆ. ಹೀಗಾಗಿ ಸರ್ಕಾರವು ಭದ್ರಬಾಲ್ಯ ಯೋಜನೆಯಡಿ ಅನುಷ್ಠಾನಕ್ಕೆ ತಂದು ಜಾರಿಗೊಳಿಸಿ ಹೆಣ್ಣುಮಕ್ಕಳ ಲೈಂಗಿಕ ದೌರ್ಜನ್ಯ ಸಮಸ್ಯೆಗಳನ್ನು ಸರಿಪಡಿಸಲು ಮುಂದಾಗಿದೆ ಎಂದು ತಿಳಿಸಿದರು.

ಮುಗುಳುವಳ್ಳಿ ಗ್ರಾ.ಪಂ. ಪಿಡಿಓ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯ 226 ಗ್ರಾ.ಪಂ.ಗಳ ಪೈಕಿ ಮುಗುಳುವಳ್ಳಿ ಗ್ರಾ.ಪಂ. ಮೊದಲ ಭಾರಿಗೆ ಭದ್ರಬಾಲ್ಯ ಯೋಜನೆ ಜಾರಿಗೊಳಿಸಿ ಹೆಣ್ಣುಮಕ್ಕಳ ರಕ್ಷಣೆಗೆ ಮುಂದಾಗುವ ಜೊತೆಗೆ ಸಮಸ್ಯೆಗಳಿದ್ದಲ್ಲಿ ವಿಶ್ವಾಸ ಪೆಟ್ಟಿಗೆ ಹಾಗೂ ಮಕ್ಕಳ ಕನಸನ್ನು ತಿಳಿಯಲು ಕನಸಿನ ಪೆಟ್ಟಿಗೆ ಇರಿಸಿ ಪ್ರಾಯೋಗಿಕವಾಗಿ ಚಾಲನೆ ನೀಡಲಾಗಿದೆ ಎಂದರು.

ಗ್ರಾ.ಪಂ. ವ್ಯಾಪ್ತಿಯಲ್ಲಿ ಹೆಣ್ಣು ಮಕ್ಕಳು ಶೇ.90ರಷ್ಟು ಅಂಕ ಗಳಿಸಿದರೆ ವಿದ್ಯಾರ್ಥಿವೇತನ, ಅನಾಥ ಮಗುವಿಗೆ ಮಾಸಿಕ 250 ರೂ., ಏಕಮಾತ್ರ ಪಾಲಕರ ಮಕ್ಕಳಿಗೆ ಪ್ರಧಾನಮಂತ್ರಿ ಜೀವವಿಮೆಯಡಿ ಜೀವವಿಮೆ, ವಿಶೇಷಚೇತನ ಮಕ್ಕಳಿಗೆ ಮಾಶಾಸನ ಹಾಗೂ ಅಪೌಷ್ಠಿಕತೆಯಿಂದ ನರಳುವ ಮಕ್ಕಳಿಗೆ ಪೌಷ್ಠಿಕ ಆಹಾರ ವಿತರಣೆ ಕಾರ್ಯಕ್ರಮವನ್ನು ಗ್ರಾ.ಪಂ. ಮಾಡಿಕೊಂಡು ಬರುತ್ತಿದೆ ಎಂದರು.

ಈ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವಿಜಯ್‌ಕುಮಾರ್, ಗ್ರಾ.ಪಂ.ಅಧ್ಯಕ್ಷೆ ಶೃತಿ, ಉಪಾಧ್ಯಕ್ಷ ಮಲ್ಲೇಶ್, ಅಂಬಳೆ ಹೋಬಳಿ ಕಾಂಗ್ರೆಸ್ ಅಧ್ಯಕ್ಷ ವಿಜಯ್‌ಕುಮಾರ್, ಗ್ಯಾರಂಟಿ ಸದಸ್ಯರಾದ ಬಸವರಾಜ್, ಸಂತೋಷ್, ಗ್ರಾ.ಪಂ. ಸದಸ್ಯರಾದ ಉಮೇಶ್, ಶೇಖರ್, ವನಿತಾ, ಸವಿತಾ, ಭಾಗ್ಯ, ರಘುನಂದನ್, ಕಾಲೇಜು ಸಂಸ್ಥಾಪಕ ಇಂದುಕುಮಾರ್ ಮತ್ತಿತರರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**